ಸಂಪುಟ: ೦೭/ ಸಂಚಿಕೆ: ೧೭೪/ ಶನಿವಾರ ದಿನಾಂಕ : ೩೦-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 174/ SATURDAY Date : 30-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## 159 ಹಳ್ಳಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ : ಡಿ.ಕೆ.ಶಿವಕುಮಾರ್

**ಮಾಗಡಿ,** : ಮಾಗಡಿಗೆ ಶ್ರೀರಂಗ ಕುಡಿಯುವ ನೀರಿನ ಯೋಜನೆ ನೀಡಿದ್ದು ಕಾಂಗ್ರೆಸ್ ಸರಕಾರ. ಈಗ ಸತ್ತೇಗಾಲದಿಂದ ಕ್ಷೇತ್ರದ 44 ಕೆರೆಗಳಿಗೆ ಕಾವೇರಿ ನೀರು ತುಂಬಿಸುವ ಯೋಜನೆ, 159 ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ, ಮಂಚನಬೆಲೆ ಅಣೆಕಟ್ಟು ಕೆಳಭಾಗದ ಅಭಿವೃದ್ಧಿಗೆ 13 ಕೋಟಿ ರೂ., 35 ಕೋಟಿ ರೂ.ವೆಚ್ಚದಲ್ಲಿ ರಸ್ತೆ, ಚರಂಡಿ ಅಭಿವೃದ್ಧಿ ಸೇ–ರಿದಂತೆ ನೀರಾವರಿ ಇಲಾಖೆಯಿಂದ ಕ್ಷೇತ್ರದ ಅಭಿವೃದ್ಧಿಗೆ 100 ಕೋಟಿ ರೂ.ಗಳಿಗೂ ಅಧಿಕ ಅನುದಾನ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಶುಕ್ರವಾರ ಬೆಂಗಳೂರು ದಕ್ಷಿಣ ಜಿಲ್ಲೆಯ ಮಾಗಡಿಯಲ್ಲಿ ನಡೆದ ವಿವಿಧ ಇಲಾಖೆಗಳ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಸಮಾರಂಭದಲ್ಲಿ ಮಾತನಾಡಿದ ಅವರು, ಮಾಗಡಿ ಯೋಜನಾ ಪ್ರಾಧಿಕಾರದಿಂದ ಗೌರಮ್ಮ ಕೆರೆ ಅಭಿವೃದ್ಧಿಗೆ 20 ಕೋಟಿ ರೂ. ನೀಡಲಾಗಿದೆ. ಇ ಸ್ವತ್ತನ್ನು 1200 ಜನರಿಗೆ ವಿತರಣೆ ಮಾಡಲಾಗಿದ್ದು, ಉಳಿದವರಿಗೂ ಶೀಘ್ರದಲ್ಲೆ ವಿತರಣೆ ಮಾಡಲಾಗುವುದು. ಸುಮ್ಮನಹಳ್ಳಿಯಿಂದ ತಾವರೆಕೆರೆವರೆಗೆ ಮೆಟ್ರೋ ಮಾರ್ಗ ವಿಸ್ತರಣೆಯಾಗಲಿದೆ. ಇದರಿಂದ ನಿಮ್ಮ ಕ್ಷೇತ್ರಕ್ಕೆ ಹೆಚ್ಚು ಲಾಭವಾಗಲಿದೆ ಎಂದು ಅವರು ತಿಳಿಸಿದರು.

ಆರೋಗ್ಯ ಕ್ಷೇತ್ರದಿಂದ 40 ಕೋಟಿ ರೂ. ವೆಚ್ಚದ ಕಾಮಗಾರಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತು ನೂತನ ಬಸ್ ನಿಲ್ದಾಣ ಹಾಗೂ ಡಿಪೋ ಬಗ್ಗೆ



ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ವಾಗ್ದಾನ ನೀಡಿದ್ದಾರೆ. ನಾವು ಭಾವನೆ ಮೇಲೆ ರಾಜ–ಕಾರಣ ಮಾಡುವುದಿಲ್ಲ. ಬದುಕಿನ ಮೇಲೆ ರಾಜಕಾರಣ ಮಾಡುತ್ತೇವೆ ಎನ್ನುವುದಕ್ಕೆ ಕ್ಷೇತ್ರದಲ್ಲಿ ಕೈಗೆತ್ತಿಕೊಂಡಿರುವ ಕೆಲಸಗಳೇ ಸಾಕ್ಷಿ ಎಂದು ಶಿವಕುಮಾರ್ ಹೇಳಿದರು.

ಕನಕಪುರದಂತೆ ಮಾಗಡಿಯೂ ನಮ್ಮ ಕ್ಷೇತ್ರ, ನಿಜವಾದ ಬಂಡೆ ಬಾಲಕೃಷ್ಣ: ನನ್ನನ್ನು ಬಂಡೆ ಎಂದು ಕರೆಯುತ್ತಾರೆ. ಆದರೆ ಕೆಂಪು ಬಂಡೆ ನಿಮ್ಮ ಬಾಲಕೃಷ್ಣ. ಇವರು ಗಟ್ಟಿಯಾಗಿ ಬಂಡೆಯಂತೆ ಕುಳಿತುಕೊಂಡು ಕ್ಷೇತ್ರದ ಕೆಲಸಗಳನ್ನು ಮಾಡಿಸಿಕೊಳ್ಳುತ್ತಾರೆ. ಎಲ್ಲೇ ಹೋದರು ಕ್ಷೇತ್ರದ ಬಗ್ಗೆ ಅರ್ಜಿ ಹಿಡಿದುಕೊಂಡು ಬರುತ್ತಾರೆ. ಕ್ಷೇತ್ರದ ಜನರ ಬಗ್ಗೆ ಕಾಳಜಿಯನ್ನಿಟ್ಟುಕೊಂಡು ಕೆಲಸ ಮಾಡುತ್ತಿದ್ದಾರೆ. ಮಾಗಡಿ ಕ್ಷೇತ್ರ ಬಾಲಕೃಷ್ಣ ಅವರದ್ದಲ್ಲ ಡಿ.ಕೆ.ಶಿವಕುಮಾರ್, ಡಿ.ಕೆ.ಸುರೇಶ್ ಅವರ ಸ್ವಂತ ಕ್ಷೇತ್ರವಿದ್ದಂತೆ. ಕನಕಪುರದಲ್ಲಿ ಯಾವ ರೀತಿ ಕೆಲಸ ಮಾಡುತ್ತಾ ಇದ್ದೇವೋ ಅದೇ ರೀತಿ ಇಲ್ಲಿಯೂ ಕೆಲಸ ಮಾಡುತ್ತೇವೆ ಎಂದು ಅವರು ಹೇಳಿದರು.

ಜನರ ಏಳಿಗೆಗೆ ಜಿಲ್ಲೆಯ ಹೆಸರು ಬದಲಾವಣೆ: ಜನ ಸಾಮಾನ್ಯರ ಬದುಕು ಏಳಿಗೆಯಾಗಬೇಕು, ಎಲ್ಲರ ಬದುಕಿನಲ್ಲಿ ಹೊಸ ರೂಪ ಕಾಣಬೇಕು, ಎಲ್ಲರ ಆಸ್ತಿ ಮೌಲ್ಯ ಹೆಚ್ಚಳವಾಗಬೇಕು ಎನ್ನುವ ಕಾರಣಕ್ಕೆ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡಿದ್ದೇವೆ. ಜನತಾದಳದ ನಾಯಕರು ದಿಲ್ಲಿಗೆ ಹೋಗಿ ಜಿಲ್ಲೆಯ ಹೆಸರು ಬದಲಾವಣೆ ಸಾಧ್ಯವಿಲ್ಲ ಎಂದು ಬರೆಸಿದ್ದರು. ಕುಮಾರಣ್ಣ ಇದರ ವಿರುದ್ಧ ಬಂದ್ ಮಾಡಿಸಿದರು. ಆದರೂ ಹೆಸರು ಬದಲಾವಣೆಗಾಗಿ ನಾನು ದೊಡ್ಡ ಹೋರಾಟ ಮಾಡಿದೆ ಎಂದು ಶಿವಕುಮಾರ್ ತಿಳಿಸಿದರು.

ಬೆಂಗಳೂರನ್ನು ಅಂತರಾಷ್ಟ್ರೀಯ ನಗರವನ್ನಾಗಿ ಮಾಡಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಾಡಿದ್ದೇವೆ, ಮೆಟ್ರೋ ಸುರಂಗಮಾರ್ಗ, ಡಬಲ್ ಡೆಕ್ಕರ್ ಹೀಗೆ ಹಲವಾರು ಯೋಜನೆ ರೂಪಿಸಿದ್ದೇವೆ ಎಂದು ಉಪ ಮುಖ್ಯಮಂತ್ರಿ ಹೇಳಿದರು.

ಸರ್ವರಿಗೂ ಸಮಬಾಳು, ಸಮಪಾಲು: ಎಸ್ ಇ ಎಸ್ ಪಿ, ಟಿಎಸ್‌ಪಿ ಅಡಿ 40 ಸಾವಿರ ಕೋಟಿ ರೂ. ಮೀಸಲಿಡಲಾಗಿದೆ. ಕಳೆದ 30 ವರ್ಷಗಳಿಂದ ನಡೆಯುತ್ತಿದ್ದ ಒಳಮೀಸಲಾತಿ ವಿಚಾರವನ್ನು ನಾವು ಬಗೆಹರಿಸಿದ್ದೇವೆ. ಇದನ್ನು ಇಡೀ ದೇಶ ಗಮನಿಸುತ್ತಿದೆ. ಸರ್ವರಿಗೂ ಸಮಪಾಲು, ಸಮಬಾಳು ಎನ್ನುವ ತತ್ವವನ್ನು ಕಾಂಗ್ರೆಸ್ ಸರಕಾರ ಅನುಸರಿಸುತ್ತಿದೆ. ಈ ರೀತಿಯ ಒಂದೇ ಒಂದು ಕೆಲಸವನ್ನು ದಳ–ಬಿಜೆಪಿಯವರು ಮಾಡಿದ್ದಾರೆಯೇ ಎಂದು ಅವರು ಪ್ರಶ್ನಿಸಿದರು.

ಕೆಂಪೇಗೌಡರು ಕಟ್ಟಿದ ಕೋಟೆ ಹಾಗೂ ಕೆಂಪಾಪುರದಲ್ಲಿನ ಅವರ ಸಮಾಧಿ ಸ್ಥಳವನ್ನು ಅಭಿವೃದ್ಧಿ ಮಾಡುವ ಕೆಲಸವನ್ನು ನಮ್ಮ ಸರಕಾರ 100 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಂಡಿದೆ. ಸುಮ್ಮನಹಳ್ಳಿಯಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಕೆಂಪೇಗೌಡರ ಭವನ ನಿರ್ಮಾಣ ಮಾಡಲಾಗುತ್ತಿದೆ. ಶಿವಕುಮಾರ ಸ್ವಾಮಿ, ಬಾಲಗಂಗಾಧರನಾಥ ಸ್ವಾಮಿ ಜನಿಸಿದ ಪುಣ್ಯಕ್ಷೇತ್ರಗಳು ಈ ಪವಿತ್ರವಾದ ಮಾಗಡಿ ಕ್ಷೇತ್ರದಲ್ಲಿವೆ. ಒಂದು ಕಾಲದಲ್ಲಿ ಈ ಕ್ಷೇತ್ರದ ತಿಪ್ಪಗೊಂಡನಹಳ್ಳಿ ಕೆರೆಯಿಂದ ಇಡೀ ಬೆಂಗಳೂರಿಗೆ ಕುಡಿಯುವ ನೀರು ನೀಡಲಾಗುತ್ತಿತ್ತು ಎಂದು ಅವರು ಸ್ಮ–ರಿಸಿದರು.

ಮಾಗಡಿ ಶಾಸಕ ಎಚ್.ಸಿ.ಬಾಲಕೃಷ್ಣ ಅಧ್ಯಕ್ಷತೆ ವಹಿಸಿದ್ದ ಸಮಾರಂಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ, ವಿಧಾನಪರಿಷತ್ ಸದಸ್ಯ ಎಸ್.ರವಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಆರ್.ಅಶೋಕ್‌ಗೆ ಬುದ್ಧಿಭ್ರಮಣೆ: 'ಧರ್ಮಸ್ಥಳ ಆಸ್ತಿ ಒಡೆಯಲು ಸರಕಾರ ಮುಂದಾಗಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಮಾಡಿರುವ ಆರೋಪ ಕುರಿತು ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಡಿಸಿಎಂ ಡಿ.ಕೆ.ಶಿವಕುಮಾರ್, ವಿಪಕ್ಷ ನಾಯಕ ಆರ್.ಅಶೋಕ್ ಗೆ ಬುದ್ಧಿ ಭ್ರಮಣೆಯಾಗಿದೆ. ಧರ್ಮಸ್ಥಳ ಆಸ್ತಿ ಒಡೆಯುವುದು ಅವರ ಪಕ್ಷದ ಆಂತರಿಕ ರಾಜಕಾರಣ' ಎಂದು ಉತ್ತರಿಸಿದರು.

## ಅಭಿಮಾನ್ ಸ್ಟುಡಿಯೋ ಜಾಗ ಹಿಂಪಡೆಯಲು ಮುಂದಾದ ರಾಜ್ಯ ಸರಕಾರ



**ಬೆಂಗಳೂರು,** : ಕನ್ನಡ ಚಿತ್ರರಂಗದ ಹಿರಿಯ ನಟ ಡಾ.ವಿಷ್ಣುವರ್ಧನ್ ಅವರ ಸಮಾಧಿ ನೆಲಸಮ ಹಿನ್ನೆಲೆ ವಿವಾದಕ್ಕೆ ಗುರಿಯಾಗಿರುವ ಅಭಿಮಾನ್ ಸ್ಟುಡಿಯೋ ಜಾಗವನ್ನು ಹಿಂಪಡೆಯಲು ರಾಜ್ಯ ಸರಕಾರ ಮುಂದಾಗಿದ್ದು, ಅದರಂತೆ ಅರಣ್ಯ ಇಲಾಖೆಯು ಬೆಂಗಳೂರು ನಗರ ಜಿಲ್ಲಾಧಿಕಾರಿಗೆ ಪತ್ರ ಬರೆದಿದೆ. ಆ.22ರಂದು ಅರಣ್ಯ ಇಲಾಖೆಯ ಉಪಸಂರಕ್ಷಣಾಧಿಕಾರಿ ರವೀಂದ್ರಕುಮಾರ್ ಅವರು, ಬೆಂಗಳೂರು ನಗರ ಜಿಲ್ಲಾಧಿಕಾರಿ ಜಗದೀಶ್ ಅವರಿಗೆ ಪತ್ರ ಬರೆದಿದ್ದು, ಬೆಂಗಳೂರು ದಕ್ಷಿಣ ತಾಲೂಕಿನ, ಕೆಂಗೇರಿ ಹೋಬಳಿಯ ಮೈಲಸಂದ್ರ ಗ್ರಾಮದ ಸರ್ವೆ ನಂ.26ರಲ್ಲಿರುವ ಅಭಿಮಾನ್ ಸ್ಟುಡಿಯೋವನ್ನು ಮುಟ್ಟುಗೋಲು ಹಾಕಿಕೊಳ್ಳಬೇಕೆಂದು ನಿರ್ದೇಶನ ಮಾಡಿದ್ದಾರೆ.

**ಏನಿದು ವಿವಾದ?:** ಕನ್ನಡ ಚಿತ್ರರಂಗದ ಹಿರಿಯ ನಟ ಟಿ.ಎನ್.ಬಾಲಕೃಷ್ಣ ಅವರಿಗೆ 1970ರಲ್ಲಿ ಸ್ಟುಡಿಯೋ ನಿರ್ಮಾಣದ ಉದ್ದೇಶಕ್ಕೆ 20 ಎಕರೆ ಭೂಮಿಯನ್ನು 20 ವರ್ಷ ಗುತ್ತಿಗೆಗೆ ನೀಡಲಾಗಿತ್ತು. ನಂತರ ಭೋಗ್ಯದ ಅವಧಿ ವಿಸ್ತರಣೆ ಮಾಡಿಕೊಳ್ಳಲಾಗಿತ್ತು. 2004ರಲ್ಲಿ ಆರ್ಥಿಕ ಸಂಕಷ್ಟದ ನೆಪ ಹೇಳಿ ಬಾಲಕೃಷ್ಣ ಅವರ ಮಕ್ಕಳಾದ ಶ್ರೀನಿವಾಸ್ ಹಾಗೂ ಗಣೇಶ್ ಜಿಲ್ಲಾಧಿಕಾರಿಗಳ ಬಳಿ 10 ಎಕರೆ ಮಾರಾಟ ಮಾಡಲು ಒಪ್ಪಿಗೆ ಕೇಳಿದ್ದರು ಎನ್ನಲಾಗಿದೆ.

ಜಿಲ್ಲಾಧಿಕಾರಿಗಳ ವಿಶೇಷ ಅಧಿಕಾರ ಬಳಸಿ ಇದ್ದನ್ನು ಮಾರಾಟ ಮಾಡಲಾಗಿದ್ದು, ಇದರಿಂದ ಬಂದ ಹಣವನ್ನು ಸ್ಟುಡಿಯೋ ಅಭಿವೃದ್ಧಿಗೆ ಮಾತ್ರ ಬಳಕೆ ಮಾಡಿಕೊಳ್ಳುವುದಾಗಿ ಸರಕಾರಕ್ಕೆ ತಿಳಿಸಿದ್ದರೆಂದು ತಿಳಿದುಬಂದಿದೆ.

ಆದರೆ ಈವರೆಗೆ ಸ್ಟುಡಿಯೋ ಯಥಾಸ್ಥಿತಿಯಲ್ಲೇ ಇದೆ. ಇದರ ಅಭಿವೃದ್ಧಿಯಾಗಿಲ್ಲ. ಈಗ ಬಾಲಕೃಷ್ಣ ಸಂಬಂಧಿ ಕಾರ್ತಿಕ್ ಈ ಜಮೀನನ್ನು ಮಾರಾಟಕ್ಕೆ ಯೋಜನೆ ಮಾಡಿದ್ದರು. ಈ ವಿಚಾರ ಅರಣ್ಯಾಧಿಕಾರಿಗೆ ಗೊತ್ತಾಗಿದ್ದು, ಇದನ್ನು ವಶಕ್ಕೆ ಪಡೆಯುವಂತೆ ಅವರು ಜಿಲ್ಲಾಧಿಕಾರಿಗಳಿಗೆ ಕೋರಿದ್ದಾರೆ.

**ಅರಣ್ಯ ಇಲಾಖೆ ಪತ್ರದಲ್ಲಿ ಏನಿದೆ?**

ಬೆಂಗಳೂರು ದಕ್ಷಿಣ ತಾಲೂಕಿನ, ಕೆಂಗೇರಿ ಹೋಬಳಿಯ ಮೈಲಸಂದ್ರ ಗ್ರಾಮದ ಸರ್ವೆ ನಂ. 26ರಲ್ಲಿರುವ ಈ ಭೂಮಿಯನ್ನು ನೀಡುವಾಗ ವಿಧಿಸಲಾಗಿದ್ದ ಷರತ್ತುಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಲಾಗಿದೆ ಮತ್ತು ಭೂಮಿಯನ್ನು ಅಕ್ರಮವಾಗಿ ಪರಭಾರೆ ಮಾಡಲಾಗಿದೆ.

ಮಾರಾಟಕ್ಕೆ ಅನುಮತಿ ಪಡೆದರೂ, ಸ್ಟುಡಿಯೋವನ್ನು ಅಭಿವೃದ್ಧಿಪಡಿಸುವ ಯಾವುದೇ ಕಾಮಗಾರಿಗಳನ್ನು ಕೈಗೊಂಡಿಲ್ಲ.

ಅನುಮತಿ ಪಡೆದಿದ್ದ 10 ಎಕರೆ ಬದಲು 12 ಎಕರೆ ಪ್ರದೇಶವನ್ನು ಮಾರಾಟ ಮಾಡಲಾಗಿದೆ.

## ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಕೈಗಾರಿಕಾ ಸ್ಪಂದನ ಸಭೆ: ಸಮಸ್ಯೆಗಳ ನಿವಾರಣೆಗೆ ಗಡುವು



**ಬೆಳಗಾವಿ** : ಜಿಲ್ಲೆಯ ಕೈಗಾರಿಕೆಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಮೊಹ್ಮದ್ ರೋಷನ್ ಅಧ್ಯಕ್ಷತೆಯಲ್ಲಿ ಶುಕ್ರವಾರ ಮಹತ್ವದ ಸಭೆ ನಡೆದಿದ್ದು, ಸಮಸ್ಯೆಗಳಿಗೆ ಸಮಯಮಿತಿಯಲ್ಲಿ ಸ್ಪಂದಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ಫೌಂಡ್ರಿ ಕ್ಲಸ್ಟರ್ ಸಭಾಭವನದಲ್ಲಿ ನಡೆದ ಸಭೆಯಲ್ಲಿ, ಕೈಗಾರಿಕಾ ಸ್ಪಂದನೆ (ಗ್ರಿವೆನ್ಸಿಸ್), ಏಕಗವಾಕ್ಷಿ, ಸಿಎಸ್‌ಆರ್ ಫಂಡ್, ಸ್ಕಿಲ್ ಡೆವಲಪ್ ಮೆಂಟ್, ಪಿಎಂ ವಿಶ್ವಕರ್ಮ ಯೋಜನೆ, ಪ್ರಧಾನ ಮಂತ್ರಿ ಉದ್ಯೋಗ ಸೃಜನೆ ಯೋಜನೆ ವಿಷಯಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು.

ವಿಶೇಷವಾಗಿ, ಕೈಗಾರಿಕೆ ಪ್ರದೇಶದ ಕುರಿತಂತೆ ಮಹಾನಗರ ಪಾಲಿಕೆಯ ನಿರ್ಲಕ್ಷ್ಯದ ಕುರಿತು ಸಭೆಯಲ್ಲಿ ತೀವ್ರ ಆಕ್ಷೇಪಗಳು ಕೇಳಿಬಂದವು.

ಪದೇ ಪದೇ ವಿದ್ಯುತ್ ವ್ಯತ್ಯಯವಾಗುವುದರಿಂದ ಆಗುತ್ತಿರುವ ಸಮಸ್ಯೆಗಳ ಕುರಿತು ಕೈಗಾರಿಕೋದ್ಯಮಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ಕುರಿತು ಗಂಭೀರ ಚರ್ಚೆ ನಡೆಸಿದ ಜಿಲ್ಲಾಧಿಕಾರಿಗಳು, 2 ಫೀಡರ್ ಲೈನ್ ಬದಲಿಸುವಂತೆ ಮತ್ತು ಅಗತ್ಯವಾದ ಸ್ಥಳಗಳಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಸುವಂತೆ ಕಟ್ಟು ನಿಟ್ಟಿನ ನಿರ್ದೇಶನ ನೀಡಿದರು. ಬೀದಿ ದೀಪಗಳ ನಿರ್ವಹಣೆ ಸಹ ಸರಿಯಾಗಿ ಆಗುತ್ತಿಲ್ಲ ಎಂದು ದೂರಲಾಯಿತು. ಸೆಪ್ಟಂಬರ್ 15ಕ್ಕೆ ಪುನಃ ಸಭೆ ನಡೆಸಿ ಈ ಕುರಿತ ಪ್ರಗತಿ ಪರಿಶೀಲನೆ ಮಾಡುವುದಾಗಿ ಜಿಲ್ಲಾಧಿಕಾರಿ ತಿಳಿಸಿದರು.

ಇ ಖಾತಾ ಸಮಸ್ಯೆಗಳ ಕುರಿತು ಸರಕಾರದ ಮಟ್ಟದಲ್ಲಿ ತುರ್ತಾಗಿ ಕ್ರಮವಾಗಬೇಕು. ಇದರಿಂದಾಗಿ ಕೈಗಾರಿಕೆಗಳು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿವೆ ಎನ್ನುವುದನ್ನು ಸಭೆಯ ಗಮನಕ್ಕೆ ತರಲಾಯಿತು. ಕೈಗಾರಿಕೆ ಪ್ರದೇಶದಲ್ಲಿ ಕಸ ವಿಲೇವಾರಿ ಸರಿಯಾಗಬೇಕು. ಎಲ್ಲೆಂದರಲ್ಲಿ ಕೊಳಚೆ ನೀರು ತುಂಬಿಕೊಂಡಿದ್ದು, ಚರಂಡಿಗಳ ಸ್ವಚ್ಛತೆ ಕುರಿತು ಗಮನ ಹರಿಸಬೇಕು ಎಂದು ಕೈಗಾರಿಕೋದ್ಯಮಗಳು ಆಗ್ರಹಿಸಿದರು.

ತೆರಿಗೆ ಪದ್ಧತಿ ಕುರಿತು ಮಹಾನಗರ ಪಾಲಿಕೆ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳಬೇಕು, ಈ ಕುರಿತು ಇರುವ ನಿಯಮಗಳನ್ನು ಸ್ಪಷ್ಟಪಡಿಸಬೇಕು. ಟ್ರೇಡ್ ಲೈಸೆನ್ಸ್ ಕುರಿತಂತೆ ಪಾಲಿಕೆಯಿಂದ ಬಹಳಷ್ಟು ಗೊಂದಲ ಉಂಟಾಗುತ್ತಿದೆ ಎನ್ನುವುದನ್ನು ಗಮನಕ್ಕೆ ತರಲಾಯಿತು.

ಕರ್ನಾಟಕ ಸಣ್ಣ ಕೈಗಾರಿಕಾ ಅಭಿವೃದ್ಧಿ ಮಂಡಳಿಯ ಸ್ಕ್ರಾಕ್ ಯಾರ್ಡ ಮತ್ತು ಕಣಬರ್ಗಿ ಇಂಡಸ್ಟ್ರಿಯಲ್ ಎಸ್ಟೇಟ್ ಹಸ್ತಾಂತರ ಪ್ರಕ್ರಿಯೆಯನ್ನು ತಕ್ಷಣ ಪೂರ್ಣಗೊಳಿಸಿ, ನಂತರ ತೆರಿಗೆ ಸಂಗ್ರಹಿಸುವಂತೆ ಸೂಚನೆ ನೀಡಲಾಯಿತು.

ಬೆಳಗಾವಿ ಉತ್ತರ ಭಾಗದಲ್ಲಿ ಅಗ್ನಿಶಾಮಕ ದಳ ಸ್ಥಾಪಿಸಲು ಜಾಗ ಗುರುತಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಹೊನಗಾ ಕೈಗಾರಿಕಾ ಪ್ರದೇಶದಿಂದ ನೇರವಾಗಿ ಹೆದ್ದಾರಿಗೆ ವಾಹನ ಇಳಿಯಬೇಕಿರುವುದ–ರಿಂದ ಅಪಘಾತಗಳು ಉಂಟಾಗುತ್ತಿವೆ. ಹಾಗಾಗಿ ಹಂಪ್ಸ್ ಹಾಕುವಂತೆ ಮತ್ತು ಸರ್ವಿಸ್ ರಸ್ತೆ ಮೂಲಕ ವಾಹನ ಹೆದ್ದಾರಿಗೆ ಬರುವಂತೆ ಮಾಡುವ ಕುರಿತು ಪರಿಶೀಲನೆ ನಡೆಸಲು ಪ್ರೊಬೇಶನರ್ ಐಎಎಸ್ ಅಧಿಕಾರಿ ಅಭಿನವ ಜೈನ್ ಅವರಿಗೆ ಸೂಚಿಸಲಾಯಿತು. ಕಣಗಲಾ ಇಂ–ಡಸ್ಟ್ರಿಯಲ್ ಏರಿಯಾಕ್ಕೆ ಅಂಡರ್ ಪಾಸ್ ಮಾಡುವಂತೆ ತಿಳಿಸಲಾಯಿತು.

ಕೈಗಾರಿಕೆಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತಂತೆ ಬೆಳಗಾವಿ ಚೆಂಬರ್ ಆಫ್ ಕಾಮರ್ಸ್ ಆಯಂಡ್ ಇಂ–ಡಸ್ಟ್ರೀಸ್ ವತಿಯಿಂದ ಮನವಿ ಸಲ್ಲಿಸಲಾಯಿತು. ಎಲ್ಲ ಸಮಸ್ಯೆಗಳಿಗೂ ಕಾಲಮಿತಿಯಲ್ಲಿ ಸ್ಪಂದಿಸುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದರು. ಸಾಮಾನ್ಯವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯುತ್ತಿದ್ದ ಸಭೆಯನ್ನು ಕೈಗಾರಿಕೆಗಳಿರುವ ಪ್ರದೇಶದಲ್ಲೇ ನಡೆಸಿದ ಜಿಲ್ಲಾಧಿಕಾರಿಗಳ ಕ್ರಮಕ್ಕೆ ಮತ್ತು ಸಮಸ್ಯೆಗಳಿಗೆ ಗಂಭೀರ ಸ್ಪಂದನೆ ಮಾಡಿದ್ದಕ್ಕೆ ಚೆಂಬರ್ ಆಫ್ ಕಾಮರ್ಸ್ ಪರವಾಗಿ ಜಿಲ್ಲಾಧಿಕಾರಿಗಳಿಗೆ ಧನ್ಯವಾದ ಸಲ್ಲಿಸಲಾಯಿತು.

ಜಿಲ್ಲಾ ಪಂಚಾಯಿತಿ ಸಿಇಒ ರಾಹುಲ್ ಶಿಂಧೆ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶಕೀಲ್ ಅಹ್ಮದ್, ಮಹಾನಗರ ಪಾಲಿಕೆ ಆಯುಕ್ತೆ ಶುಭಾ, ಜಿಲ್ಲಾ ಕೈಗಾ–ರಿಕೆ ಕೇಂದ್ರದ ಜಂಟಿನಿರ್ದೇಶಕ ಸತ್ಯನಾರಾಯಣ ಭಟ್, ಪ್ರೊಬೇಶನರಿ ಐಎಎಸ್ ಅಧಿಕಾರಿ ಅಭಿನವ ಜೈನ, ಬೆಳಗಾವಿ ಚೆಂಬರ್ ಆಫ್ ಕಾಮರ್ಸ್ ಆ?ಯಂಡ್ ಇಂಡಸ್ಟ್ರೀಸ್ ಅಧ್ಯಕ್ಷ ಪ್ರಭಾಕರ ನಾಗರಮುನೋಳಿ, ಕಾರ್ಯದರ್ಶಿ ಸತೀಶ್ ಕುಲಕರ್ಣಿ, ಇನ್ನಿತರ ವಿವಿಧ ಕೈಗಾರಿಕೆಗಳ ಸಂಘದ ಪದಾಧಿಕಾರಿಗಳು ಸೇರಿದಂತೆ, ಪದಾಧಿಕಾರಿಗಳು, ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

## ಆರ್ಥಿಕ ಸ್ಥಿರತೆಯಲ್ಲಿ ಭಾರತ 3ನೇ ಅತಿದೊಡ್ಡ ರಾಷ್ಟ್ರ : ಪ್ರಧಾನಿ ಮೋದಿ

**ಟೋಕಿಯೋ(ಜಪಾನ್),** : ಭಾರತವು ರಾಜ–ಕೀಯ ಹಾಗೂ ಆರ್ಥಿಕ ಸ್ಥಿರತೆಗಳಲ್ಲಿ ಪಾರ ದರ್ಶಕತೆ ಹೊಂದಿದ್ದು ವಿಶ್ವದಲ್ಲೇ ಮೂರನೇ ಅತಿದೊಡ್ಡ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಲಿದೆ ಎಂದು ಪ್ರಧಾನಿ ನರೇಂದ್ರಮೋದಿ ತಿಳಿಸಿದರು. ಭಾರತ ಮತ್ತು ಜಪಾನ್ ನಡುವಿನ ಆರ್ಥಿಕ ವೇದಿಕೆಯಲ್ಲಿ ಮಾತನಾಡಿದ ಅವರು, ದೇಶದ ರಾಜಕೀಯ, ಆರ್ಥಿಕ ಸ್ಥಿರತೆ ನೀತಿಗಳಲ್ಲಿ ಪಾರದರ್ಶಕತೆ ಮತ್ತು ಭವಿಷ್ಯವಾಣಿಯನ್ನು ಹೊಂದಿದೆ. ಭಾರತ ಇಂದು ವಿಶ್ವದಲ್ಲೇ 3ನೇ ಅತಿದೊಡ್ಡ ರಾಷ್ಟ್ರವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಂಡವಾಳವು ಕೇವಲ ಬೆಳೆಯುವುದಿಲ್ಲ. ಅದು ಗುಣಿಸುತ್ತದೆ. ಕಳೆದ 12 ವರ್ಷಗಳಲ್ಲಿ ಆಗಿರುವ ಬೆಳವಣಿಗೆ ಮತ್ತು ಪರಿವರ್ತನೆ ಬಗ್ಗೆ ನಿಮಗೆಲ್ಲರಿಗೂ ತಿಳಿದಿದೆ. ನಾವು ಜಾಗತಿಕ ಜಿಡಿಪಿಗೆ ಶೇ.18ರಷ್ಟು ಕೊಡುಗೆ ನೀಡುತ್ತೇವೆ. ಮಾರುಕಟ್ಟೆಗಳು ಬಲವಾದ ಆದಾಯವನ್ನು ನೀಡುತ್ತದೆ. ಸುಧಾರಣೆ, ರೂಪಾಂತರ, ಕಾರ್ಯಕ್ಷಮತೆಯ ನಮ ವಿಧಾನವು ಪ್ರಗತಿಗೆ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು. ಜೆಟ್ರೊ ಹೇಳುವಂತೆ ಶೇ.80ರಷ್ಟು ಕಂಪನಿಗಳು ಭಾರತದಲ್ಲಿ ವಿಸ್ತರಿಸಲು ಬಯಸುತ್ತಿವೆ. ಶೇ.75ರಷ್ಟು ಕಂಪನಿಗಳು ಲಾಭ ಗಳಿಸುತ್ತಿವೆ. ನಮ್ಮಲ್ಲಿ ಬಂಡವಾಳ ಹೂಡಿದರೆ ಅದು ಕೇವಲ ಬೆಳೆಯುವುದಲ್ಲ ಗುಣಿಸುತ್ತಾ ಹೋಗುತ್ತದೆ. ಅಂದರೆ ನಿಮ ಹೂಡಿಕೆಗೆ ಲಾಭ ಬರುತ್ತದೆ ಎಂದು ಹೇಳಿದರು.

ಭಾರತ–ಜಪಾನ್ ಪಾಲುದಾರಿಕೆಯನ್ನು ಕಾರ್ಯತಂತ್ರ ಮತ್ತು ಬುದ್ಧಿವಂತ ಎಂದು ಬಣ್ಣಿಸಿದ ಮೋದಿ, ಆರ್ಥಿಕ ತರ್ಕದಿಂದ ಬಲಗೊಂಡು,



ನಾವು ಹಂಚಿಕೆಯ ಹಿತಾಸಕ್ತಿಗಳನ್ನು ಹಂಚಿಕೆಯ ಸಮೃದ್ಧಿಯನ್ನಾಗಿ ಪರಿವರ್ತಿಸಿದ್ದೇವೆ. ಜಾಗತಿಕ ದಕ್ಷಿಣಕ್ಕೆ ಜಪಾನಿನ ವ್ಯವಹಾರಕ್ಕೆ ಭಾರತವು ಚಿಮುವ ಹಲಗೆಯಾಗಿದೆ. ಒಟ್ಟಾಗಿ ನಾವು ಸ್ಥಿರತೆ, ಬೆಳವಣಿಗೆ ಮತ್ತು ಸಮೃದ್ಧಿಗಾಗಿ ಏಷ್ಯನ್ ಶತಮಾನವನ್ನು ರೂಪಿಸುತ್ತೇವೆ ಎಂದು ಹೇಳಿದರು. ಭಾರತದ ಅಭಿವೃದ್ಧಿಯ ಪಯಣದಲ್ಲಿ ಜಪಾನ್ ಯಾವಾಗಲೂ ಪ್ರಮುಖ ಪಾಲುದಾರ. ಮೆಟ್ರೋದಿಂದ ಉತ್ಪಾದನೆಯವರೆಗೆ, ಸೆಮಿಕಂಡಕ್ಟರ್‌ನಿಂದ ಸ್ಟಾರ್ಟ್–ಅಪ್‌ಗಳವರೆಗೆ ನಮ ಪಾಲುದಾರಿಕೆಯು ನಂಬಿಕೆಯ ಸಂಕೇತವಾಗಿದೆ. ಜಪಾನಿನ ಕಂಪನಿಗಳು ಭಾರತದಲ್ಲಿ 40 ಶತಕೋಟಿ ಡಾಲರ್‌ಗಳಿಗಿಂತ ಹೆಚ್ಚು ಹೂಡಿಕೆ ಮಾಡಿವೆ. ಕಳೆದ ಎರಡು ವರ್ಷಗಳಲ್ಲಿ 13 ಶತಕೋಟಿ ಡಾಲರ್‌ಗಳಷ್ಟು ಖಾಸಗಿ ಹೂಡಿಕೆಯಾಗಿದೆ ಎಂದು ತಿಳಿಸಿದರು. ಭಾರತದಲ್ಲಿನ ಈ ಬದಲಾವಣೆಯ ಹಿಂದೆ ಸುಧಾರಣೆ, ಕಾರ್ಯಕ್ಷಮತೆ ಮತ್ತು ರೂಪಾಂತರದ ನಮ ವಿಧಾನವಿದೆ ಎಂದ ಅವರು, ಭಾರತದ ಪ್ರಗತಿಗೆ ಅದರ ಸುಧಾರಣೆಗೆ ಮನ್ನಣೆ ನೀಡಿದರು. ರಕ್ಷಣೆ ಮತ್ತು ಬಾಹ್ಯಾಕಾಶದಲ್ಲಿನ ಹಿಂದಿನ ಸುಧಾರಣೆಗಳ ಮೇಲೆ ನಿರ್ಮಿಸುವ ಪರಮಾಣು ಇಂಧನದಂತಹ ಕ್ಷೇತ್ರಗಳನ್ನು ಖಾಸಗಿ ವಲಯದ ಭಾಗವಹಿಸುವಿಕೆಗೆ ತೆರೆಯುವ ಸರ್ಕಾರದ ನಿರ್ಧಾರವನ್ನು ಘೋಷಿಸಿದರು.

ಏಳು ವರ್ಷಗಳ ನಂತರ ಜಪಾನ್ ರಾಜಧಾನಿ ಟೋಕಿಯೋಗೆ ಮೋದಿ ಅವರು, ತಾವು ಗುಜರಾತ್ ಮುಖ್ಯಮಂತ್ರಿಯಾಗಿದ್ದ ಅವಧಿಯಿಂದಲೂ ಅನೇಕ ಜಪಾನಿನ ವ್ಯಾಪಾರ ನಾಯಕರೊಂದಿಗಿನ ತಮ ವೈಯಕ್ತಿಕ ಸಂಬಂಧಗಳನ್ನು ನೆನಪಿಸಿಕೊಂಡರು. ಜಪಾನಿನ ವ್ಯಾಪಾರ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಬನ್ನಿ ಮೇಕ್ ಇನ್ ಇಂಡಿಯಾ, ಮೇಕ್ ಫಾರ್ ದಿ ವರ್ಲ್ಡ್ ಎಂಬ ಆತೀಯ ಆಹ್ವಾನ ನೀಡಿದರು. ಜಾಗತಿಕವಾಗಿ ಉತ್ಪಾದನೆ ಮತ್ತು ನಾವೀನ್ಯತೆ ಹೆಚ್ಚಿಸಲು ಭಾರತದ ಪಾರದರ್ಶಕ ಆಡಳಿತ ಮತ್ತು ಬಲವಾದ ನೀತಿ ವಾತಾವರಣವನ್ನು ಬಳಸಿಕೊಳ್ಳುವಂತೆ ಕಂಪನಿಗಳನ್ನು ಒತ್ತಾಯಿಸಿದರು.ಪ್ರಧಾನಿಯವರ ಎರಡು ದಿನಗಳ ಭೇಟಿಯಲ್ಲಿ 15ನೇ ಭಾರತ–ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸುವುದು ಮತ್ತು ಜಪಾನಿನ ಪ್ರಧಾನಿ ಶಿಗೇರು ಇಶಿಬಾ ಅವರೊಂದಿಗೆ ಉನ್ನತ ಮಟ್ಟದ ಚರ್ಚೆಗಳು ಸೇರಿವೆ. ಜಪಾನ್ ಭಾರತದಲ್ಲಿ ತನ್ನ ಹೂಡಿಕೆ ಗುರಿಗಳನ್ನು ದ್ವಿಗುಣಗೊಳಿಸುವುದಾಗಿ ಘೋಷಿಸುವ ಮತ್ತು ವ್ಯಾಪಾರ, ರಕ್ಷಣೆ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಸಹಕಾರವನ್ನು ಹೆಚ್ಚಿಸಲು ಹೊಸ ಒಪ್ಪಂದಗಳನ್ನು ಅನಾವರಣಗೊಳಿಸುವ ನಿರೀಕ್ಷೆಯಿದೆ.

## ಆನ್‌ಲೈನ್ ಬೆಟ್ಟಿಂಗ್ ನಿಷೇಧ : ಕೇಂದ್ರ ಸರಕಾರದ ಕಾನೂನು ಪ್ರಶ್ನಿಸಿ ಹೈಕೋರ್ಟ್‌ಗೆ ರಿಟ್ ಅರ್ಜಿ

**ಬೆಂಗಳೂರು: ಆನ್‌ಲೈನ್ ಬೆಟ್ಟಿಂಗ್ ಗೇಮ್‌ಗಳ ನಿಷೇಧಕ್ಕಾಗಿ ಕೇಂದ್ರ ಸರಕಾರ ರೂಪಿಸಿರುವ ಕಾನೂನನ್ನು ರದ್ದುಪಡಿಸುವಂತೆ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದೆ.**

**ನವದೆಹಲಿಯಲ್ಲಿ ನೋಂದಾಯಿತ ಕಚೇರಿ ಹೊಂದಿರುವ 'ಹೆಡ್ ಡಿಜಿಟಲ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್' ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದು, ವಿದ್ಯುನ್ಮಾನ ಮತ್ತು ಮಾಹಿತಿ ಮತ್ತು ತಂತ್ರಜ್ಞಾನ ಸಚಿವಾಲಯವನ್ನು ಅರ್ಜಿಯಲ್ಲಿ ಪ್ರತಿವಾದಿಯನ್ನಾಗಿಸಲಾಗಿದೆ.**

**ಗುರುವಾರ ಅರ್ಜಿದಾರರ ಪರ ವಕೀಲರು ನ್ಯಾಯಮೂರ್ತಿ ಬಿ.ಎಂ. ಶ್ಯಾಮ್ ಪ್ರಸಾದ್ ಅವ–ರಿದ್ದ ಏಕಸದಸ್ಯ ನ್ಯಾಯಪೀಠದ ಮುಂದೆ ಹಾಜರಾಗಿ, ಅರ್ಜಿಯನ್ನು ತ್ವರಿತವಾಗಿ ವಿಚಾರಣೆಗೆ ಪರಿಗಣಿಸಬೇಕು ಎಂದು ಕೋರಿದರು. ಮನವಿ ಪರಿಗಣಿಸಿದ ನ್ಯಾಯಪೀಠ, ಅರ್ಜಿಯನ್ನು ಆಗಸ್ಟ್ 30ರಂದು ವಿಚಾರಣೆಗೆ ನಿಗದಿಪಡಿಸಲು ನಿರ್ದೇಶಿಸಿತು.**

**ಪ್ರಕರಣವೇನು? ದೇಶದಲ್ಲಿ ಆನ್‌ಲೈನ್ ಬೆಟ್ಟಿಂಗ್ ಗೇಮ್‌ಗಳನ್ನು ನಿರ್ಬಂಧಿಸುವ ನಿಟ್ಟಿನಲ್ಲಿ 'ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಮಸೂದೆ–2025' ಅನ್ನು ಸಂಸತ್ತಿನ ಉಭಯ ಸದನದಲ್ಲಿ ಆಗಸ್ಟ್ 21ರಂದು ಅಂಗೀಕರಿಸಲಾಗಿತ್ತು. ಆ ಮಸೂದೆಗೆ ಆಗಸ್ಟ್ 22ರಂದು ರಾಷ್ಟ್ರಪತಿಗಳು ಅಂಕಿತ ಹಾಕಿದ್ದರು. ಇದರಿಂದ, ದೇಶದಲ್ಲಿ ಆನ್‌ಲೈನ್ ಗೇಮಿಂಗ್‌ಗೆ ಕಡಿವಾಣ ಬಿದ್ದಿತ್ತು. ಈ ಕಾನೂನನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ.**

## ತುಂಗಾಭದ್ರ ಜಲಾಶಯದಿಂದ ನೀರು ಬಿಡುವ ಸಾಧ್ಯತೆ, ನದಿಪಾತ್ರದ ಜನರಿಗೆ ಎಚ್ಚರಿಕೆ

**ಬೆಂಗಳೂರು,** – ತುಂಗಾಭದ್ರ ಜಲಾಶಯದಿಂದ ನದಿಗೆ 40 ಸಾವಿರ ಕ್ಯೂಸೆಕ್‌ನಿಂದ 70 ಸಾವಿರ ಕ್ಯೂಸೆಕ್‌ವರೆಗೂ ನೀರು ಬಿಡುವ ಸಾಧ್ಯತೆ ಇದ್ದು, ತುಂಗಾಭದ್ರ ಅಣೆಕಟ್ಟೆಯ ಕೆಳಭಾಗದಲ್ಲಿನ ನದಿಪಾತ್ರದ ಜನವಸತಿಗಳಲ್ಲಿ ಜಾಗ್ರತೆ ವಹಿಸಲು ಕೋರಲಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಈ ಮನವಿ ಮಾಡಿದೆ.

ತುಂಗಾಭದ್ರ ಜಲಾಶಯಕ್ಕೆ ಈಗ ಬರುತ್ತಿರುವ ಒಳಹರಿವು 36 ಸಾವಿರ ಕ್ಯೂಸೆಕ್ ಆಗಿದ್ದು, ಇದು 53 ಸಾವಿರ ಕ್ಯೂಸೆಕ್‌ಗೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಇಂದು ಮಧ್ಯಾಹ್ನ 12 ಗಂಟೆಯಿಂದ ನದಿಗೆ ನೀರು ಬಿಡುವ ಪ್ರಮಾಣವನ್ನು ಹೆಚ್ಚಿಸಲಾಗುತ್ತದೆ.

ಒಳಹರಿವು 40 ಸಾವಿರ ಕ್ಯೂಸೆಕ್‌ಗಿಂತ 70 ಸಾವಿರ ಕ್ಯೂಸೆಕ್‌ವರೆಗೂ ಹೆಚ್ಚಾಗಬಹುದು. ಇದಕ್ಕೆ ಕಾರಣ ತುಂಗಾಜಲಾಶಯದಿಂದ 32 ಸಾವಿರ ಕ್ಯೂಸೆಕ್, ಭದ್ರ ಅಣೆಕಟ್ಟೆಯಿಂದ 11 ಸಾವಿರ ಕ್ಯೂಸೆಕ್ ಹಾಗೂ ವರದಾನದಿಯಿಂದ 9700 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ.

ಅಲ್ಲದೆ ತುಂಗಾಭದ್ರ ನದಿ ಜಲಾನಯನ ಭಾಗದಲ್ಲಿ ಮಳೆಯಾಗುತ್ತಿದ್ದು, ತುಂಗಾಭದ್ರ ಜಲಾಶಯದ ಒಳಹರಿವು 53 ಸಾವಿರ ಕ್ಯೂಸೆಕ್‌ಗೂ ಹೆಚ್ಚಾಗುವ ಸಾಧ್ಯತೆ ಇದೆ ಎಂದು ತಿಳಿಸಿದೆ.

## ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

# ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಗೊಳಿಸಲು ವಿನಯ ನಾವಲಗಟ್ಟಿ ಸೂಚನೆ

**ಬೆಳಗಾವಿ,** : ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳು ಪರಿಣಾಮಕಾರಿಯಾಗಿ ಯಶಸ್ವಿಯಾಗಲು ಅಧಿಕಾರಿಗಳ ಪಾತ್ರ ಬಹಳ ಮಹತ್ತರವಾದದ್ದು. ಅಧಿಕಾರಿಗಳು ಜವಾಬ್ದಾ–ರಿಯುತವಾಗಿ ತಮ್ಮ ಕರ್ತವ್ಯ ನಿರ್ವಹಿಸಿ, ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ವೀಡಿಯೊ ಕಾನ್ಫರೆನ್ಸ್ ಹಾಲ್ ನಲ್ಲಿ ಶುಕ್ರವಾರ (ಆ.22) ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಅನ್ನಭಾಗ್ಯ:** ಜಿಲ್ಲೆಯಲ್ಲಿ ಸಾರ್ವಜನಿಕ ವಿತರಣಾ ಪದ್ದತಿಯ ಪ್ರಕಾರ 1865 ನ್ಯಾಯಬೆಲೆ ಅಂಗಡಿಗಳು ಕಾರ್ಯ ನಿರ್ವಹಿಸುತ್ತಿವೆ. ಅರ್ಹ ಫಲಾನುಭವಿಗಳಿಗೆ ಪಡಿತರ ವಿತರಣೆ ಕಾರ್ಯ ಪ್ರಗತಿಯಲ್ಲಿದೆ ಆಹಾರ ಇಲಾಖೆ ಅಧಿಕಾರಿಗಳು ವಿವರಿಸಿದರು.

ಜಿಲ್ಲೆಯಲ್ಲಿ 67,696 ಅಂತ್ಯೋದಯ 10,73,661 ಬಿಪಿಎಲ್ ಸೇರಿ ಒಟ್ಟು 11,41,476 ಪಡಿತರ ಚೀಟಿಗಳು ಚಾಲ್ತಿಯಲ್ಲಿದ್ದು, ಅನ್ನಭಾಗ್ಯ ಯೋಜನೆಯಡಿ ಒಟ್ಟು 39,60,610 ಫಲಾನುಭವಿಗಳು ಉಚಿತವಾಗಿ ಪಡಿತರ ಆಹಾರಧಾನ್ಯ ಸದುಪಯೋಗ ಪ್ರತಿ ಮಾಹೆ ನಡೆಯುತ್ತಿದ್ದಾರೆ. ಅದೇ ರೀತಿಯಲ್ಲಿ 3,30,446 ಎನ್.ಪಿ.ಎಚ್.ಎಚ್ ಪಡಿತರ ಚೀಟಿಗಳು ಸೇರಿ ಒಟ್ಟು 14,71,803 ಪಡಿತರ ಚೀಟಿಗಳಿರುತ್ತವೆ ಎಂದು ಆಹಾರ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದರು.

**ಯುವನಿಧಿ:** ಗ್ಯಾರಂಟಿ ಯೋಜನೆಗಳಲ್ಲೊಂದಾದ ಯುವನಿಧಿ



ಯೋಜನೆಯನ್ನು ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, 2023–24ನೇ ಸಾಲಿನಲ್ಲಿ ಪಾಸಾದ ಪದವಿ/ಡಿಪ್ಲೊಮಾ ಅಭ್ಯರ್ಥಿಗಳಿಗೆ 2 ವರ್ಷದವರೆಗೆ 3000/1500 ಗಳನ್ನು ನೀಡಲಾಗುತ್ತಿದೆ.

ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಇದುವರೆಗೆ 34284 ಪದವಿ ಹಾಗೂ 588 ಡಿಪ್ಲೊಮಾ ಅಭ್ಯರ್ಥಿಗಳು ಸೇರಿ ಒಟ್ಟು 34872 ಅಭ್ಯರ್ಥಿಗಳು ನೋಂದಣಿಯಾಗಿದ್ದು, ಜನವರಿ 2024 ರಿಂದ ಜೂನ್ 2025 ರವರೆಗೆ ಡಿಬಿಟಿ ಮುಖಾಂತರ ಒಟ್ಟಾರೆ ಐವತ್ತು ಕೋಟಿ ಮೂವತ್ತು ಮೂರು ಲಕ್ಷದ ಹದಿನಾರು ಸಾವಿರ (56,33,16,000) ಜಮೆಯಾಗಿರುತ್ತವೆ.

**ಗೃಹಜ್ಯೋತಿ:** ಗೃಹಜ್ಯೋತಿ ಯೋಜನೆ ಜಾರಿಯಾದ ನಂತರ ಮನೆಗಳಲ್ಲಿ ವಿದ್ಯುತ್ ಬಳಕೆ ಸಮರ್ಪಕವಾಗಿದೆ. ಪ್ರತಿ ಮನೆಗಳಿಗೆ 200 ಯೂನಿಟ್ ಉಚಿತ ವಿದ್ಯುತ್ ಒದಗಿಸಲಾಗುತ್ತಿದೆ ಎಂದು ಹೆಸ್ಕಾಂ ಅಧಿಕಾರಿಗಳು ವಿವರಿಸಿದರು.

ಶಕ್ತಿ ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 3 ವಿಭಾಗಗಳ (ಬೆಳಗಾವಿ, ಚಿಕ್ಕೋಡಿ ಹಾಗೂ ಧಾರವಾಡ) ಅಡಿಯಲ್ಲಿ ಒಟ್ಟು 15 ಬಸ್ ಘಟಕಗಳಿಂದ ಒಟ್ಟು 1604 ಬಸ್‌ಗಳು ಪ್ರತಿ ದಿನ ಕಾರ್ಯಾಚರಣೆ ಮಾಡಲಾಗುತ್ತಿದೆ. ಶಕ್ತಿ ಯೋಜನೆ ಪೂರ್ವದಲ್ಲಿ ಪ್ರತಿದಿನ ಸರಾಸರಿ 5.40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದರು, ಶಕ್ತಿ ಯೋಜನೆ ಪ್ರಾರಂಭದ ನಂತರ ಪ್ರತಿದಿನ ಸರಾಸರಿ ಒಟ್ಟು 7.94 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಅದರಿಂದ ಒಟ್ಟು 2.54 ಲಕ್ಷ ಪ್ರಯಾಣಿಕರ ಸಂಖ್ಯೆಯಲ್ಲಿ ಪ್ರತಿದಿನ ಹೆಚ್ಚಳವಾಗಿರುತ್ತದೆ ಎಂದು ಸಾರಿಗೆ ಸಂಸ್ಥೆ ಅಧಿಕಾರಿಗಳು ಮಾಹಿತಿ ನೀಡಿದರು.

ಗ್ಯಾರಂಟಿ ಯೋಜನೆಯ ಸದಸ್ಯರುಗಳು ಗ್ಯಾರಂಟಿ ಯೋಜನೆಗಳ ಕುರಿತು ಪಂಚಾಯಿತಿಯಲ್ಲಿ ಹಾಗೂ ಇನ್ನೂ ಬೇರೆ ಸ್ಥಳಗಳಲ್ಲಿ ಜನ ಸ್ಪಂದನಾ ಸಭೆ ಆಯೋಜಿಸಿ ಅಲ್ಲಿನ ಫಲಾನುಭವಿಗಳು ಮತ್ತು ಅಧಿಕಾ–ರಿಗಳನ್ನು ಒಂದುಕಡೆ ಎಲ್ಲರನ್ನು ಒಗ್ಗೂಡಿಸಿ ಯೋಜನೆಗಳಿಂದ ಸದುಪಯೋಗಗಳ ಬಗ್ಗೆ ಚರ್ಚಿಸಿ ಸಮಸ್ಯೆಗಳಿದ್ದರೆ ತಕ್ಷಣದಲ್ಲೆ ಪರಿಹಾರಗಳನ್ನು ಕಂಡುಕೊಳ್ಳಬಹುದು ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಸಲಹೆ ನೀಡಿದರು.

ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕಾ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತ–ರಿದ್ದರು.



ರಾಯಬಾಗ: ಕೃಷ್ಣಾ ನದಿ ತೀರದಲ್ಲಿರುವ ಜಮೀನಿನಲ್ಲಿ ಕಾಣಿಸಿಕೊಂಡಿದ್ದ ಮೊಸಳೆಯನ್ನು ಗ್ರಾಮಸ್ಥರು ಕಟ್ಟಿ ಹಾಕಿ ಅರಣ್ಯ ಇಲಾಖೆಗೆ ಒಪ್ಪಿಸಿರುವ ಘಟನೆ ಬುಧವಾರ ರಾತ್ರಿ ತಾಲೂಕಿನ ಹಳೆ ದಿಗ್ಗೆವಾಡಿಯಲ್ಲಿ ನಡೆದಿದೆ.

ಹಲವು ದಿನಗಳಿಂದ ಗ್ರಾಮಸ್ಥರ ನಿದ್ದೆಗೆಡಿಸಿ, ಭಯ ಮೂಡಿಸಿದ್ದ ಮೊಸಳೆ ಬುಧವಾರ ತಡ ರಾತ್ರಿ ಮತ್ತೆ ಕಾಣಿಸಿದ್ದು, ಗ್ರಾಮದ ಯುವಕರು ಧೈರ್ಯದಿಂದ ಮೊಸಳೆಯನ್ನು ಹರಸಾಹಸ ಪಟ್ಟು ಹಿಡಿದು, ಅರಣ್ಯ ಇಲಾಖೆಗೆ ಒಪ್ಪಿಸಿದ್ದಾರೆ. ಇಲಾಖೆಯವರು ಮೊಸಳೆಯನ್ನು ಸುರಕ್ಷಿತ ವಲಯದಲ್ಲಿ ಬಿಟ್ಟಿದ್ದಾರೆ. ಮಳೆಗಾಲದಲ್ಲಿ ಕೃಷ್ಣಾ ನದಿ ತುಂಬಿ ಹರಿಯುವುತ್ತಿರುವುದರಿಂದ ಆಗಾಗ ಮೊಸಳೆಗಳು ಕಂಡು ಬರುತ್ತವೆ.

# ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ



**ರಾಯಬಾಗ:** ಗ್ರಾಮೀಣ ಭಾಗದ ರೈತ-ರಿಗೆ ಮತ್ತು ಜನರಿಗೆ ಅನುಕೂಲವಾಗಲು ಗ್ರಾಮೀಣ ಪ್ರದೇಶಗಳಿಗೆ ಹೆಚ್ಚಿನ ಆದ್ಯತೆ ನೀಡಿ ರಸ್ತೆಗಳನ್ನು ಡಾಂಬರೀಕರಣ ಮಾಡಲಾಗುತ್ತಿದೆ ಎಂದು ಶಾಸಕ ಡಿ.ಎಮ್. ಐಹೊಳೆ ಹೇಳಿದರು.

ಗುರುವಾರ ಜಿ.ಪಂ.ಇಲಾಖೆಯಡಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ತಾಲೂಕಿನ ಯಡ್ರಾಂವ ಗ್ರಾಮದಲ್ಲಿ ಬಸ್ ನಿಲ್ದಾಣದಿಂದ ಬೆಳೆಸಿ ತೋಟದ ವರೆಗೆ 50 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಡಾಂಬರೀಕರಣ, 40 ಲಕ್ಷ ಅನುದಾನದಲ್ಲಿ ಕಂಚಕರವಾಡಿ ಗ್ರಾಮದಿಂದ ರಾಯಬಾಗ-ಅಂಕಲಿ ಕೂಡುವ ರಸ್ತೆ ಡಾಂಬರೀಕರಣ ಹಾಗೂ 40 ಲಕ್ಷ ವೆಚ್ಚದಲ್ಲಿ ಭೆಂಡವಾಡ ಗ್ರಾಮದ ರಾಮನಕಟ್ಟೆಯಿಂದ ರೇವಣಸಿದ್ದೇಶ್ವರ ದೇವಸ್ಥಾನ ವರೆಗೆ ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ಜಿ.ಪಂ.ಎಇ ಎಸ್.ಎಸ್.ಹೊಸಮನಿ, ಯಡ್ರಾಂವ ಗ್ರಾ.ಪಂ.ಅಧ್ಯಕ್ಷೆ ಅಶ್ವಿನಿ ಧನಗರ, ಸದಾಶಿವ ಘೋರ್ಪಡೆ, ರೇವಣು ಶಿವಾಪೂರೆ, ಅಪ್ಪು ಬಾನೆ, ಸುರೇಶ ಚೌಗುಲಾ, ರೇವಣು ದುಪದಾಳೆ, ಅಲಗೊಂಡ ತಟ್ಟಿಮನಿ, ಕಲ್ಲಪ್ಪ ನಿಂಗನೂರ, ಅಜೀತ ಸಂಗಮೇಶ್ವರ, ಶಿವಪ್ಪಾ ಪಡಲಾಳೆ, ಸುರೇಶ ಐಹೊಳೆ, ಸೀಮಾ ಖೋತ, ರಾಜು ಬೆಳೆಸಿ, ಕಲ್ಲಪ್ಪಾ ಸನದಿ, ಅಲಗೌಡ ಪಾಟೀಲ, ಸಿ.ಪಿ.ನಾಯಿಕ, ಶಿವಾಜಿ ಕಳ್ಳಿ, ಅಣ್ಣಪ್ಪ ಕುಡಚಿ, ಶಿವಾನಂದ ಬೆಳೆಸಿ, ಅಣ್ಣಾಸಾಹೇಬ ಬೆಳೆಸಿ, ವಿಠ್ಠಲ ಐಹೊಳೆ, ಸಂತೋಷ ಮಾಂಗ, ಶ್ರೀಕಾಂತ ಪಡಲಾಳೆ, ನಿಂಗಪ್ಪಾ ಪಕಾಂಡಿ , ಸಂಜಯ ಹಂಜೆ, ಮಹಾದೇವ ನಾಯಿಕ , ವೆಂಕಪ್ಪ ವಡ್ಡರ, ಅಪ್ಪು ಪಾಟೀಲ, ಗಜಾನನ ಜಗನ್ನಾಥ, ರಾಯಪ್ಪ ಬೀಸಗುಪ್ಪಿ, ಸಂಜಯ ಪಾಟೀಲ ಸೇರಿ ಅನೇಕರು ಇದ್ದರು.

# ರಾಷ್ಟ್ರ ಕೀರ್ತಿ ಹೆಚ್ಚಿಸಿರುವ ಕ್ರೀಡಾ ಪಟುಗಳ ಆದರ್ಶ ಅಳವಡಿಸಿಕೊಳ್ಳಿ ಕ್ರೀಡಾಮನೋಭಾವವೇ ಜೀವನದ ಯಶಸ್ಸಿನ ಗುಟ್ಟು: ಸಂಗಮೇಶ ಬಬಲೇಶ್ವರ




**ಧಾರವಾಡ** : ಇಂದಿನ ಯುವ ಕ್ರೀಡಾಪಟುಗಳು ನಮ್ಮ ರಾಷ್ಟದ ಸಾಧಕ ಕ್ರೀಡಾಪಟುಗಳ ಜೀವನದ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು. ಸೋಲು ಗೆಲವುಗಳನ್ನು ಸಮಾನವಾಗಿ ಕಾಣುವ ಕ್ರೀಡಾನೋಭಾವವೇ ಜೀವನದ ಯಶಸ್ಸಿನ ಗುಟ್ಟು. ಅದನ್ನು ಅರಿತು ನಡೆಯಬೇಕು ಎಂದು ಕರ್ನಾಟಕ ಬಾಲ ವಿಕಾಸ ಅಕಾಡಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರು ಹೇಳಿದರು.

ಅವರು ಇಂದು (ಆ.29) ಬೆಳಿಗ್ಗೆ ಧಾರವಾಡ ಜಿಲ್ಲಾ ಕ್ರೀಡಾಂಗಣದ ಒಳಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತವಾಗಿ ಮೇಜರ್ ಧ್ಯಾನ್‌ಚ್‌ಂದ ರವರ ಜನ್ಮ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ರಾಷ್ಟೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಕ್ರೀಡೆಯಲ್ಲಿ ಯಾವುದೇ ಜಾತಿ, ಧರ್ಮದ ಕಟ್ಟಳೆಗಳಿಲ್ಲ, ಮೇಲು ಕೀಳು ಎಂಬ ಭೇದಭಾವ ಇಲ್ಲ, ಬಡವ ಶ್ರೀಮತ ಎಂಬುದಿಲ್ಲ. ಕ್ರೀಡಾ ಸಾಧಕರಿಗೆ, ಸ್ಪರ್ಧಾ ವಿಜೇತರಿಗೆ ಸಿನಿಮಾ ನಟಿಯರಿಗಿಂತ ಹೆಚ್ಚು ಗೌರವ, ಅಭಿಮಾನವಿದೆ ಎಂದರು.

ವಿವಿಧ ಸ್ಪರ್ಧೆಗಳಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿರುವ ಅನೇಕ ಭಾರತೀಯರು ವಿಶ್ವಮನ್ನಣೆ ಗಳಿಸಿದ್ದಾರೆ. ಅವರ ಸಾಧನೆ, ಜೀವನ ಮೌಲ್ಯಗಳು ನಮಗೆ, ನಮ್ಮ ಕ್ರೀಡಾಪಟುಗಳಿಗೆ ಸ್ಪೂರ್ತಿ ಆಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಪ್ರತಿಯೊಬ್ಬರಿಗೂ ಕ್ರೀಡಾ ಹವ್ಯಾಸವನ್ನು ಹೊಂದಿರಬೇಕು. ಮೇಜರ್ ಧ್ಯಾನ್‌ಚ್‌ಂದ ಅವರಂತೆ ಏಗ್ರಾತೆ, ಸಾಧನೆಗೆ ಅಚಲ ಮನಸ್ಸು, ತರಬೇತಿಯಲ್ಲಿನ ತನ್ಮಯತೆ ಮತ್ತು ನಿರ್ಧಿಷ್ಟ ಗುರಿ ಇರಬೇಕು. ಅಂದಾಗ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಸದೃಡ ದೇಹದಲ್ಲಿ ಸದೃಡವಾದ ಮನಸ್ಸು ಇರುತ್ತದೆ. ಕ್ರೀಡಾಪಟುಗಳಿಗೆ ಆಹಾರದ ಉತ್ತಮ ಹವ್ಯಾಸಗಳು ಇರುತ್ತವೆ. ಯಾವುದೇ ದುಷ್ಚಟಗಳಿಗೆ ಅಂಟಿಕೊಳ್ಳಬಾರದು ಎಂದರು. ಕ್ರೀಡಾ ಕ್ಷೇತ್ರದಲ್ಲಿ ನಮ್ಮ ರಾಷ್ಟಕ್ಕೆ ವಿಶ್ವಮಟ್ಟದಲ್ಲಿ ಉತ್ತಮ ಹೆಸರು, ಕೀರ್ತಿ ಇದೆ. ನಮ್ಮ ಕ್ರೀಡಾಪಟುಗಳು ಇನ್ನೂ ಹೆಚ್ಚಿನ ಸಾಧನೆ ಮಾಡುವ ಮೂಲಕ ಧಾರವಾಡ ಜಿಲ್ಲೆಗೆ ಕೀರ್ತಿ ತರಬೇಕೆಂದು ಸಿಇಓ ಭುವನೇಶ ಪಾಟೀಲ ಅವರು ತಿಳಿಸಿದರು.

ದೈನಂದಿನ ವ್ಯಾಯಾಮ, ಕ್ರೀಡಾ ಚಟುವಟಿಕೆ ಮತ್ತು ಶಾರೀರಿಕ ಶ್ರಮವು ಜೀವನವನ್ನು ಸಂತೋಷಮಯವಾಗಿಸುತ್ತದೆ. ಕ್ರೀಡೆಯಲ್ಲಿ ಸೋಲು-ಗೆಲುವು ಸಹಜ, ಆದರೆ ನಿರಂತರ ಅಭ್ಯಾಸ ಮತ್ತು ಶ್ರಮದಿಂದ ಸಾಧನೆ ಸಾಧ್ಯ ಎಂದು ಹೇಳಿದರು.

ಕವಿವಿ ಕ್ರೀಡಾ ವಿಭಾಗದ ವಿಶ್ರಾಂತ ಮುಖ್ಯಸ್ಥರಾದ ಪ್ರೊ.ಬಿ.ಎಂ.ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಭಾರಿ ಸಹಾಯಕ ನಿರ್ದೇಶಕ ಸದಾನಂದ ಅಮರಾಪೂರ ಅವರು ಸ್ವಾಗತಿಸಿದರು. ಜಿನ್ನಪ್ಪ ಕುಂದಗೋಳ ಕಾರ್ಯಕ್ರಮ ನಿರೂಪಿಸಿದರು. ಎಸ್.ಎಸ್.ಭಾವಿಕಟ್ಟಿ ಅವರು ವಂದಿಸಿದರು.

ವೇದಿಕೆಯಲ್ಲಿ ಜಿಮ್ನಾಸ್ಟಿಕ್ ತರಬೇತಿದಾರ ವಿಠ್ಠಲ ಮೂರ್ತಗುಡ್ಡೆ, ನಿವೃತ್ತ ಡಿಡಿಪಿಐ ಗಜಾನನ ಮನ್ನಿಕೇರಿ, ಸಾಯಿ ಆಡಳಿತಾಧಿಕಾರಿ ರಾಮ ಬುಡಕಿ ಇದ್ದರು.

ಕಾರ್ಯಕ್ರಮದಲ್ಲಿ ಕ್ರೀಡಾ ಸಾಧಕರಿಗೆ, ಮಾಜಿ ಕ್ರೀಡಾ ತರಬೇತಿದಾರರಿಗೆ ಸನ್ಮಾನಿಸಿ, ಗೌರವಿಸಲಾಯಿತು. ಹಾಗೂ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಖೋಖೋ ತರಬೇತಿದಾರ ಕೆ.ಸುಜಯಕುಮಾರ, ನಿವೃತ್ತ ಹಾಕಿ ತರಬೇತಿದಾರ ಗಂಗಾಧರ ತಪಶಟ್ಟಿ, ನಿವೃತ್ತ ಬಾಸ್ಕೆಟಬಾಲ್ ತರಬೇತಿದಾರ ಗಣೇಶ ವಾಡಕರ್, ನಿವೃತ್ತ ಹಾಕಿ ತರಬೇತಿದಾರ ಸುರೇಶ ಆಡಿನ್, ಅಥ್ಲೇಟಿಕ್ಸ್ ತರಬೇತಿದಾರ ಆರ್.ಕೆ.ಪಡತಾರೆ ಸೇರಿದಂತೆ ಅನೇಕ ಕ್ರೀಡಾ ತರಬೇತಿದಾರರು, ಕ್ರೀಡಾಪಟುಗಳು, ಕ್ರೀಡಾಶಾಲೆಯ ವಿದ್ಯಾರ್ಥಿಗಳು, ಕ್ರೀಡಾ ಪ್ರೇಮಿಗಳು ಭಾಗವಹಿಸಿದ್ದರು.

## ಗಣೇಶನ ಮೂರ್ತಿ ಪ್ರತಿಷ್ಠಾಪನೆ ಫಲ ಪುಷ್ಪಗಳಿಂದ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಕೆ



**ಗದಗ,** ಶ್ರೀ ಪಂ.ಪಂಚಾಕ್ಷರಿ ಗವಾಯಿಗಳವರ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ ಎ.ಪಿ.ಎಂ.ಸಿ ಯಾರ್ಡ್, ಗದಗ ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮೀಟಿ ವತಿಯಿಂದ ಗಣೇಶ ಚತುರ್ಥಿ ಹಬ್ಬದ ಅಂಗವಾಗಿ ಇಂದು ಬುಧವಾರ ನಗರದ ಮಸಾರಿ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ಶ್ರೀ ಗಣೇಶನ ಮೂರ್ತಿಗೆ ಪೂಜೆ ಸಲ್ಲಿಸಿ ಅಲ್ಲಿಂದ ಎ.ಪಿ.ಎಂ.ಸಿ ಮಾರುಕಟ್ಟೆಯ ವರಗೆ ವಾದ್ಯ ಮೇಳ ಗಳೊಂದಿಗೆ ಗಣೇಶನ ಭವ್ಯ ಮೆರವಣಿಗೆ ಜರುಗಿತು.

ನಂತರ ಗಣೇಶನ ಮೂರ್ತಿ ಪ್ರತಿಷ್ಠಾಪನೆ ಫಲ ಪುಷ್ಪಗಳಿಂದ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಸಲಾಯಿತು. ಗಣೇಶನ ಮೆರವಣಿಗೆ ಹಾಗೂ ಪೂಜೆ ಕಾರ್ಯಕ್ರಮ ದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮೀಟಿಯ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ್ ವಾರಕರ, ಕಾರ್ಯದರ್ಶಿ ರಾಜು ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನಿತೀಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ಕಾಡಪ್ಪನವರ, ಬಸವರಾಜ ಕಾಡಪ್ಪನವರ, ಪ್ರವೀಣ, ವಿನೀತ ಕವಲೂರ, ಶರತ್ ಅಗಡಿ, ಸಾಗರ ವಜ್ರೇಶ್ವರಿ, ಅಜೀತ ಪುಣೇಕರ್, ಬಸವರಾಜ ಬಾವಿಕಟ್ಟಿ ಮುಂತಾದವರಿದ್ದರು.

# ಹೊಂಡಮಯವಾದ ಬೈಲವಾಡ ರಸ್ತೆ



**ಬೈಲಹೊಂಗಲ** -ತಾಲೂಕಿನ ಬೈಲವಾಡ ಕ್ರಾಸ್ ದಿಂದ ಬೈಲವಾಡ ಕಾಲೇಜುವರೆಗಿನ ರಸ್ತೆ ತೀರಾ ಹದಗೆಟ್ಟಿದ್ದು ಕಂದಕಗಳಾಗಿ ನಿರ್ಮಾಣವಾಗಿದೆ. ಸುಮಾರು 2 ಕೀಮಿ ಅಂತರದ ಈ ರಸ್ತೆಯಲ್ಲಿ ಆಳವಾದ ಗುಂಡಿಗಳು ಬಿದ್ದಿದ್ದರಿಂದ ಸಂಚಾರ ಪ್ರಯಾಸವಾಗಿದ್ದು, ನಿತ್ಯ ಅವಘಡಗಳು ಉಂಟಾಗುತ್ತಿವೆ. ಈ ಮಾರ್ಗದ ಕಿತ್ತೂರು ಮತಕ್ಷೇತ್ರದ ವ್ಯಾಪ್ತಿಯ ರಸ್ತೆಯನ್ನು ಗಡಿಯವರೆಗೆ ಸುಧಾರಣೆ ಮಾಡಲಾಗಿದ್ದು, ಬೈಲಹೊಂಗಲ ಮತಕ್ಷೇತ್ರದ ವ್ಯಾಪ್ತಿಯ ರಸ್ತೆಯನ್ನು ರಿಪೇರಿ ಮಾಡದೆ ಹಾಗೆ ಬಿಟ್ಟಿದ್ದ ಕಾರಣ ನಾಗರಿಕರು ಸಂಭಂದಪಟ್ಟ ಶಾಸಕರಿಗೆ, ಅಧಿಕಾರಿಗಳಿಗೆ ಹಿಡಿ ಶಾಪ ಹಾಕುತ್ತಿದ್ದಾರೆ. ಈಗಾಗಲೇ ಈ ರಸ್ತೆಯ ಅವ್ಯವಸ್ಥೆ ಕುರಿತು ಸಂಭಂದಪಟ್ಟ ಲೋಕೋಪಯೋಗಿ ಅಧಿಕಾರಿಗಳಿಗೆ ತಿಳಿಸಿದ್ದರು ಸಹ ಕ್ಯಾರೇ ಎಂದಿಲ್ಲವೆಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ. ಪ್ರತಿ ವರ್ಷ ರಸ್ತೆ ರಿಪೇರಿಗೆ ಅಂತಾ ಬಂದ ಅನುದಾನ ಏನಾಗುತ್ತಿದೆ ಎಂದು ಪ್ರಶ್ನೆಸುವಂತಾಗಿದೆ.

# ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ:ಯಾವುದೇ ಜಾತಿಗಳು ಬಿಟ್ಟು ಹೋಗಿದ್ದರೆ ಮಾಹಿತಿ ನೀಡಲು ಸೆ.1 ರವರೆಗೆ ಅವಧಿ ವಿಸ್ತರಣೆ

**ಧಾರವಾಡ** : ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರ್ಕಾರದ ಆದೇಶಾನುಸಾರ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳು ಮತ್ತು ಇತರೆ ಜಾತಿ/ಉಪಜಾತಿಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ದಿನಾಂಕ: 22.08.2025 ರಂದು ಮಾಧ್ಯಮಗಳಿಗೆ ಸುದ್ದಿ ಬಿಡುಗಡೆ ಮಾಡಿ ಯಾವುದೇ ಜಾತಿ/ ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆಗಳು ಇದ್ದಲ್ಲಿ, 07 ದಿನಗಳ ಒಳಗೆ ನೀಡಲು ಕೋರಲಾಗಿತ್ತು. ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಈ ಅವಧಿಯನ್ನು ವಿಸ್ತರಿಸಲು ಕೋರಿರುವ ಕಾರಣ, ಈ ಬಗ್ಗೆ ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ದಿನಾಂಕ: 01.09.2025 ರ ಸಂಜೆ 5.00 ಗಂಟೆಯವರೆಗೆ ವಿಸ್ತರಿಸಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಸಂಗ್ರಹಿಸಲಾದ ಜಾತಿ/ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು. ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಸದಸ್ಯ ಕಾರ್ಯದರ್ಶಿಗಳು,ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ,ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ,ಬೆಂಗಳೂರು ಅಥವಾ **kscbcb@gmail.com** ಇ-ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ.



**ಮೂಡಲಗಿ : ಸಮೀಪದ ಜೋಕಾನಟ್ಟಿಯ ಶ್ರೀ ಸಿದ್ಧಾರೂಢ ಮಠದಲ್ಲಿ ಸ್ಥಾಪಿತನಾದ ವಿನಾಯಕ**

## ಗುರುಗಾಂವ ಹರಿಯಾಣದ ರಿವಾಲ್ಟ್ ಮೋಟರ್ಸಗೆ ದಂಡ ವಿಧಿಸಿ - ಪರಿಹಾರಕ್ಕೆ ಆಯೋಗ ಆದೇಶ

**ಧಾರವಾಡ** : ಹುಬ್ಬಳ್ಳಿಯ ಗೋಕುಲ ನಿವಾಸಿಗಳಾದ ಹಣಮಂತ ಮತ್ತು ಆಂಜನೇಯ ಉಣಕಲ ಸಂಬಂಧದಲ್ಲಿ ತಂದೆ ಮತ್ತು ಮಗನಾಗಿದ್ದು, ತಮ್ಮ ಮಗನಿಗೆ ಅನುಕೂಲವಾಗಲೆಂದು ಎದುರುದಾರರ ಮಳಿಗೆಯಲ್ಲಿ ರಿವಾಲ್ಟಆರ್.ವಿ. 400 ಇವಿ ಬೈಕ್ ಅನ್ನು ರೂ:1,50,389 ಪಾವತಿಸಿ ಖರೀದಿಸಿದ್ದರು. ಖರೀದಿಸಿದ ಕೆಲವೇ ದಿನಗಳಲ್ಲಿ ಬೈಕನಲ್ಲಿ ಚಾರ್ಜಿಂಗ್ ತೊಂದರೆ, ಸ್ಪೀಡೋ ಮೀಟರ್ ತೊಂದರೆ, ಬ್ಯಾಟರಿ ಮತ್ತು ಮೈಲೇಜ್ ತೊಂದರೆ ಇತ್ಯಾದಿ ತೊಂದರೆಗಳು ಕಂಡು ಬಂದಿರುತ್ತದೆ. ಇದನ್ನು ಎದುರುದಾರರಿಗೆ ತಿಳಿಸಲು ಅವರು ಅದನ್ನು ಬಂದು ನೋಡಿ ತೊಂದರೆಯನ್ನು ನಿವಾರಿಸಲು ಪ್ರಯತ್ನಿಸಿರುತ್ತಾರೆ. ಆದರೆ ಇವತ್ತಿನವರೆಗೂ ಎದುರುದಾರರು ಅದನ್ನು ಸರಿಪಡಿಸಿರುವುದಿಲ್ಲ. ಇದರಿಂದ ದೂರುದಾರರು ಸಾಕಷ್ಟು ಅನಾನೂಕೂಲತೆಗಳನ್ನು ಅನುಭವಿಸಿರುತ್ತಾರೆ. ಅಲ್ಲದೇ ವಾಹನವನ್ನು ರಿಪೇರಿ ಮಾಡಿಕೊಡದೇ ತನಗೆ ಮೋಸ ಮಾಡಿದ್ದಾರೆ ಅಂತಾ ಮತ್ತು ಎದುರುದಾರರ ಇಂತಹ ನಡವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ: 21/06/2024 ರಂದು ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಸದಸ್ಯರು, ದೂರುದಾರರು ಎದುರುದಾರರ ಹುಬ್ಬಳ್ಳಿಯ ವಿದ್ಯಾನಗರದ ಶೋರೂಮನಲ್ಲಿ ರೂ:1,50,389 ಪಾವತಿಸಿ ಇವಿ ಬೈಕನ್ನು ಖರೀದಿಸಿರುವುದು ದಾಖಲೆಗಳಿಂದ ಕಂಡು ಬಂದಿರುತ್ತದೆ. ಬೈಕಿನಲ್ಲಿ ಸಮಸ್ಯೆಗಳು ಉದ್ಭವಿಸಿದಾಗ ಅದನ್ನು ಸರಿಪಡಿಸದೆ ಸೇವಾ ನ್ಯೂನ್ಯತೆ ಎಸಗಿರುವುದು ಮತ್ತು ದೂರುದಾರರು ಕಳುಹಿಸಿದ ಕಾನೂನು ಬದ್ಧ ನೋಟಿಸಿನಲ್ಲಿ ಎದುರುದಾರರು ಉತ್ತರಿಸಿ ತಾವು ವಾಹನವನ್ನು ವಾರಂಟಿಯ ಅವಧಿಯಲ್ಲಿಯೇ ಸರಿಪಡಿಸಿ ಕೊಡುತ್ತೇವೆಂದು ಒಪ್ಪಿರುವದು ಆಯೋಗಕ್ಕೆ ಕಂಡು ಬಂದಿರುತ್ತದೆ. ಇಷ್ಟಾದರು ಕೂಡಾ ಎದುರುದಾರರ ದೂರುದಾರರ ವಾಹನವನ್ನು ಸರಿಪಡಿಸಿ ಕೊಡದೇ ಸೇವಾ ನ್ಯೂನ್ಯತೆ ಎಸಗಿರುವುದು ಕಂಡು ಬಂದಿರುತ್ತದೆ. ಉತ್ಪಾದಕರಾದ ಎರಡನೇ ಎದುರುದಾರರು ಗ್ರಾಹಕರ ದೂರುಗಳಿಗೆ ಸೇವೆಯನ್ನು ಒದಗಿಸುವುದು ಅತ್ಯಂತ ಅವಶ್ಯಕವಿರುತ್ತದೆ. ಆದರೆ ಎದುರುದಾರರು ಅದನ್ನು ಸರಿಪಡಿಸಿ ಕೊಡದೆ ಸೇವಾ ನ್ಯೂನ್ಯತೆ ಎಸಗಿರುವುದು ಆಯೋಗಕ್ಕೆ ಕಂಡು ಬರುತ್ತದೆ. ಇಂತಹ ಎದುರುದಾರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆಯಡಿಯಲ್ಲಿ ಸೇವಾ ನ್ಯೂನ್ಯತೆ ಎಸಗುವುದರೊಂದಿಗೆ ಅನುಚಿತ ವ್ಯಾಪಾರ ಪದ್ಧತಿ ಮಾಡಿದ್ದಾರೆಂದು ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

ಈ ಎಲ್ಲ ಸಂಗತಿಗಳನ್ನು ಆಧರಿಸಿ ಎದುರುದಾರರಾದ ಹರಿಯಾಣದ ರಿವಾಲ್ಟ ಮೋಟರ್ಸ ಕಂಪನಿಗೆ ಆದೇಶವಾದ ಒಂದು ತಿಂಗಳ ಒಳಗಾಗಿ ದೂರುದಾರರ ವಾಹನದ ಬ್ಯಾಟರಿಯನ್ನು ಅಳವಡಿಸಿ ಮತ್ತು ಎಲ್ಲಾ ತೊಂದರೆಗಳನ್ನು ಸರಿಪಡಿಸಿ ವಾಹನವು ಸರಿಯಾಗಿ ರೋಡಿನ ಮೇಲೆ ಒಳ್ಳೆಯ ರೀತಿಯಲ್ಲಿ ಚಲಿಸುವಂತೆ ರಿಪೇರಿ ಮಾಡಿಕೊಡಬೇಕು, ಒಂದು ವೇಳೆ ತಪ್ಪಿದಲ್ಲಿ ದೂರುದಾರರು ಪಾವತಿಸಿದ ಹಣ ರೂ:1,50,389 ನ್ನು ಶೇ:10 ರಂತೆ ಬಡ್ಡಿ ಲೆಕ್ಕ ಹಾಕಿ ದೂರುದಾರರಿಗೆ ಮರಳಿ ಕೊಡಬೇಕು ಹಾಗೂ ದೂರುದಾರರಿಗೆ ಆಗಿರುವ ಅನಾನುಕೂಲ, ತೊಂದರೆ ಹಾಗೂ ಮಾನಸಿಕ ಹಿಂಸೆಗಾಗಿ ರೂ.50,000 ಪರಿಹಾರ ಮತ್ತು ರೂ.10,000 ಪ್ರಕರಣದ ಖರ್ಚು ವೆಚ್ಚ ನೀಡುವಂತೆ ಆಯೋಗ ಹರಿಯಾಣದ ರಿವಾಲ್ಟ ಮೋಟರ್ಸಗೆ, ರಿವಾಲ್ಟ ಹೌಸಗೆ ತನ್ನ ಆದೇಶದಲ್ಲಿ ನಿರ್ದೇಶಿಸಿದೆ.

## ಮೇಲ್ಛಾವಣಿ ಕುಸಿದು ನಾಲ್ವರಿಗೆ ಗಾಯ: ಮೂವರು ಜಿಲ್ಲಾಸ್ಪತ್ರೆಗೆ ದಾಖಲು: ಶಾಸಕ, ಅಧಿಕಾರಿಗಳ ಭೇಟಿ: ನೊಂದ ಕುಟುಂಬಕ್ಕೆ ಪಡಿತರ ವಿತರಿಸಿದ ನಡಹಳ್ಳಿ




**ಮುದ್ದೇಬಿಹಾಳ:** ತಾಲೂಕಿನ ಅರೇಮುರಾಳ ಗ್ರಾಮದಲ್ಲಿ ಬುಧವಾರ ಮಧ್ಯರಾತ್ರಿ ನಿರಂತರ ಸುರಿದ ಮಳೆಗೆ ಬೇರೊಂದು ಮನೆಯ ಗೋಡೆ ಇನ್ನೊಂದು ಮನೆಯ ಮೇಲ್ಛಾವಣಿ ಮೇಲೆ ಕುಸಿದ ಪರಿಣಾಮ ತಗಡಿನ ಮೇಲ್ಛಾವಣಿ ಧರೆಗುರುಳಿ ಮನೆಯೊಳಗೆ ಮಲಗಿದ್ದ ಒಂದೇ ಕುಟುಂಬದ 10 ವರ್ಷದ ಮಗು ಸೇರಿ ನಾಲ್ವರು ಗಾಯಗೊಂಡಿದ್ದು ಇವರಲ್ಲಿ ಮೂವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ಕಳಿಸಲಾಗಿದೆ. ಮನೆಯ ಯಜಮಾನ ರುದ್ರಪ್ಪ ಬಂಡಿವಡ್ಡರ, ಆತನ ಪತ್ನಿ ಮಲ್ಲಮ್ಮ, ಮಗಳು ಶಾರದಾ, ಮೊಮ್ಮಗ ರುಶಾಂತ(10) ದುರಂತದಲ್ಲಿ ಸಿಲುಕಿದವರು. ರುದ್ರಪ್ಪ, ಮಲ್ಲಮ್ಮ, ಶಾರದಾ ಇವರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆ ನೀಡಲಾಗುತ್ತಿದೆ. ಮೇಲ್ಛಾವಣಿ ಕುಸಿದ ಕೂಡಲೇ ಕಲ್ಲು, ಮಣ್ಣಿನದಿ ಸಿಲುಕಿದ್ದವರ ಕೂಗಾಟ, ಚೀರಾಟ ಕೇಳಿ ಅಕ್ಕಪಕ್ಕದವರು ಓಡಿ ಬಂದು ಗಾಯಾಳುಗಳನ್ನು ಹೊರಗೆ ತೆಗೆದಿದ್ದಾರೆ. ಅಂಬ್ಯೂಲೆನ್ಸ್ಗ ಕರೆ ಮಾಡಿದರೆ ಯಾವುದೇ ಸ್ಪಂಧನೆ ಸಿಕ್ಕಿಲ್ಲ. ಗ್ರಾಮಸ್ಥರೇ ಖಾಸಗಿಯಾಗಿ ಆಟೋವೊಂದನ್ನು ಬಾಡಿಗೆಗೆ ಪಡೆದು ಗಾಯಾಳುಗಳನ್ನು ಮುದ್ದೇಬಿಹಾಳ ತಾಲೂಕು ಸರ್ಕಾರಿ ಆಸ್ಪತ್ರೆಗೆ ಕಳಿಸಿ ಸಕಾಲಿಕ ಚಿಕಿತ್ಸೆ ದೊರಕುವಂತೆ ನೋಡಿಕೊಂಡಿದ್ದಾರೆ. ಅಲ್ಲಿನ ವೈದ್ಯರ ಶಿಫಾರಸು ಮೇರೆಗೆ ಗುರುವಾರ ಬೆಳಿಗ್ಗೆ ಜಿಲ್ಲಾಸ್ಪತ್ರೆಗೆ ಕಳಿಸಿಕೊಡಲಾಗಿದೆ.

**ನಡಹಳ್ಳಿ ಭೇಟಿ-ಪಡಿತರ ವಿತರಣೆ:** ವಿಷಯ ತಿಳಿದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಅವರು ಮುಖಂಡರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ನೊಂದ ಕುಟುಂಬದ ಇತರೆ ಸದಸ್ಯರಾದ ಅಜ್ಜಿ ಚಿನ್ನಮ್ಮ ಬಂಡಿವಡ್ಡರ, ರುದ್ರಪ್ಪ ಅವರ ಹಿರಿಯ ಮಗಳು ಯಶೋಧಾ ಅವರಿಗೆ ಸಾಂತ್ವನ ಹೇಳಿದರು. ಘಟನೆ ನಡೆದು 12 ಗಂಟೆ ಮೇಲಾದರೂ ಹಿರೇಮುರಾಳ ಗ್ರಾಪಂ ಪಿಡಿಓ, ಗ್ರಾಮ ಆಡಳಿತಾಧಿಕಾರಿ ಸೇರಿ ಯಾರೊಬ್ಬರೂ ಸ್ಥಳಕ್ಕೆ ಆಗಮಿಸಿ ವಸ್ತುಸ್ಥಿತಿ ಅರಿತುಕೊಂಡು ನೊಂದವರಿಗೆ ನೆರವಾಗಲು ಪ್ರಯತ್ನ ನಡೆಸಿಲ್ಲದಿರುವುದನ್ನು ಕೇಳಿ ಕೆಂಡಾಮಂಡಲರಾದ ಅವರು ಅಲ್ಲಿಂದಲೇ ಸಂಬಂಧಿಸಿದ ಅಧಿಕಾರಿಗಳಿಗೆ ಕರೆಮಾಡಿ ಬೇಜವಾಬ್ದಾರಿತನಕ್ಕೆ ಬಿಸಿ ಮುಟ್ಟಿಸಿದರು. 108 ಅಂಬ್ಯೂಲೆನ್ಸ್ ಸೇವೆಗೆ 108 ಬಾರಿ ಕರೆ ಮಾಡಿದರೂ ಸ್ಪಂಧಿಸಿಲ್ಲ. ಪೊಲೀಸರೂ ಸ್ಥಳಕ್ಕೆ ಬಂದಿಲ್ಲ. ಯಾಕೆ ಈ ಅವ್ಯವಸ್ಥೆ. ತಾಲೂಕಿನಲ್ಲಿ ಆಡಳಿತ ವ್ಯವಸ್ಥೆ ಸತ್ತು ಹೋಗಿದೆಯೇ. ಬಡವರು, ರೈತರು ಎಂದರೆ ಆಡಳಿತ ವರ್ಗಕ್ಕೆ ಅಷ್ಟೊಂದು ನಿರ್ಲಕ್ಷಯವೇ ಎಂದು ಹರಿಹಾಯ್ದರು.

ಈ ವೇಳೆ ಸ್ಥಳಕ್ಕೆ ಬಂದ ಪಿಡಿಓ ಕೆ.ಎಚ್. ಕುಂಬಾರ ಅವರನ್ನು ಕೂಡಲೇ ನೊಂದ ಕುಟುಂಬಕ್ಕೆ ಅಗತ್ಯ ನೆರವು ನೀಡಬೇಕೆಂದು ಸೂಚನೆ ನೀಡಿದರು.

ಘಟನೆಯಲ್ಲಿ ಎಲ್ಲವನ್ನೂ ಕಳೆದುಕೊಂಡ ಕುಟುಂಬಕ್ಕೆ ತಾತ್ಕಾಲಿಕ ನೆರವಾಗಲು ವೈಯುಕ್ತಿಕವಾಗಿ ದಿನಬಳಕೆ ವಸ್ತುಗಳಿರುವ ಪಡಿತರ ಕಿಟ್ ವಿತರಿಸಿದರು.



ಯುವ ಮೋರ್ಚಾ ಅಧ್ಯಕ್ಷ ಗಿರೀಶಗೌಡ ಪಾಟೀಲ ಹಿರೇಮುರಾಳ, ಬಸವರಾಜ ಸರೂರ, ಬಸವರಾಜ ನಾಗರಿತ್ತಿ, ಆದಪ್ಪ ರಾಮೋಡಗಿ, ಹುಲ್ಲಪ್ಪ ಮುರಾಳ, ರಮೇಶ ವಡ್ಡರ, ನಾಗಪ್ಪ ತಾಳಿಕೋಟೆ, ಆಕಾಶ ನಾಗರಿತ್ತಿ, ಎಂ.ಎಚ್.ನಾಗರಿತ್ತಿ, ಶಿವಾನಂದ ಪಾಟೀಲ, ವೀರೇಶ ಬಡಿಗೇರ, ಗ್ರಾಪಂ ಕಾರ್ಯದರ್ಶಿ ನಿಂಗಣ್ಣ ಬಿರಾದಾರ ಇತರರಿದ್ದರು.

**ತಾತ್ಕಾಲಿಕ ವ್ಯವಸ್ಥೆ:** ಮದ್ಯಾಹ್ನದ ನಂತರ ಗ್ರಾಪಂ ವತಿಯಿಂದ ಸಂತ್ರಸ್ತ ಕುಟುಂಬಕ್ಕೆ ದಿನಬಳಕೆ ವಸ್ತುಗಳಾದ ಪಾತ್ರೆ, ಪಗಡೆ, ಆಹಾರ ಧಾನ್ಯದ ಕಿಟ್ ಸೇರಿದಂತೆ ಕೆಲ ಸಾಮಗ್ರಿಗಳನ್ನು ಒದಗಿಸಲಾಯಿತು. ಅಗತ್ಯ ಬಿದ್ದರೆ ಇನ್ನಷ್ಟು ನೆರವು ನೀಡುವುದಾಗಿ ಭರವಸೆ ನೀಡಲಾಯಿತು. ಸಧ್ಯ ನೊಂದ ಕುಟುಂಬಕ್ಕೆ ವಾಸಕ್ಕೆ ಮನೆ ಇಲ್ಲದ ಕಾರಣ ಸರ್ಕಾರಿ ಪ್ರಾಥಮಿಕ ಶಾಲೆಯ ಒಂದು ಕೊಠಡಿಯಲ್ಲಿ ಇರಲು ತಾತ್ಕಾಲಿಕ ವ್ಯವಸ್ಥೆ ಕಲ್ಪಿಸಲಾಗಿದೆ.

***ತಹಶೀಲ್ದಾರ್, ಇಓ, ಶಾಸಕ ಭೇಟಿ:** ನಡಹಳ್ಳಿಯವರು ಬಂದು ಹೋದ ನಂತರ ಕೆಲ ಹೊತ್ತಿನ ಮೇಲೆ ತಹಶೀಲ್ದಾರ್ ಕೀರ್ತಿ ಚಾಲಕ್, ತಾಪಂ ಇಓ ವೆಂಕಟೇಶ ವಂದಾಲ ಅವರು ಸ್ಥಳಕ್ಕೆ ಭೇಟಿ ನೀಡಿ ಘಟನೆಯ ಮಾಹಿತಿ ಪಡೆದುಕೊಂಡು ನೊಂದ ಕುಟುಂಬಕ್ಕೆ ಸರ್ಕಾರದ ನಿಯಮಗಳ ಪ್ರಕಾರ ಅಗತ್ಯ ನೆರವು ನೀಡುವಂತೆ ಪಿಡಿಓಗೆ ಸೂಚಿಸಿದರು. ನಂತರ ಶಾಸಕ ಸಿ.ಎಸ್.ನಾಡಗೌಡ ಅವರು ಆಗಮಿಸಿ ಸಾಂತ್ವನ ಹೇಳಿದರು. ಬಂಡಿವಡ್ಡರ ಅವರದ್ದು ತೀರ ಬಡಕುಟುಂಬವಾಗಿದ್ದು ವಾಸಿಸಲು ಮನೆ ಇಲ್ಲ ಎನ್ನುವುದನ್ನು ತಿಳಿದು ಅವರಿಗೆ ಮನೆ ಮಂಜೂರು ಮಾಡುವ ಕುರಿತು ಗ್ರಾಪಂನಿಂದ ಕ್ರಮ ಜರುಗಿಸುವಂತೆ ಸೂಚಿಸಿದರು. ಸರ್ಕಾರದಿಂದ ಪ್ರಕೃತಿ ವಿಕೋಪದ ಅಡಿಯಲ್ಲಿ ಲಭ್ಯವಿರುವ ಪರಿಹಾರವನ್ನು ದೊರಕಿಸಿಕೊಡುವ ಭರವಸೆ ನೀಡಿದರು.

# ಪರಮಪೂಜ್ಯ ಡಾ. ಶ್ರೀ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ನೇತೃತ್ವದಲ್ಲಿ ಗುರು ಕೋರಣ್ಯ

**ಕನಕಪುರ:** ಪರಮಪೂಜ್ಯ ಶ್ರೀ ಡಾ. ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ನೇತೃತ್ವದಲ್ಲಿ ಕನಕಪುರ ನಗರದಲ್ಲಿ ಎರಡು ದಿನಗಳ ಕಾಲ ದೇಗುಲಮಠದಿಂದ ಗುರು ಕೋರಣ್ಯದಲ್ಲಿ ಶ್ರೀ ದೇಗುಲ ಮಠದ ಕಿರಿಯ ಪರಮಪೂಜ್ಯ ಶ್ರೀ ಚನ್ನಬಸವ ಮಹಾಸ್ವಾಮಿಗಳು ಹಾಗೂ ತೋಟಹಳ್ಳಿ ಮಠದ ಪೂಜ್ಯ ಶ್ರೀ ಬಸವಪ್ರಭು ಮಹಾಸ್ವಾಮಿಗಳು ಮತ್ತು ಮರಳವಾಡಿ ಮಠದ ಕಿರಿಯ ಪೂಜ್ಯ ಶ್ರೀ ಪ್ರಭುಕಿ–ರೀಟ ಮಹಾಸ್ವಾಮಿಗಳು ಹಾಗು ಅತ್ತಹಳ್ಳಿ ಮಠದ ಕಿರಿಯ ಪೂಜ್ಯ ಶ್ರೀ ನಿರಂಜನ ಮಹಾಸ್ವಾಮಿಗಳು ಮತ್ತು ಬಿಲ್ವಪತ್ರೆ ಮಠದ ಇಮ್ಮಡಿ ಸದಾಶಿವ ಮಹಾಸ್ವಾಮಿಗಳು

ಕನಕಪುರ ನಗರದಲ್ಲಿ ಗುರು ಕೋರಣ್ಯವನ್ನು ನಡೆಸಿದರು. ಶ್ರೀ ದೇಗುಲಮಠದಿಂದ ಭಾದ್ರಪದ ಮಾಸದ ವಾರ್ಷಿಕ ಗುರುಕೋರಣ್ಯ ಕಾಯಕ ಬಹಳ ಹಿಂದಿನ ಸಂಪ್ರದಾಯ.ಯಾವುದೇ ಮಠವು ತನ್ನದೇ ಆದ ಆಸ್ತಿಯನ್ನು ಹೊಂದಿದ್ದರೂ ಅಲ್ಲಿ ನಡೆಯುವ ಅನ್ನದಾಸೋಹ, ವಿದ್ಯಾ ದಾಸೋಹ ಮತ್ತು ಜ್ಞಾನ ದಾಸೋಹಗಳನ್ನು ನಿರ್ವಹಿಸಲು




ಗುರುಕೋರಣ್ಯ ಪದ್ಧತಿ ನಡೆದುಕೊಂಡು ಬಂದಿದ್ದು, ಈ ಪದ್ಧತಿಯನ್ನು ಬಹಳ ಹಿಂದಿ ನಿದಲೂ ಶ್ರೀ ದೇಗುಲಮಠದ ಗುರು ಪರಂಪರೆ ಅನೂಚಾನವಾಗಿ ನಡೆಸಿಕೊಂಡು ಬರುತ್ತಿದೆ. ವಿಶೇಷವಾಗಿ ಈ ಬಾರಿ ಐದು ಸ್ವಾಮೀಜಿಗಳು ಶ್ರೀ ದೇಗುಲ ಮಠಾಧ್ಯಕ್ಷರಾದ ಡಾ. ಶ್ರೀಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳವರ ದಿವ್ಯ ನೇತೃತ್ವದಲ್ಲಿ ನಡೆದ ಈ ಸಾಂಪ್ರದಾಯಿಕ ಕಾರ್ಯದಲ್ಲಿ ಶ್ರೀ ದೇಗುಲ ಮಠದ ಕಿರಿಯ ಪರಮಪೂಜ್ಯ ಶ್ರೀ ಚನ್ನಬಸವ ಮಹಾಸ್ವಾಮಿಗಳವರು ಹಾಗೂ ತೋಟಹಳ್ಳಿ ಮಠದ ಶ್ರೀ ಬಸವ ಪ್ರಭು ಮಹಾಸ್ವಾಮಿಗಳು ಹಾಗು ಅತ್ತಹಳ್ಳಿ ಮಠದ ಕಿರಿಯ ಶ್ರೀ ನಿರಂಜನ ಮಹಾಸ್ವಾಮಿಗಳು ಮತ್ತು ಮರಳವಾಡಿ ಮಠದ ಕಿರಿಯ ಶ್ರೀ ಪ್ರಭುಕೀರಿಟ ಮಹಾಸ್ವಾಮಿಗಳವರು ಮತ್ತು

ಬಿಲ್ವಪತ್ರೆಮಠ ಶ್ರೀ ಇಮ್ಮಡಿ ಸದಾಶಿವ ಮಹಾಸ್ವಾಮಿಗಳು ಗುರುಕೋರಣ್ಯ ಕಾಯಕವನ್ನು ಕೈಗೊಂಡು ಕನಕಪುರ ನಗರದ ವಿವಿಧ ಬಡಾವಣೆಗಳಾದ ಕೋಟೆ, ಕೆಂಕೆರಮ್ಮ ರಸ್ತೆ, ಹೌಸಿಂಗ್ ಬೋರ್ಡ್, ಪೈಪ್ ಲೈನ್ ರಸ್ತೆ ಮಹದೇಶ್ವರ ಬಡಾವಣೆ ಎಂ ಜಿ ರಸ್ತೆ ಮುನಿಸಿಪಲ್ ಹೈಸ್ಕೂಲ್ ರಸ್ತೆ, ಹೀಗೆ ಅನೇಕ ಬಡಾವಣೆಗಳಲ್ಲಿಸಂಚರಿಸಿ ಕೋರಣ್ಯ ಮಾಡಿದರು. ಐವರು ಪೂಜ್ಯರನ್ನೂ ಭಕ್ತ ವೃಂದವು ಅನನ್ಯ ಭಕ್ತಿಭಾವದಿಂದ ಬರಮಾಡಿಕೊಡು, ಅವರವರ ಶಕ್ತಿಯ ಅನುಸಾರ ಕಾಣಿಕೆ ದವಸ ಧಾನ್ಯಗಳು, ಎಣ್ಣೆ, ತರಕಾರಿ ಇತ್ಯಾದಿ ದಾಸೋಹ ಪರಿಕರಗಳನ್ನು ಹಾಗೂ ಯಥಾಶಕ್ತಿ ಕಾಣಿಕೆಗಳನ್ನೂ ಸಮರ್ಪಿಸಿ ಶ್ರಿಗಳವರನ್ನು ಸತ್ಕರಿಸಿದರು. ಜೊತೆಗೆ ಭಜನೆ, ತಂಡಗಳು ಮುಚೂಣಿಯಲ್ಲಿದ್ದು ಕಾರ್ಯಕ್ರಮಕ್ಕೆ ಮೆರಗು ನೀಡಿದವು. ಈ ಕಾರ್ಯದಲ್ಲಿ ಕನಕಪುರದ ನಗರದ ಭಕ್ತರು ಹಳೆ ವಿದ್ಯಾರ್ಥಿಗಳು ಎಲ್ಲಾ ಹಿರಿಯರು,

## ಸೆ. 2 ರಿಂದ ಬೆಳಗಾವಿ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟ ಸ್ಪರ್ಧೆ: ಅರ್ಜಿ ಆಹ್ವಾನ

ಬೆಳಗಾವಿ: 2025–26ನೇ ಸಾಲಿನ ಬೆಳಗಾವಿ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಪ್ರತಿ ವರ್ಷದಂತೆ ಈ ಬಾರಿಯೂ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷ ಮತ್ತು ಮಹಿಳೆಯ–ರಿಗಾಗಿ ಬೆಳಗಾವಿ ಜಿಲ್ಲಾಕ್ರೀಡಾಂಗಣದ ಆಟದ ಮೈದಾನದಲ್ಲಿ ಆಯೋಜಿಸಲಾಗಿದೆ.

ಭಾಗವಹಿಸುವ ತಾಲೂಕಿನ ಕ್ರೀಡಾಪಟುಗಳು ಸೆ. 02 ರಂದು ಬೆಳಿಗ್ಗೆ 9.00 ಗಂಟೆಗೆ ಆಗಮಿಸಿ ಸಂಘಟಕರಲ್ಲಿ ವರದಿ ಮಾಡಿಕೊಳ್ಳಬೇಕು.

ಅಥ್ಲೆಟಿಕ್ಸ್ ಕ್ರೀಡೆಗಳಾದ (ಮಹಿಳೆಯರಿಗೆ ಮತ್ತು ಪುರುಷರಿಗೆ) ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಥ್ರೋ, ಹರ್ಡಲ್ಸ್ ಹಾಗೂ ಗುಂಪು ಆಟಗಳಾದ ವಾಲಿಬಾಲ್, ಫುಟ್ಬಾಲ್, ಖೋಖೋ, ಕಬಡ್ಡಿ, ಥ್ರೋಬಾಲ್, ಯೋಗಾಸನ, ಕ್ರೀಡೆಗಳಲ್ಲಿ ಭಾಗವಹಿಸಬಹುದಾಗಿದೆ. ನಿಯಮಗಳು: ದಸರಾ ಭಾಗವಹಿಸುವ ಕ್ರೀಡಾಕೂಟದಲ್ಲಿ ಕ್ರೀಡಾಪಟುಗಳು ಬೆಳಗಾವಿ ತಾಲೂಕಿನ ರಹವಾಸಿಯಾಗಿರಬೇಕು. ಕ್ರೀಡಾಕೂಟದಲ್ಲಿ ರಕ್ಷಣಾ ಪಡೆ, ಅರೆರಕ್ಷಣಾ ಪಡೆಗೆ ಸೇ–ರಿದ ಕ್ರೀಡಾಪಟುಗಳು ಭಾಗ ವಹಿಸಲು ಅರ್ಹರಾಗಿರುವುದಿಲ್ಲ. ಈ ಕ್ರೀಡಾಕೂಟದಲ್ಲಿ ತಾಲೂಕಿನ ಶಾಲಾ ಕಾಲೇಜು, ಯುವಕ/ತಿ ಸಂಘಗಳ ಹಾಗೂ ಕ್ರೀಡಾ ಸಂಘ ಸಂಸ್ಥೆಗಳ ಕ್ರೀಡಾಪಟುಗಳು ಭಾಗವಹಿಸಬಹುದು. ಭಾಗವಹಿ ಭಾಗವಹಿಸಬಹುದು. ಭಾಗವಹಿಸುವ ಕ್ರೀಡಾಪಟುಗಳು ತಮ್ಮ ಬ್ಯಾಂಕ್ ಪಾಸ್ ಬುಕ್ ಪ್ರತಿ ಮತ್ತು ಆಧಾರ್ ಕಾರ್ಡ್ ಪ್ರತಿಯನ್ನು ಕಡ್ಡಾಯವಾಗಿ ತರತಕ್ಕದ್ದು. ಒಂದು ತಾಲೂಕಿನಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಮತ್ತೊಂದು ತಾಲೂಕಿನಲ್ಲಿ ಭಾಗವಹಿಸತಕ್ಕದ್ದಲ್ಲ. ಒಂದು ವೇಳೆ ಭಾಗವಹಿಸಿದಲ್ಲಿ ಅಂತವರ ಆಯ್ಕೆಯನ್ನು ರದ್ದು ಗೊಳಿಸಲಾಗುವುದು. ನಿರ್ಣಾಯಕರ ನಿರ್ಣಯವೇ ಅಂತಿಮವಾಗಿದ್ದು, ಕ್ರೀಡಾಕೂಟದಲ್ಲಿ ಅಸಭ್ಯವಾಗಿ ವರ್ತಿಸಿದ ಕ್ರೀಡಾಪಟು ಅಥವಾ ತಂಡಗಳನ್ನು ಅನರ್ಹಗೊಳಿಸಲಾಗುವುದು. ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು **https://dasaracmcup-2025.etrpindia.com/KA-sports** (ಆನ್‌ಲೈನ್ ಲಿಂಕ್) ಮೂಲಕ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 9632487391, 7411144485 ಗಳಿಗೆ ಅಥವಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ರೇಡಿಯೋ ಕೇಂದ್ರಕ್ಕೆ ವಿದ್ಯಾರ್ಥಿಗಳ ಭೇಟಿ




ಹುಕ್ಕೇರಿ;– ಚಿಕ್ಕಾಲಗುಡ್ಡ ಗ್ರಾಮದ ಶ್ರೀ ಶಂಕರಲಿಂಗ ಮಾಡೆಲ್ ಶಾಲೆಯ ವಿದ್ಯಾರ್ಥಿಗಳು ಇತ್ತಿಚೇಗೆ ಶಿಕ್ಷಣಾತ್ಮಕ ಪ್ರವಾಸದ ಅಂಗವಾಗಿ ಯಲ್ಲಾಪೂರ ಗ್ರಾಮದ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ರೇಡಿಯೋ ಜಾಕಿ ಚೇತನ ಕುಲಕರ್ಣಿಯವರು ಮಾತನಾಡಿ ಚಿಕ್ಕಂದಿನಿಂದಲೇ ವಿದ್ಯಾರ್ಥಿಗಳ ಪ್ರತಿಭೆ ಗುರುತಿಸಿ, ಮಾಧ್ಯಮ ಕ್ಷೇತ್ರದ ಅಭಿರುಚಿ ಮೂಡಿಸಲು ಇಂತಹ ಭೇಟಿಗಳು ಸಹಾಯಕವಾಗಲಿದೆ ಎಂದರು. ವಿದ್ಯಾರ್ಥಿಗಳಿಗೆ ರೇಡಿಯೋ ಕಾರ್ಯಕ್ರಮ ತಯಾರಿ, ಧ್ವನಿ ದಾಖಲಿಸುವ ವಿಧಾನ, ನೇರ ಪ್ರಸಾರ ತಂತ್ರಜ್ಞಾನ, ನಿರೂಪಕರ ಕೆಲಸ ಮತ್ತು ಮಾಧ್ಯಮ ಕ್ಷೇತ್ರದ ತಾಂತ್ರಿಕ ಮಾಹಿತಿ ನೀಡಲಾಯಿತು. ವಿದ್ಯಾರ್ಥಿಗಳು ವಿವಿಧ ಕಾರ್ಯಕ್ರಮಗಳನ್ನು ನೀಡಿ ಪ್ರಸಾರ ವಿಧಾನವನ್ನು ನೇರವಾಗಿ ವಿಕ್ಷಿಸಿ ಅನುಭವ ಹಂಚಿಕೊಂಡರು. ಇದೇ ಸಂದರ್ಭದಲ್ಲಿ ಶಿಕ್ಷಕರಾದ ಶ್ರೀಮತಿ. ಪುಷ್ಪಾ ಮುಷ್ಟಗಿ, ವಿಕ್ರಾಂತ ಪೋತದಾರ ಮಾತನಾಡಿ ನೈಜ ಅನುಭವದಿಂದ ಪಾಠಗಳತ್ತ ಹೆಚ್ಚಿನ ಆಸಕ್ತಿ ಮೂಡುತ್ತದೆ, ಶಾಲಾ ಆಡಳಿತವು ವಿದ್ಯಾರ್ಥಿಗಳಿಗೆ ಇಂತಹ ಶಿಕ್ಷಣಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಯೋಜನೆಯನ್ನು ಹೊಂದಿದೆ ಎಂದರು.

ಕೊನೆಯಲ್ಲಿ ರೇಡಿಯೋ ಸಿಬ್ಬಂದಿ ಮಹಾಂತೇಶ ವಂದಿಸಿದರು.

# ಜಾನಪದ ಸಾಹಿತ್ಯ ಸಂಸ್ಕೃತಿಯ ಬೇರು: ಸುಮಾ ಕಿತ್ತೂರ್

**ಬೆಳಗಾವಿ:** ಜನಪದ ಸಾಹಿತ್ಯವು ಹಳ್ಳಿಗಳ ಬದುಕಿನ, ನಮ್ಮ ಸಂಸ್ಕೃತಿ ಮತ್ತು ಮೌಲ್ಯಗಳ ಮೂಲವಾಗಿದೆ. ನಮ್ಮ ಹಿರಿಯರು ಕಟ್ಟಿಕೊಟ್ಟಿರುವಂತಹ ಮೂಲ ಜನಪದ ಸಾಹಿತ್ಯ ನಮ್ಮ ಜೀವನಾಡಿ ಎಂದು ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷೆ ಸುಮಾ ಕಿತ್ತೂರ್ ಹೇಳಿದರು.

ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ದತ್ತಿನಿಧಿ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜನಪದ ಸಾಹಿತ್ಯವೂ ಆಕಾಶದಷ್ಟು ವಿಶಾಲ, ಸಾಗರದಷ್ಟು ಆಳ. ಅದರಲ್ಲಿ ಹಲವು ಪ್ರಕಾರಗಳಿವೆ. ಗಾದೆ, ಒಗಟು, ಒಡಪು, ಕಥೆ, ಗೀತೆ, ಕಥನಗೀತೆ ಪ್ರಮುಖವಾಗಿವೆ. ನಮ್ಮ ಮಕ್ಕಳಿಗೆ ಮೂಲ ಜನಪದದ ಅರಿವೇ ಇಲ್ಲ. ಜನರಿಗೆ ಇಂತಹ ತರಬೇತಿಗಳ ಅವಶ್ಯಕತೆ ಇದೆ. ಜಾನಪದ ಸಾಹಿತ್ಯ ಸಂಸ್ಕೃತಿಯ ಬೇರು, ಅದು ಅನಾದಿಕಾಲ ದಿಂದಲೂ ಬಂದಿದೆ. ಜಾನಪದ ಸಾಹಿತ್ಯದ ರುಚಿ ಉಂಡವರಿಗೆ ಗೊತ್ತು ಅದರ ಆಳ, ಅಗಲ ಹೀಗಾಗಿ ಇತ್ತಿಚೇಗೆ ಕಡಿಮೆಯಾಗತ್ತಿದೆ. ಅದಕ್ಕಾಗಿ ಮಕ್ಕಳಿಗೆ ಕಲಿಸುವ ಪ್ರಯತ್ನ ನಾವು ಮಾಡಬೇಕು



ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪುಷ್ಪಾ ಮುರಗೋಡ ಮಾತನಾಡಿ , ಜಾನಪದ ಸಾಹಿತ್ಯದದ ವಿವಿಧ ಪ್ರಕಾರಗಳಿಗೆ, ಜಾನಪದ ದೇಶದ ಜೀವಾಳ ಆ ಹಾಡುಗಳಲ್ಲಿ ನಾಡಿನ ಸಂಸ್ಕೃತಿಯೂ ಅಡಗಿದೆ ಎಂದರು.

ಡಾ. ಭವ್ಯ ಅವರ ಯಕ್ಷಗಾನವು ಎಲ್ಲರನ್ನೂ ಮಂತ್ರ ಮುಗ್ಧರನ್ನಾಗಿಸಿ ತಮ್ಮ ಅಭಿನಯ ಹಾಡು ಮಾತುಗಳಿಂದ ಚಕಿತಗೊಳಿಸಿದರು.

ಈ ವೇಳೆ ಹಿರಿಯ ಸಾಹಿತಿಗಳಾದ ಸುನಂದ ಎಮ್ಮಿ ( ಜನಪದ ತ್ರಿಪದಿಗಳಲ್ಲಿ ಸೋದರ ಸಂಬಂಧ) ಉಪನ್ಯಾಸ ನೀಡಿದರು. ಲೇಖಕಿಂ–ಯರ ಸಂಘ ಉಪಾಧ್ಯಕ್ಷರು ವಾಸಂತಿ ಮೇಳೇದ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು, ಮಹಾನಂದಾ ಪರುಶೆಟ್ಟಿ , ಡಾ. ಪದ್ಮ ಹೊಸಕೋಟೆ , ಸುನಿತಾ ಸೊಲ್ಲಾಪುರೆ, ಪ್ರಭಾ ಪಾಟೀಲ್ , ಜ್ಯೋತಿ ಮಾಳಿ, ಅಕ್ಕಮಹಾದೇವಿ ತಗ್ಗಿ , ದಾನಮ್ಮಾ ಅಂಗಡಿ ,ಸುನಂದಾ ಮುಳೆ, ವಿದ್ಯಾ ರೆಡ್ಡಿ ,ಶೋಭಾ ಬನಶಂಕರಿ , ದ್ರಾಕ್ಷಾಯಿಣಿ ತಾಪಸೆ , ಆಶಾ ಸಂಸುದ್ದಿ, ಗೀತಶ್ರೀ ಬೆಣಚಿನಮರಡಿ, ರುದ್ರಮ್ಮಾ ಯಾಳಗಿ, ಡಾ. ಅನ್ನಪೂರ್ಣ ಹಿರೇಮಠ ನಿರೂಪಿಸಿದರು. ಸುನಿತಾ ನಂದೆನ್ನವರ ವಂದಿಸಿದರು.

# ರೈತನಿಗೆ ಪರಿಹಾರ ಸಿಗದಿದ್ದರೆ ಹೋರಾಟದ ಎಚ್ಚರಿಕೆ

## ಬೇಜವಾಬ್ದಾರಿ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ ನಡಹಳ್ಳಿ: ತೋಳ ದಾಳಿಗೆ 10 ಕುರಿ ಬಲಿ, 10 ಗಾಯ, 5 ನಾಪತ್ತೆ

**ಮುದ್ದೇಬಿಹಾಳ:** ತಾಲೂಕಿನ ನಾಲತವಾಡ ಹೋಬಳಿ ವ್ಯಾಪ್ತಿಯ ನಾಗಬೇನಾಳ–ವೀರೇಶನಗರ ಗ್ರಾಮದ ಹತ್ತಿರ ಹೊಲವೊಂದರಲ್ಲಿ ಗೂಡು ಕಟ್ಟಿ ಕುರಿಗಳನ್ನು ವಾಸ್ತವ್ಯಕ್ಕಾಗಿ ಬಿಟ್ಟಿದ್ದ ಕುರಿ ಮಂದೆಯ ಮೇಲೆ ತೋಳಗಳು ದಾಳಿ ನಡೆಸಿದ ಪರಿಣಾಮ 10 ಕುರಿಗಳು ಬಲಿಯಾಗಿ, 10 ಕುರಿಗಳು ಗಾಯಗೊಂಡು, 5 ಕುರಿಗಳು ನಾಪತ್ತೆಯಾಗಿರುವ ಘಟನೆ ಬುಧವಾರ ಮಧ್ಯರಾತ್ರಿ ನಡೆದಿದ್ದು ಗುರುವಾರ ಬೆಳಕಿಗೆ ಬಂದಿದೆ.

ನಾಗಬೇನಾಳದ ಬಸವರಾಜ ಸಿದ್ದಪ್ಪ ಸುಲ್ತಾನಪುರ ಎನ್ನುವವರು ಕು–ರಿಮಂದೆಯನ್ನು ರಾತ್ರಿ ಒಂದೆಡೆ ಗೂಡು ಹಾಕಿ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಿದ್ದರು. ರಾತ್ರಿ ಏಕಾಏಕಿ ತೋಳಗಳ ಹಿಂಡು ದಾಳಿ ಇಟ್ಟಿದೆ. ನೋಡುತ್ತಿದ್ದಂತೆಯೇ ಅಂದಾಜು 40–50 ಸಂಖ್ಯೆಯಷ್ಟಿದ್ದ ಕುರಿಗಳು ದೊಡ್ಡಿ ಹಾರಿ ಓಡಿ ಹೋಗಲು ಹವಣಿಸಿವೆ. ಅಷ್ಟರೊಳಗೆ ಹಲವು ಕುರಿಗಳು ತೋಳದ ದಾಳಿಗೆ ಸಿಕ್ಕಿವೆ. ಒಂದು ಕುರಿಮರಿಯನ್ನು ಇಬ್ಭಾಗ ಮಾಡಿ ಹೊಟ್ಟೆಯ ಭಾಗವನ್ನು ತಿಂದು ಹಾಕಲಾಗಿದೆ. ಇನ್ನುಳಿದ ಕುರಿಗಳನ್ನು ಅಲ್ಲಲ್ಲಿ ಕಚ್ಚಿ, ಚರ್ಮ, ಮಾಂಸ ಎಳೆದಾಡಿವೆ. 9 ಕುರಿಗಳು ಸ್ಥಳದಲ್ಲೇ ಸಾವನ್ನಪ್ಪಿದರೆ ಒಂದು ಕುರಿತ ಮಾತ್ರ ಬೆಳಿಗ್ಗೆ 12 ಗಂಟೆಯಾದರೂ ವಿಲವಿಲ ಒದ್ದಾಡುತ್ತ ಜೀವ ಹಿಡಿದದ್ದು ಕಂಡು ಬಂತು. ಗಾಯಗೊಂಡಿರುವ 10 ಕುರಿಗಳಿಗೆ ಪಶು ಇಲಾಖೆಯ ವೈದ್ಯರು ತಾತ್ಕಾಲಿಕ ಆರೈಕೆ ಮಾಡಿದ್ದು ಅವು ಪ್ರಾಣಾಪಾಯದಿಂದ ಪಾರಾಗಿವೆ.



ಈ ಭಾಗದಲ್ಲಿ ಆಗಾಗ ಕುರಿಗಳ ಮೇಲೆ ತೋಳಗಳ ದಾಳಿ ನಡೆಯುತ್ತದೆ ಒಂದೋ, ಎರಡೋ ಕುರಿಗಳನ್ನು ತೋಳ ಎತ್ತಿಕೊಂಡು ಹೋಗುತ್ತವೆ. ಆದ–'ರೆ ಈ ಘಟನೆಯಲ್ಲಿ 10 ಕುರಿಗಳು ಸಾವನ್ನಪ್ಪಿರುವುದು ಕುರಿಗಾಹಿಗೆ ಆಘಾತ ಮೂಡಿಸಿದೆ. ಬಸವರಾಜನಿಗೆ ಅವರಿವರು ತಮ್ಮ ಕುರಿಗಳನ್ನು ಸಾಕಲು ಕೊಟ್ಟಿದ್ದರು. ಇದೀಗ ಅವರಿಗೆ ಏನು ಉತ್ತರ ಕೊಡಬೇಕು ಎನ್ನುವ ದಿಗ್ಭ್ರಮೆಯಲ್ಲಿ ಅವರಿದ್ದಾರೆ.

ಘಟನಾ ಸ್ಥಳಕ್ಕೆ ಶಾಸಕ ಸಿ.ಎಸ್.ನಾಡಗೌಡ, ತಹಶೀಲ್ದಾರ್ ಕೀರ್ತಿ ಚಾಲಕ್, ತಾಪಂ ಇಓ ವೆಂಕಟೇಶ ವಂದಾಲ ಇನ್ನಿತರರು ಭೇಟಿ ನೀಡಿ ಘಟನೆಗೆ ವಿಷಾಧ ವ್ಯಕ್ತಪಡಿಸಿ ನೊಂದ ಕುರಿಗಾಯಿಗೆ ಸೂಕ್ತ ಪರಿಹಾರದ ವ್ಯವಸ್ಥೆಯ ಭರವಸೆ ನೀಡಿದರು.

*ನಡಹಳ್ಳಿ ಭೇಟಿ: ವ್ಯವಸ್ಥೆ ವಿರುದ್ಧ ಆಕ್ರೋಶ ಘಟನಾ ಸ್ಥಳಕ್ಕೆ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ, ಮಾಜಿ ಶಾಸಕ ಎ. ಎಸ್.ಪಾಟೀಲ ನಡಹಳ್ಳಿಯವರು ಭೇಟಿ ನೀಡಿ ಬಸವರಾಜನಿಂದ ಘಟನೆಯ ಮಾಹಿತಿ ಪಡೆದುಕೊಂಡರು. ಪೊಲೀಸರು ಬಂದು ಎಫೈಆರ್ ದಾಖಲಿಸುವವರೆಗೂ ಕುರಿಗಾಹಿಗೆ ಸರ್ಕಾರದ ಸೌಲಭ್ಯ, ಪರಿಹಾರ ಸಿಗುವುದಿಲ್ಲ ಎನ್ನುವುದನ್ನು ಅರಿತ–ದ್ದ ಅವರು ಘಟನೆ ನಡೆದು 12–13 ಗಂಟೆಗಳ ಮೇಲಾದರೂ ಪೊಲೀಸರು, ಗ್ರಾಮ ಪಂಚಾಯಿತಿಯವರು, ಕಂದಾಯ ಇಲಾಖೆಯವರು ಸ್ಥಳಕ್ಕೆ ಆಗಮಿಸಿ ಘಟನೆಯ ವಿವರವನ್ನು ದಾಖಲಿಸಿಕೊಂಡು ಅಗತ್ಯ ಕ್ರಮ ಕೈಕೊಳ್ಳದಿರುವುದನ್ನು ಕೇಳಿ ಆಕ್ರೋಶಭರಿತರಾದರು. ನಡಹಳ್ಳಿಯವರು ಬರುವ ಸಮಯದಲ್ಲೇ ಅಲ್ಲಿಗೆ ಬಂದ ಗ್ರಾಮ ಆಡಳಿತಾಧಿಕಾರಿ ಗಂಗಾಧರ ಜೂಲಗುಡ್ಡ ಅವರನ್ನು ತರಾಟೆಗೆ ತೆಗೆದುಕೊಂಡು ಘಟನೆ ನಡೆದು ಬಹಳಷ್ಟು ಸಮಯವಾದರೂ ನೊಂದ ಕುರಿಗಾಹಿಗೆ ತಾತ್ಕಾಲಿಕ ಪರಿಹಾರ ಏಕೆ ವಿತರಿಸಿಲ್ಲ ಎಂದು ಹರಿಹಾಯ್ದರು. ಸ್ಥಳದಲ್ಲಿದ್ದ ಪಶು ಸಂಗೋಪನಾ ಇಲಾಖೆಯ ವೈದ್ಯರ ಕಾರ್ಯವನ್ನು ಪ್ರಶಂಶಿಸಿದ ಅವರು ಸರಿಯಾದ ವರದಿ ತಯಾರಿಸಿ ಕು–ರಿಗಾಹಿಗೆ ಸರ್ಕಾರ ನಿಗದಿಪಡಿಸಿದ ಪರಿಹಾರ ದೊರಕಿಸಿಕೊಡುವಂತೆ ತಿಳಿಸಿದರು. ಪಿಎಸೈ ಜೊತೆ ಮೊಬೈಲ್ ಫೋನ್‌ನಲ್ಲಿ ಮಾತನಾಡಿ ಇದುವರೆಗೂ ಪೊಲೀಸರನ್ನು ಕಳಿಸದೆ, ಎಫ್‌ಐಆರ್ ದಾಖಲಿಸದೆ ಬೇಜವಾಬ್ದಾರಿ ತೋರಿದ ನಡವಳಿಕೆಯನ್ನು ಖಂಡಿಸಿ ಕೂಡಲೇ ಪೊಲೀಸರನ್ನು ಸ್ಥಳಕ್ಕೆ ಕಳಿಸುವಂತೆ ತಿಳಿಸಿದರು. ಪಿಡಿಓ ಮುರುಗೆಮ್ಮ ಪೀರಾಪುರ ಅವರಿಗೆ ಸೂಚಿಸಿ ತಕ್ಷಣ ಗಾಯಗೊಂಡ, ಬದುಕುಳಿದ ಕುರಿಗಳಿಗೆ ಮೇವಿನ ವ್ಯವಸ್ಥೆ ಮಾಡುವಂತೆ ತಿಳಿಸಿದರು. ನಿರ್ಗಮಿಸುವಾಗ ಆಗಮಿಸಿದ ಮೂವರು ಪೊಲೀಸ್ ಪೇದೆಗಳನ್ನು ಜನರ ಎದುರೇ ತರಾಟೆಗೆ ತೆಗೆದುಕೊಂಡ ನಡಹಳ್ಳಿಯವರು ನೀವೂ ಕೂಡ ರೈತರ ಮಕ್ಕಳಾಗಿದ್ದು ರೈತರ ಕಷ್ಟಕ್ಕೆ ತಕ್ಷಣ ಸ್ಪಂಧಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ನೊಂದ ಕುರಿಗಾಯಿ ರೈತನಿಗೆ ಸೂಕ್ತ ಪರಿಹಾರ ಸಿಗದಿದ್ದರೆ ಹೋರಾಟ ನಡೆಸುವುದಾಗಿ ಎಚ್ಚರಿಸಿದರು. ಜಿಪಂ ಮಾಜಿ ಉಪಾಧ್ಯಕ್ಷರಾದ ಎಂ.ಎಸ್.ಪಾಟೀಲ, ಕೆ.ಆರ್.ಬಿರಾದಾರ, ಮುಖಂಡರಾದ ಗಿರೀಶಗೌಡ ಪಾಟೀಲ, ರವೀಂದ್ರ ಬಿರಾದಾರ, ಮುದಕಪ್ಪ ಗಂಗನಗೌಡರ, ಜಿ.ಮಹಾಂತಗೌಡ ಗಂಗನಗೌಡರ, ಈರಣ್ಣ ಮುದ್ನೂರ, ಸಂಗಪ್ಪ ಹಾವರಗಿ, ಭೀಮಣ್ಣ ಗುರಿಕಾರ, ಸಂಗಣ್ಣ ಸುಲ್ತಾನಪೂರ, ಭೀಮಣ್ಣ ರಕ್ಕಸಗಿ, ಮಣಿಕಂಠ ಆರೇಶಂಕರ ಇನ್ನಿತರರು ಇದ್ದರು.

# ರಾಷ್ಟ್ರೀಯ ಕ್ರೀಡಾ ದಿನ ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಮುಖ್ಯ: ಸಂತೋಷ ಬಂಡೆ



**ಇಂಡಿ:** ವ್ಯಕ್ತಿಯ ದೈಹಿಕ, ಮಾನಸಿಕ ಯೋಗಕ್ಷೇಮ ಮತ್ತು ಸರ್ವತೋಮುಖ ಬೆಳವಣಿಗೆಗೆ ಕ್ರೀಡೆಯು ಮುಖ್ಯವಾಗಿದ್ದು, ಇದು ಎಲ್ಲರಲ್ಲಿ ಏಕತೆಯ ಭಾವನೆಯನ್ನು ಮೂಡಿಸಿ, ರಾಷ್ಟ್ರೀಯತೆ ಮತ್ತು ದೇಶಪ್ರೇಮವನ್ನು ಬೆಳೆಸುತ್ತದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಶುಕ್ರವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಮೇಜರ್ ಧ್ಯಾನಚಂದ ಅವರ ಜನ್ಮದಿನದ ನಿಮಿತ್ತ ಹಮ್ಮಿಕೊಂಡ “ರಾಷ್ಟ್ರೀಯ ಕ್ರೀಡಾ ದಿನ”ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಯು ವ್ಯಕ್ತಿಯ ವ್ಯಕ್ತಿತ್ವವನ್ನು ಸುಧಾರಿಸಿ, ಅವರಲ್ಲಿ ಶಿಸ್ತು, ಕ್ರೀಡಾ ಮನೋಭಾವ, ತಂಡದ ಕೆಲಸ ಮತ್ತು ಸ್ಪರ್ಧಾತ್ಮಕತೆಯ ಮೌಲ್ಯಗಳನ್ನು ಕಲಿಸುತ್ತದೆ. ಅದು ವಿವಿಧ ಜನರನ್ನು ಒಟ್ಟುಗೂಡಿಸಿ, ಏಕತೆ ಮತ್ತು ಸೌಹಾರ್ದತೆಯನ್ನು ಉತ್ತೇಜಿಸುತ್ತದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಎಸ್ ಎಸ್ ಅರಬ ಮಾತನಾಡಿ, ಕ್ರೀಡೆಯಿಂದ ಸಾಮಾಜಿಕ ಕೌಶಲ್ಯ ಅಭಿವೃದ್ಧಿ ಹೊಂದಿ, ಅದು ದೇಶದ ಆರ್ಥಿಕತೆಗೆ ಸಹಾಯ ಮಾಡುತ್ತದೆ. ಕ್ರೀಡೆಯು ತಾಳ್ಮೆ, ಶಿಸ್ತು, ಪ್ರಾಮಾಣಿಕತೆ, ಸಮರ್ಪಣೆ ಮತ್ತು ಜೀವನದ ವೈಫಲ್ಯಗಳನ್ನು ಎದುರಿಸುವ ಸಾಮರ್ಥ್ಯವನ್ನು ಬೆಳೆಸುತ್ತದೆ ಎಂದು ಹೇಳಿದರು.

ಶಿಕ್ಷಕರಾದ ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ, ಅತಿಥಿ ಶಿಕ್ಷಕಿ ಅಲ್ಫಿಯಾ ಅಂಗಡಿ ಸೇ–ರಿದಂತೆ ಮಕ್ಕಳು ಪಾಲ್ಗೊಂಡಿದ್ದರು.

## ಜೀವನ ನಿರ್ವಹಣೆಗೆ ಅಗತ್ಯ ಕೌಶಲ್ಯಗಳನ್ನು ಕಲಿಸಲು ಕ್ರೀಡೆ ಸಹಾಯಕ : ವೈ. ಜೆ. ಭಜಂತ್ರಿ



**ಬೆಳಗಾವಿ** ; ಕ್ರೀಡೆಯು ಓರ್ವ ವ್ಯಕ್ತಿಯ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಆರೋಗ್ಯಕ್ಕೆ ಅತ್ಯಗತ್ಯವಾಗಿ ಬೇಕೆ ಬೇಕು. ಅದು ದೇಹವನ್ನು ಸದೃಢಗೊಳಿಸುವುದಲ್ಲದೇ ಒತ್ತಡ ಕಡಿಮೆ ಮಾಡಿ ಮಾನಸಿಕ ಏಕಾಗ್ರತೆ ಹೆಚ್ಚಿಸುತ್ತದೆ. ಅದಲ್ಲದೇ ಕ್ರೀಡೆ ನಾಯಕತ್ವ, ಶಿಸ್ತು, ತಾಳ್ಮೆ, ಮತ್ತು ಸಮಯ ನಿರ್ವಹಣೆಯಂತಹ ಜೀವನಕ್ಕೆ ಅಗತ್ಯವಾದ ಕೌಶಲ್ಯಗಳನ್ನು ಕಲಿಸುತ್ತದೆ ಎಂದು ನಗರ ಕ್ಷೇತ್ರ ಶಿಕ್ಷಣಾಧಿಕಾರಿ ವೈ. ಜೆ. ಭಜಂತ್ರಿ ಅಭಿಪ್ರಾಯಪಟ್ಟರು. ಅವರು ಇಂದು ನೆಹರು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸಿದ್ಧರಾಮೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ವಲಯ ಮಟ್ಟದ ಕ್ರೀಡಾಕೂಟ ಹಾಗೂ ರಾಷ್ಟ್ರೀಯ ಕ್ರೀಡಾ ದಿನ ಉದ್ಘಾಟಿಸಿ ಮಾತನಾಡಿದರು.

ಸಮಾರಂಭದ ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಸೊಲ್ಲಾಪುರದ ಶಿವಬಸವ ದೇವರು ಮಾತನಾಡಿ ಕ್ರೀಡೆಗಳು ಯುವಕರಲ್ಲಿ ಧನಾತ್ಮಕ ಮನೋಭಾವ ಮತ್ತು ಆತ್ಮ ವಿಶ್ವಾಸ ಬೆಳೆಸುವಲ್ಲಿ ಸಹಕಾರಿಯಾಗಿವೆ. ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಮನೋಭಾವದೊಂದಿಗೆ ಕ್ರೀಡೆಯಲ್ಲಿ ಪಾಲ್ಗೊಂಡು ಕ್ರೀಡಾ ಮನೋಭಾವ ಪ್ರದರ್ಶಿಸಿ ಪರಸ್ಪರ ಸಹಬಾಳ್ವೆಯಿಂದ ಬದುಕಬೇಕು ಎಂದರು.

ವೇದಿಕೆಯ ಮೇಲೆ ನಿವೃತ್ತ ಕಾಲೇಜು ಪ್ರಾಧ್ಯಾಪಕ ಜಿ.ಎನ್. ಪಾಟೀಲ, ಜಿಲ್ಲಾ ಸಂಯೋಜಕ ಪಿ.ಡಿ. ಶಿವನಾಯ್ಕರ್, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕಿ ಜೆ. ಬಿ. ಪಟೇಲ್, ಕ್ಷೇತ್ರ ಸಮನ್ವಯ ಅಧಿಕಾರಿ ಐ. ಡಿ. ಹಿರೇಮಠ, ಸಂಯೋಜಕ ರಾಜಸೇಖರ ಪಾಟೀಲ ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಸಿದ್ದರಾಮೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಪ್ರಾಚಾರ್ಯೆ ಪೂಜಾ ನಾಯಕ ಸ್ವಾಗತಿಸಿದರು. ಶಿಕ್ಷಕಿ ಸ್ವಾತಿ ಪೂಜಾರ ನಿರೂಪಿಸಿದರು. ಕೊನೆಗೆ ಫಾತೀಮಾ ಉಸ್ತಾದ್ ವಂದಿಸಿದರು.

****

## ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ ಪೂರ್ವ ಮತ್ತು ಮೆಟ್ರಿಕ ನಂತರದ ವಿದ್ಯಾರ್ಥಿ ವೇತನ ಮಂಜೂರಾತಿ; ಆಧಾರ್ ಸೀಡಿಂಗ್ ಅಭಿಯಾನ

**ಹುಬ್ಬಳ್ಳಿ** : ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಮೂಲಕ ವಿದ್ಯಾರ್ಥಿವೇತನ ಯೋಜನೆಗಳನ್ನು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ನೇರ ನಗದು ವರ್ಗಾವಣೆ ಮೂಲಕ ಅರ್ಹ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿ ವೇತನ ಪಾವತಿಸಲಾಗುತ್ತದೆ. ಆಧಾರ್ ಸೀಡಿಂಗ್ ಆಗದೇ ಇರುವ ಕೆಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಿಗೆ ತಾಂತ್ರಿಕ ಅಡೆತಡೆ ಉಂಟಾಗಿದೆ. ಅರ್ಹ ವಿದ್ಯಾರ್ಥಿಗಳು ಆಧಾರ್ ಸೀಡಿಂಗ್ ಮಾಡಿಸಿಕೊಳ್ಳಲು ಆಗಸ್ಟ 25 ರಿಂದ ಸೆಪ್ಟೆಂಬರ್ 7 ರವರೆಗೆ ವಿಶೇಷ “ಆಧಾರ್ ಸೀಡಿಂಗ್ ಅಭಿಯಾನ” ವನ್ನು ಜಿಲ್ಲಾ, ತಾಲೂಕು ಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿದ್ಯಾರ್ಥಿಗಳು **www.npci.org.in** ಲಿಂಕ್ ಬಳಸಿ ಆಧಾರ ಸೀಡಿಂಗ್ ಆಗಿರುವ ಕು–ರಿತು ಖಚಿತಪಡಿಸಿಕೊಳ್ಳುವುದು. ಯಾವುದಾದರು ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಮಾಹಿತಿಗೆ ಸಹಾಯಕ ನಿರ್ದೇಶಕರು, ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ, ಹುಬ್ಬಳ್ಳಿ ಕಚೇ–ರಿಯ ದೂರವಾಣಿ ಸಂಖ್ಯೆ 0836–2278066 ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿ ಎಚ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***

## ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಧಾರವಾಡ** : ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಒದಗಿಸಲು ಪರಿಶಿಷ್ಟ ಪಂಗಡ ಸಾಮಾನ್ಯ ನಿರುದ್ಯೋಗಿ ಯುವಕ, ಯವತಿಯರಿಗಾಗಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ವಿವಿಧ ಯೋಜನೆಗಳ ವಿವರ: ಸ್ವಯಂ ಉದ್ಯೋಗ ನೇರ ಸಾಲ ಯೋಜನೆ (ಘಟಕ ವೆಚ್ಚ ರೂ. 1,00,000 ಅದರಲ್ಲಿ ಶೇ. 50ರಷ್ಟು ಸಹಾಯಧನ ಮತ್ತು ಶೇ. 50ರಷ್ಟು ನಿಗಮದಿಂದ ನೇರ ಸಾಲವಾಗಿರುತ್ತದೆ).

ಉದ್ಯಮ ಶೀಲತಾ ಅಭಿವೃದ್ಧಿ ಹೈನುಗಾರಿಕೆ ಯೋಜನೆ (ಘಟಕ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಟ ರೂ.1,25,000 ಸಹಾಯಧನ ಉಳಿದ ಮೊತ್ತ ಬ್ಯಾಂಕ ಸಾಲವಾಗಿರುತ್ತದೆ).

ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ ಇತರ ಉದ್ದೇಶಕ್ಕಾಗಿ (ಘಟಕ ವೆಚ್ಚದ ಶೇ.70 ರಷ್ಟು ಅಥ–'ವಾ ಗರಿಷ್ಟ ರೂ.2,00,000 ಸಹಾಯಧನ ಉಳಿದ ಮೊತ್ತ ಬ್ಯಾಂಕ ಸಾಲವಾಗಿರುತ್ತದೆ).

ಉದ್ಯಮ ಶೀಲತಾ ಅಭಿವೃದ್ಧಿ ಸ್ವಾವಲಂಬಿ ಸಾರಥಿ ಯೋಜನೆ (ಘಟಕ ವೆಚ್ಚದ ಶೇ.75 ರಷ್ಟು ಅಥವಾ ಗರಿಷ್ಟ ರೂ.4,00,000 ಸಹಾಯಧನ ಉಳಿದ ಮೊತ್ತ ಬ್ಯಾಂಕ ಸಾಲವಾಗಿರುತ್ತದೆ).

ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ (ಸಂಘದ ಪ್ರತಿ ಸದಸ್ಯರಿಗೆ ಸಹಾಯಧನ ರೂ.25,000 ಮತ್ತು ಸಾಲ ರೂ. 25,000 ಒಟ್ಟು ರೂ. 50,000 ಗಳಾಗಿದೆ).

ಗಂಗಾ ಕಲ್ಯಾಣ ಯೋಜನೆ (ಸಣ್ಣ ಮತ್ತು ಅತಿ ಸಣ್ಣ ರೈತರ ಖುಷ್ಕಿ ಜಮೀನಿಗೆ ಕೊಳವೆ ಬಾವಿ ನೀರಾವರಿ ಸೌಲಭ್ಯ ಕಲ್ಪಿಸುವುದು).

ಭೂ ಒಡೆತನ ಯೋಜನೆ (ಭೂ ರಹಿತ ಕೃಷಿ ಕಾರ್ಮಿಕ ಮಹಿಳೆಯರಿಗೆ ಕನಿಷ್ಠ 0,20 ಎಕರೆ ಗರಿಷ್ಠ ಘಟಕ ವೆಚ್ಚದಲ್ಲಿ ಎಷ್ಟು ಬರುತ್ತೊ ಅಷ್ಟು ಜಮೀನು ಖರೀದಿಸಿ ಕೊಡುಲಾಗುವುದು)

ಆಸಕ್ತರು ಗ್ರಾಮಒನ್, ಬೆಂಗಳೂರು ಒನ್, ಹುಬ್ಬಳ್ಳಿ ಧಾರವಾಡ ಒನ್ ಅಥ–'ವಾ ಕರ್ನಾಟಕಾ ಒನ್ ಕೇಂದ್ರಗಳಲ್ಲಿ **https://sevasindhu.karnataka.gov,in** ವೆಬ್‌ಸೈಟ್ ಮೂಲಕ ಸಪ್ಟೆಂಬರ 17, 2025 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಲ್ಯಾಣ ಮಿತ್ರ ಸಹಾಯವಾಣಿ ಸಂಖ್ಯೆ: 9482–300–400 ಹಾಗೂ ನಿಗಮದ ವೆಬ್‌ಸೈಟ್ ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪರಿಸರ ಸ್ನೇಹಿ ಮಣ್ಣಿನ ಗಣಪನಿಗೆ ಭಾರಿ ಬೇಡಿಕೆ : 6 ಸಾವಿರಕ್ಕೂ ಅಧಿಕ ಗಣೇಶ ಮೂರ್ತಿಗಳ ಮಾರಾಟ

# ತಾಳಿಕೋಟೆ ಭಾಗದಲ್ಲಿ 175 ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ

**ವರದಿ ; ಜಿ.ಪಿ. ಘೋರ್ಪಡೆ**

**ತಾಳಿಕೋಟೆ,** ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳು ಒಳಗೊಂಡು ಸುಮಾರು 175 ಕಡೆಗಳಲ್ಲಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮಾಡಲಾಗಿದ್ದು ಆದರೆ ಈ ಭಾರಿ ಪರಿಸರ ಸ್ನೇಹಿಯಾದ ಮಣ್ಣಿನ ಗಣೇಶ ಮೂರ್ತಿಗಳಿಗೆ ಸಾಕಷ್ಟು ಬೇಡಿಕೆ ಬಂದಿದೆ.

ಪಟ್ಟಣದಲ್ಲಿ ಮೊದಲಿನಿಂದಲೂ ಗಣೇಶ ಮೂರ್ತಿಗಳ ತಯಾರಿಕರಾದ ದಿ.ಅಂಬವ್ವ ಭುಸಾರೆ ಅವರು ಮೊದಲಿನಿಂದಲೂ ಮಣ್ಣಿನ ಗಣೇಶ ಮೂರ್ತಿಗಳ ತಯಾ-ರಿಕೆಗೆ ಮುಂಚೂಣಿಯಲ್ಲಿ ಹೊಂದಿದ್ದರು ಅದರಂತೆ ಅವರ ಮೊಮ್ಮಗನಾದ ರಾಘವೇಂದ್ರ ಮೀರಜಕರ ಅವರೂ ಕೂಡಾ ತಮ್ಮ ಮನೆತನದ ಹಿಂದ ಕರ ಕುಷಲತೆ ಕಲಿತುಕೊಳ್ಳುವದರೊಂದಿಗೆ ಮಣ್ಣಿನ ಗಣೇಶ ಮೂರ್ತಿಗಳನ್ನು ತಯಾರಿಸಿ ಮಾರಾಟ ಮಾಡಿದ್ದಾರೆ ಅದರಂತೆ ದಿ.ಕುಭೇರಪ್ಪಾ ಭುಸಾರೆ ಅವರು ಕೂಡಾ ಸುಮಾರು 2 ತಲೆಮಾರುಗಳಿಂದಲೂ ಮಣ್ಣಿನ ಗಣೇಶ ಮೂರ್ತಿಗಳನ್ನು ತಯಾರಿಸುತ್ತಾ ಅದನ್ನೇ ತಮ್ಮ ವೃತ್ತಿಯನ್ನಾಗಿ ಮುಂದುವರೆಸಿಕೊಂಡು ಬಂದಿದ್ದರು ಸದ್ಯ ಅವರ ಮೊಮ್ಮಗ ಪ್ರದೀಪ ಭುಸಾರೆ ಅವರೂ ಕೂಡಾ ತಮ್ಮ ಸಹೋದರ ಅಲ್ಲದೇ ಮನೆಯಲ್ಲಿಯ ತಾಯಂದಿರರ ಸಹಾಯದೊಂದಿಗೆ ಮಣ್ಣಿನ ಗಣೇಶ ಮೂರ್ತಿಯಗಳನ್ನು ತಯಾರಿಸುತ್ತಾ ಮಾರಾಟ ಮಾಡುತ್ತಾ ಬಂದಿದ್ದಾರೆ ಆದ-ರೆ ಪ್ರತಿಭಾರಿಯೂ ಕೂಡಾ ಪ್ಲಾಸ್ಟರ್ ಆಪ್ ಪ್ಯಾರೀಸ್‌ದಿಂದ ತಯಾರಿಸಿದ ಗಣೇಶ ಮೂರ್ತಿಗಳಿಗೆ ಒತ್ತು ಕೊಡುತ್ತಾ ಬಂದಿದ್ದ ಜನರು ಈ ಭಾರಿ ಮಣ್ಣಿನ ಗಣೇಶ ಮೂರ್ತಿಗಳ ಕಡೆಗೆ ಜನರು ವಾಲಿರುವದು ತಮ್ಮ ಕರಕುಷಲತೆ ಕಲೆಗೆ ಮತ್ತೇ ಬೆಲೆ ಬಂದಂತಾಗಿದೆ ಎಂದು ಪ್ರದೀಪ ಭುಸಾರೆ ಅವರು ಪತ್ರಿಕೆಯೊಂದಿಗೆ ಸಂತಸವನ್ನು ಹಂಚಿಕೊಂಡರು.



ಅದರಂತೆ ಈಗಲೂ ಇನ್ನೂ ಕಾಶಿನಾಥ ಚಿತಾಪೂರ, ಗಂಗಾಧರ ಬಡಿಗೇರ, ಬಾಬು ಭುಸಾರೆ, ಅವರನ್ನೊಳಗೊಂಡು ಇನ್ನೂ ಹಲವರು ಮಣ್ಣಿನ ಗಣೇಶ ಮೂರ್ತಿಗಳ ತಯಾರಿಕೆಯ ಕರಕುಷಲತೆಯ ಕಲೆಯನ್ನು ಹೊಂದಿದ್ದು ಪರಿಸರ ಸ್ನೇಹಿ ಗಣೇಶ ಮೂರ್ತಿಗೆ ಜನರು ವಾಲಿದಷ್ಟು ಈ ಭಾಗದ ಸಾಕಷ್ಟು ಜನ ಗಣೇಶ ಮೂರ್ತಿಗಳ ತಯಾರಿಕೆಗಾರರಿಗೆ ವೃತ್ತಿಯ ಜೊತೆಗೆ ಆಸರೆ ಆದೀತೆಂಬ ಮಾತುಗಳು ಪರಿಸರ ಸ್ನೇಹಿಗಳಿಂದ ಕೇಳಿಬಂದವು.

ಪಟ್ಟಣದಲ್ಲಿ ಈ ಭಾರಿ ಗಣೇಶ ಮೂರ್ತಿಗಳು 50 ರೂ.ಯಿಂದ 65 ಸಾವಿರ ರೂ.ವರೆಗೆ ಮಾರಾಟವಾಗಿದ್ದು ತಾಳಿಕೋಟೆ ಪಟ್ಟಣ ಸೇರಿದಂತೆ ಈ ಭಾಗದಲ್ಲಿ ಸುಮಾರು 6 ಸಾವಿರಕ್ಕೂ ಅಧಿಕ ಗಣೇಶ ಮೂರ್ತಿಗಳು ಮಾರಾಟವಾಗಿವೆ ಎಂದು ಗಣೇಶ ಮೂರ್ತಿಗಳ ಮಾರಾಟಗಾರರು ಪತ್ರಿಕೆ ಸಂಪರ್ಕಿಸಿದಾಗ ತಿಳಿಸಿದ್ದು ಇದು ಅಲ್ಲದೇ ಕೊಲಾರ, ಬಳಗಾನೂರ, ಕೊಡೇಕಲ್ಲ, ನಾವದಗಿ, ಮಹಾಲಿಂಗಪೂರ, ಕೊಳ್ಯಾಳ, ಹಗರಗುಂಡ, ಕೊಣ್ಣೂರ, ಮಿಣಜಗಿ, ಕೊಡಗಾನೂರ, ಮೈಲೇಶ್ವರ, ತುಂಬಗಿ, ಪತ್ತೇಪೂರ, ಬಳಗಾನೂರ, ಹಿರೂರ, ತಮದಡ್ಡಿ, ನಗನೂರ, ಮುದ್ನೂರ, ಹುಣಸಗಿ, ಕರಿಭಾವಿ, ಗುತ್ತಿಬಸವಣ್ಣ, ಒಳಗೊಂಡಂತೆ ಇನ್ನೂ ಅನೇಕ ಕಡೆಗಳಿಂದ ಗಣೇಶ ಮೂರ್ತಿಗಳನ್ನು ಜನರು ಖರೀದಿಸಿ ತೆಗೆದುಕೊಂಡು ಹೋಗಿದ್ದಾರೆ.

ತಾಳಿಕೋಟೆ ಭಾಗದಲ್ಲಿ ಪ್ರತಿಷ್ಠಾಪನೆಗೊಂಡ ಸಾರ್ವಜನಿಕ ಗಣೇಶ ಮೂರ್ತಿಗಳಲ್ಲಿ 9ನೇ ದಿನಕ್ಕೆ 4 ಗಣೇಶ ಮೂರ್ತಿಗಳು, 7ನೇ ದಿನಕ್ಕೆ 60 ಗಣೇಶ ಮೂರ್ತಿಗಳು, 5ನೇ ದಿನಕ್ಕೆ 80 ಗಣೇಶ ಮೂರ್ತಿಗಳು ವಿಸರ್ಜನೆಗೊಳ್ಳಲಿವೆ. ತಾಳಿಕೋಟೆ ಪಟ್ಟಣದ ರಾಜವಾಡೆ ಬಡಾವಣೆ, ದ್ಯಾಮವ್ವದೇವಿ ಗುಡಿ, ಮಹಾದೇವ ಮಂದಿರ, ಕುಂಭಾರ ಗಲ್ಲಿ, ಕೈಲಾಸಪೇಠೆ, ಬಸವಣ್ಣ ದೇವರ ಮಂದಿರ, ಹಣಮಂತ ದೇವರ ಮಂದಿರ, ನಗರೇಶ್ವರ ಗುಡಿ, ಸಗರಪೇಠೆ, ಅನಂತಪೂರಪೇಠೆ, ಅಂಬಾಭವಾನಿ ಮಂದಿರ, ಸಜ್ಜನ ಸಮಾಜ, ಎಪಿಎಂಸಿ ಬಸವೇಶ್ವರ ಮಾರ್ಕೇಟ್, ಕೆ.ಇ.ಬಿ, ಕೆಎಸ್‌ಆರ್‌ಟಿಸಿ ಡಿಪೋ, ಡಾ. ಅಂಬೇಡ್ಕರ್ ನಗರ, ಆಶ್ರಯ ಬಡಾವಣೆ, ವಿವೇಕಾನಂದ ನಗರ, ಗಣೇಶ ನಗರ, ಎಸ್.ಕೆ.ನಗರ, ಬಾಲಗಂಗಾಧರ ತಿಲಕ ರಸ್ತೆಯಲ್ಲಿ ಹಿಂದೂ ಮಹಾ ಗಣಪತಿ ಮಹಾ ಮಂಡಳಿ, ಪೊಲೀಸ್ ಠಾಣೆ, ಕಾಮನಕಟ್ಟಿ ಒಳಗೊಂಡಂತೆ ಇನ್ನಿತರ ಬಡಾವಣೆಗಳಲ್ಲಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದೆ.

ಇದರಲ್ಲಿ ಹಿಂದೂ ಮಹಾ ಗಣಪತಿ ಮಹಾ ಮಂಡಳಿಯವರು ವಿಸರ್ಜನೆ ಸಮಯದಲ್ಲಿ ಡಿಜೆ ನಾದಕ್ಕೆ ಮತ್ತು ಪಟಾಕ್ಷೀಗೆ ಬ್ರೇಕ್ ಹಾಕಿದ್ದು ಸನಾತನ ಧರ್ಮದ ಸಂಸ್ಕೃತಿ ಸಂಸ್ಕಾರದ ಪದ್ದತಿಯಂತೆ ನಾಸಿಕ್ ಡೋಲ ಒಳಗೊಂಡಂತೆ ವಿವಿಧ ಗೊಂಭೆ ಕುಣಿತ ಅಲ್ಲದೇ ಇನ್ನಿತರ ಮಜಲಗಳೊಂದಿಗೆ ಗಣೇಶ ಮೂರ್ತಿಯನ್ನು ವಿಸರ್ಜಿಸಲು ತಿರ್ಮಾನಿಸಿದ್ದಾರೆ. 9ದಿನಗಳವರೆಗೆ ಕೂಡ್ರಲಿರುವ ಈ ಗಣೇಶ ಮೂರ್ತಿಯ ಸ್ಥಳದಲ್ಲಿ ಸನಾತನ ಧರ್ಮದ ತಳಹದಿಯಲ್ಲಿ ಸಂತರ ನೇತೃತ್ವದಲ್ಲಿ ವಿವಿಧ ಧಾರ್ಮಿಕ ಕಾರ್ಮಿಕ್ರಮಗಳಿಗೆ ಮಂಡಳಿಯು ಒತ್ತು ನೀಡಿದೆ.

---

> ವಿಘ್ನ ನಿವಾರಕ ಗಣೇಶ ಮೂರ್ತಿಯ ಖರೀದಿಯಲ್ಲಿ ಈ ಭಾರಿ ಅತೀ ಹೆಚ್ಚು ಜನರು ಮಣ್ಣಿನ ಗಣೇಶ ಮೂರ್ತಿಗಳ ಖರೀದಿಗೆ ಮುಂದಾಗುವದರೊಂದಿಗೆ ಪರಿಸರ ಸ್ನೇಹಿಯನ್ನು ವ್ಯಕ್ತಪಡಿಸಿರುವದು ಖುಷಿ ತಂದಿದೆ. ಇದರಿಂದ ನಮ್ಮ ಸಾಂಪ್ರದಾಯಕ ನಮ್ಮ ಕುಟುಂಭದ ಪುರಾತನ ವೃತ್ತಿಗೆ ಶಕ್ತಿ ಬಂದಂತಾಗಿದೆ.
>
> **ಪ್ರದೀಪ ಭುಸಾರೆ**
> **ಮಣ್ಣಿನ ಗಣೇಶ ಮೂರ್ತಿಯ ತಯಾರಕರು.**

## ಹೊಸಕೇರಿಯಲ್ಲಿ ಕೆರೆ ಹೂಳೆತ್ತುವ ಕಾಮಗಾರಿಗೆ ಭೂಮಿ ಪೂಜೆ



**ರಾಮದುರ್ಗ** : ಕೆರೆ ಹೂಳೆತ್ತುವುದರಿಂದ ಗ್ರಾಮದ ಜಾನುವಾರುಗಳಿಗೆ ಅನುಕೂಲವಾಗಲಿದ್ದು, ಅಂತರ್ಜಲ ಹೆಚ್ಚಳವಾಗುತ್ತದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಜಿಲ್ಲಾ ನಿರ್ದೇಶಕ ಎಚ್. ಆರ್. ಲವಕುಮಾರ ಹೇಳಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಹೊಸಕೇರಿ ಗ್ರಾಮ ಪಂಚಾಯಿತಿ ಹಾಗೂ ಕೆರೆ ಅಭಿವೃದ್ಧಿ ಸಮೀತಿ ಸಂಯುಕ್ತ ಆಶ್ರಯದಲ್ಲಿ ನಮ್ಮೂರು ನಮ್ಮ ಕೆರೆ ಯೋಜನೆ ಅಡಿಯಲ್ಲಿ ತಾಲೂಕಿನ ಹೊಸಕೇರಿ ಗ್ರಾಮದ ಮಾಸ್ತಮ್ಮನ ಕೆರೆ ಹೂಳೆತ್ತುವ ಕಾಮಗಾ-ರಿಗೆ ಈಚೆಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿ, ಸಂಸ್ಥೆ ಈ ವೆರೆಗೆ ರಾಜ್ಯದಲ್ಲಿ 1000ಕ್ಕೂ ಹೆಚ್ಚು ಕೆರೆ ಹೂಳೆತ್ತಿ ಅಭಿವೃದ್ಧಿ ಪಡಿಲಾಗಿದೆ. ತಾಲೂಕಿನಲ್ಲಿ ಪಂಚಗಾಂವ, ಕುಳ್ಳೂರು, ಚನ್ನಾಪೂರ, ತೋರಣಗಟ್ಟಿ, ಹೊಸಕೇರಿ ಸೇರಿದಂತೆ ಒಟ್ಟು 5 ಕೆರೆ ಅಭಿವೃದ್ಧಿಗೆ ಸಂಸ್ಥೆ ಶ್ರಮಿಸಿದೆ ಎಂದು ಹೇಳಿದರು.

ಈ ವೇಳೇ ಪ್ರಾದೇಶಿಕ ವ್ಯಾಪ್ತಿಯ ಕೆರೆ ಅಭಿಂತರರು ಲಿಂಗರಾಜ ಅವರು ಕೆರೆಯ ರೂಪೂ ರೇಷೆಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೆರೆ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಫಕೀರಪ್ಪ ಬೆಳವಣಿಕಿ, ಒಕ್ಕೂಟದ ಅಧ್ಯಕ್ಷ ಉಮೇಶ ಕನಕನ್ನವರ, ಪ್ರಕಾಶ ತಳವಾರ ಸೇರಿದಂತೆ ಸಮಿತಿಯ ಸದಸ್ಯರು ಗ್ರಾ.ಪಂ. ಸದಸ್ಯರು ಗ್ರಾಮದ ಹಿರಿಯರು ಭಾಗವಹಿಸಿದರು.

ತಾಲೂಕು ಯೋಜನಾಧಿಕಾರಿ ಸಚಿನ್ ಸ್ವಾಗತಿಸಿದರು. ವಲಯ ಮೇಲ್ವಿಚಾರಕ ಕೇಶವ ಕಾರ್ಯಕ್ರಮ ನಿರೂಪಿಸಿದರು. ಕೃಷಿ ಅಧಿಕಾರಿ ಪ್ರದೀಪ್ ವಂದಿಸಿದರು.

## ಪ್ರವಾಹ : ಗೋವನಕೊಪ್ಪ ಗ್ರಾಮದಲ್ಲಾದ ಹಾನಿ ವೀಕ್ಷಿಸಿದ ಡಿಸಿ



**ಬಾಗಲಕೋಟೆ:** : ಮಲಪ್ರಭಾ ನದಿ ಪ್ರವಾಹದಿಂದ ಹಾನಿಗೊಳಗಾದ ಬಾದಾಮಿ ತಾಲೂಕಿನ ಗೋವನಕೊಪ್ಪದ ಗ್ರಾಮ ವಿವಿಧ ಕೃಷಿ, ತೋಟಗಾರಿಕೆ ಬೆಳೆ ಹಾಗೂ ಶಾಲಾ ಕೊಠಡಿಗಳನ್ನು ಜಿಲ್ಲಾಧಿಕಾರಿ ಸಂಗಪ್ಪ ಗುರುವಾರ ವೀಕ್ಷಣೆ ಮಾಡಿದರು.

ಗೋವನಕೊಪ್ಪ ಗ್ರಾಮಕ್ಕೆ ಬೇಟಿ ನೀಡಿದ ಜಿಲ್ಲಾಧಿಕಾರಿಗಳು ಅತಿವೃಷ್ಟಿ, ಪ್ರವಾಹದಿಂದ ಸರ್ವೆ ನಂ.11/1ರ ಭೀಮಪ್ಪ ಹೂವಪ್ಪ ಯರಗೊಪ್ಪ ಅವರ ಜಮೀನಿನಲ್ಲಿ ಹಾನಿಯಾದ ಈರುಳ್ಳಿ ಬೆಳೆಯನ್ನು ವೀಕ್ಷಣೆ ಮಾಡಿದರು. ಅಲ್ಲದೇ ಸರ್ವೆ ನಂ.49/2ರ ಬಾಳಪ್ಪ ಕೊಟಗಿ ಜಮೀನಿನಲ್ಲಿ ಬೆಳೆದ ಪೇರಲ, ಸರ್ವೆ ನಂ.50/3ರ ತುಳಸಿಗಿರೆಪ್ಪ ಸಣ್ಣಪ್ಪನವರ, ಸರ್ವೆ ನಂ.50/4ರ ಹೂಳಿಯಪ್ಪ ಸಣ್ಣಪ್ಪನವರ ಜಮೀನಿನಲ್ಲಿ ಬೆಳೆದ ಕಬ್ಬು ಹಾಗೂ ಸರ್ವೆ ನಂ.8/6 ಯಂಕಪ್ಪ ಕರಕಿಕಟ್ಟಿ ಅವರ ಜಮೀನಿನಲ್ಲಿ ಬೆಳೆದ ಮೆಕ್ಕೆಜೋಳ ಹಾನಿಯಾಗಿರುವದನ್ನು ವೀಕ್ಷಣೆ ಮಾಡಿದರು. ಜಮೀನಿನಲ್ಲಿ ನೀರಿನ ಮಟ್ಟ ಕಡಿಮೆಯಾದ ನಂತರ ವಿವಿಧ ಇಲಾಖೆಯಿಂದ ಜಂಟಿ ಸಮೀಕ್ಷೆ ಕೈಗೊಂಡು ಸೂಕ್ತ ಪರಿಹಾರಕ್ಕಾಗಿ ಸರಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಗೋವನಕೊಪ್ಪ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೆ ಬೇಟಿ ನೀಡಿ ಅವರು ಶಾಲಾ ಕೊಠಡಿಗಳನ್ನು ವಿಕ್ಷಣೆ ಮಾಡಿ, ಕೊಠಡಿಗಳು ಶಿಥಿಲಗೊಂಡಿರುವದನ್ನು ಕಂಡು ತಾತ್ಕಾಲಿಕ ಶೆಡ್ಡ್‌ಗಳನ್ನು ನಿರ್ಮಾಣ ಮಾಡುವ ಮೂಲಕ ವಿಧ್ಯಾರ್ಥಿಗಳಿಗೆ ಪಾಠ ಭೋದನೆಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲು ಮುಖ್ಯೋಪಾಧ್ಯಾಯರಿಗೆ ಸೂಚನೆ ನೀಡಿದರು. ನಂತರ ಗ್ರಾಮದಲ್ಲಿರುವ ಸೇತುವೆಗೆ ಬೇಟಿ ನೀಡಿ, ನೀರಿನ ಮಟ್ಟವನ್ನು ಪರಿಶೀಲಿಸಿದರು. ನದಿ ಪಾತ್ರದಲ್ಲಿ ಒತ್ತುವರಿಯಾಗಿರುವುದನ್ನು ಗಮನಿಸಿ, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯ ಕೇಂದ್ರ (ಏಖಖ-ಖಂಖಅ) ದಿಂದ ಕೂಡಲೇ ನಕಾಶೆಯನ್ನು ಪಡೆದು ಒತ್ತುವರಿ ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ಬಾದಾಮಿ ತಹಶೀಲ್ದಾರ ಕಾವ್ಯಶ್ರೀಗೆ ಸೂಚಿಸಿದರು.

ಹಾನಿ ವೀಕ್ಷಣೆ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕ ಅಶೋಕ ತಿರಕನ್ನವರ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಬಾಳನಗೌಡ ಪಾಟೀಲ, ಕುಳಗೇರಿ ಹೋಬಳಿ ಮಟ್ಟದ ಕಂದಾಯ ನಿರೀಕ್ಷಕ ಶ್ರೀಧರ ವಿಶ್ವಕರ್ಮ ಹಾಗೂ ಗ್ರಾಮ ಲೆಕ್ಕಾಧಿಕಾರಿ ಬಸವರಾಜ ಹಳ್ಳೂರ ಸೇರಿದಂತೆ ಇತರರು ಇದ್ದರು.

## ಸೆ.01 ಫೋನ್-ಇನ್ ಕಾರ್ಯಕ್ರಮ

**ವಿಜಯಪುರ,** : ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ವಿಜಯಪುರ ವತಿಯಿಂದ ಪ್ರಯಾಣಿಕರ ಅನುಕೂಲಕ್ಕಾಗಿ ಅಹವಾಲು ಮತ್ತು ಕುಂದು-ಕೊರತೆಗಳನ್ನು ಆಲಿಸಲು ದಿನಾಂಕ:01-09-2025ರ ಸೋಮವಾರ ಮಧ್ಯಾಹ್ನ 3.30 ರಿಂದ 4.30ರವರೆಗೆ ಫೋನ್-ಇನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ದೂರವಾಣಿ 6366423887 ಸಂಖ್ಯೆಗೆ ಸಾರ್ವಜನಿಕರು ಕರೆ ಮಾಡಿ, ತಮ್ಮ ಕುಂದು-ಕೊರತೆಗಳನ್ನು ಪರಿಹರಿಸಿಕೊಳ್ಳಬಹುದಾಗಿದ್ದು, ಸಾರ್ವಜನಿಕರು ಫೋನ್-ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ನಾರಾಯಣಪ್ಪ ಕುರುಬರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚೆಸ್: ಜಿಲ್ಲಾ ಮಟ್ಟಕ್ಕೆ ಆಯ್ಕೆ



**ಮೂಡಲಗಿ** : ಪಟ್ಟಣದಲ್ಲಿ ನಡೆದ ತಾಲೂಕಾ ಮಟ್ಟದ 14 ವರ್ಷದೊಳಗಿನ ಚೆಸ್ ಸ್ಪರ್ಧೆಯಲ್ಲಿ ಧರ್ಮಟ್ಟಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಲಕ್ಷ್ಮಿ ಬಸಪ್ಪ ಕಿಲಾರಿ ಈತಳು ಗೆದ್ದು, ಜಿಲ್ಲಾಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಸದರಿ ವಿದ್ಯಾರ್ಥಿನಿಯನ್ನು ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರು ಮತ್ತು ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕ ಸಿಬ್ಬಂದಿ ಅಭಿನಂದಿಸಿದ್ದಾರೆ.

## ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ: ಅರ್ಜಿ ಅವಧಿ ವಿಸ್ತರಣೆ

ಬೆಳಗಾವಿ, : 2025-26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್,ಬೌದ್ಧ, ಸಿಖ್ ಹಾಗೂ ಪಾರ್ಸಿ) ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್, ಗ್ರೂಪ್-ಸಿ, ಆರ್‌ಆರ್‌ಬಿ & ಎಸ್. ಎಸ್.ಸಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗೆ ರಾಜ್ಯಾದ್ಯಾಂತ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಸಲ್ಲಿಸಲು 26 ಆಗಸ್ಟ್ 2025 ನಿಗದಿಪಡಿಸಲಾಗಿ-ತ್ತು, ಅಭ್ಯರ್ಥಿಗಳ ಕೋರಿಕೆಯನುಸಾರ 06 ಸೆಪ್ಟೆಂಬರ್ 2025 ರವರೆಗೆ ಅವಧಿ ವಿಸ್ತ-ರಿಸಲಾಗಿದೆ ಸೇವಾಸಿಂಧು ಪೋರ್ಟಲ್ **(http://sevasindhu.karnataka.gov.in)** ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಹಾಗೂ ತಾಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಿಂದ ಪಡೆಯಬಹುದಾಗಿದೆ ಎಂದು ಅಲ್ಪಸಂಖ್ಯಾತರ ನಿರ್ದೇಶನಾಲಯದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

ಬೆಳಗಾವಿ, : 2025-26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿ ಯಾತ್ರೆಗೆ ಪ್ರಯಾಣಿಸಲು ಹಾಗೂ ಹಿಂದಿರುಗಿ ಬರುವ ಸಂಬಂಧ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬಸ್ಸು ಮತ್ತು ರೈಲಿನ ಮೂಲಕ ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. ಡಾ.ಬಿ.ಆರ್.ಅಂಬೇಡ್ಕರ್ ದೀಕ್ಷಾಭೂಮಿ ಸಂದರ್ಶಿಸಲು ಬಯಸುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ **https://swd.karnataka.gov.in** ಮೂಲಕ 9 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಬೆಳಗಾವಿ ಕಛೇರಿ ಹಾಗೂ ತಾಲೂಕು ಮಟ್ಟದ ಕಛೇರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಖಾನಾಪೂರ ಸಹಾಯಕ ನಿರ್ದೇಶಕರು (ಗ್ರೇಡ-2) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಬ್ಬವೆಂದರೆ ಮನ - ಮನೆಗಳಲ್ಲಿ ಬಣ್ಣಿಸಲಾಗದ ಸಡಗರ ಸಂಭ್ರಮ




**ಜಮಖಂಡಿ** : ಹಬ್ಬವೆಂದರೆ ಮನ - ಮನೆಗಳಲ್ಲಿ ಬಣ್ಣಿಸಲಾಗದ ಸಡಗರ ಸಂಭ್ರಮ, ಮನೆಯನ್ನು ಅಲಂಕರಿಸುತ್ತಾ ಹೋದಂತೆ ಹಬ್ಬ ಮನೆನಷ್ಟೇ ಅಲ್ಲದೆ ನಮ್ಮ ಮನವನ್ನು ಆವರಿಸುತ್ತಾ ಹೋಗುತ್ತದೆ, ಪ್ರತಿ ಮನೆಯಲ್ಲಿ ಪುಟ್ಟ ಗಣಪವನ್ನು ಕೂರಿಸಿ ಅವನಿಗೊಂದು ಮಂಟಪ ಮಾಡಿ ಅದನ್ನು ಅಲಂಕರಿಸಿ ಸಂಭ್ರಮದಿಂದ ಆಚರಣೆ ಮಾಡುತ್ತಾರೆ.

ಮನೆಯಲ್ಲಿ ಅಲಂಕಾರಗೊಂಡಿರುವ ಗಣಪತಿ :
ಜಮಖಂಡಿ ತಾಲೂಕಿನ ಕಡಪಟ್ಟಿ ಗ್ರಾಮದ ಪುರಾತನ ಕಾಲದ ಪವಾಡ ಬಸವಣ್ಣ ದೇವಸ್ಥಾನದ ಜಾತ್ರೆ ಸಮಯಡಲ್ಲಿ ಅಷ್ಟೇ ನೋಡೋದು ಆದರೆ, ನಗರದ ದತ್ತ ಕಾಲೋನಿಯ ಮಹೇಶ್ ಮೊಟ್ಟೆಕರ ಎಂಬ ಯುವಕ ತಮ್ಮ ಮನೆಯ ಗಣಪತಿಯನ್ನು ಪವಾಡ ಬಸವಣ್ಣ ಜಾತ್ರೆ ವೈಭವವನ್ನು ಅಲಂಕಾರ ಮಾಡೋ ಮೂಲಕ ಎಲ್ಲರ ಗಮನ ಸೆಳೆದಿದ್ದಾನೆ 10 ರಿಂದ 15 ದಿನಗಳವರೆಗೆ ಅಲಂಕಾರ ಮಾಡುವಲ್ಲಿ ಪ್ರಯತ್ನಪಟ್ಟು ಜಾತ್ರೆ ವಿಶಿಷ್ಟತೆಯನ್ನು ಜನರಿಗೆ ಸಾರಿದ್ದಾನೆ ಜಾತ್ರೆಯ ವೈಭವ ಹೇಗೆ ನಡೆಯುತ್ತದೆಯೋ ಹಾಗೆ ತನ್ನ ಕಲಾಕೃತಿಯಲ್ಲಿ ಮಾಡಿದ್ದಾನೆ.



**ಬದ್ರಿನಾಥ ಪ್ರವೇಶ ದ್ವಾರದಲ್ಲಿ ಅಲಂಕಾರ ಗೊಂಡಿರುವ ಗಣಪತಿ :** ಉತ್ತರಖಂಡದ ಚಮೋಲಿ ಜಿಲ್ಲೆಯ ಶ್ರೀ ಕ್ಷೇತ್ರ ಬದ್ರಿನಾಥ ವಿಷ್ಣುವಿನ ಅರ್ಪಿತವಾದ ಹಿಂದೂ ದೇವಾಲಯದ ಪ್ರವೇಶದ್ವಾರವನ್ನು ಗಮನದಲ್ಲಿಟ್ಟುಕೊಂಡು ತಮ್ಮ ಮನೆಯ ಗಣಪತಿ ಅಲಂಕ-ರಿಸಿದ ಸದಾನಂದ ಕಾಲೋನಿ ಕಲಾವಿದ ಅಶೋಕ್ ಭೋವಿ ಆ ದೇವಾಲಯದ ಮಹತ್ವ ಸಾರಲು ದ್ವಿತೀಯ ಭೂಮಿಯಲ್ಲಿ ತಳವಿಲ್ಲದ ಗುಂಡಿಯಲ್ಲಿ ಅನೇಕ ಪವಿತ್ರ ಸ್ಥಳಗಳಾಗಿದೆ ಬದ್ರಿ ಹಂತ ದೇವಾಲಯ ಈ ಸಂದೇಶ ಸಾರುವ ಮೂಲಕ ಗಮನ ಸೆಳೆದಿದ್ದಾರೆ.

## ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಚುನಾವಣೆಗೆ ರೈತ ಹೋರಾಟಗಾರರು ಅಭ್ಯರ್ಥಿಗಳಾಗಲು ಚರ್ಚಿಸಲು ಸಭೆ




**ರಾಮದುರ್ಗ** : ಸೆ.14 ರಂದು ನಡೆಯಲಿರುವ ತಾಲೂಕಿನ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯ ಚುನಾವಣೆಗೆ ಪ್ರಸಕ್ತ ಆಡಳಿತ ಮಂಡಳಿಯ ವಿರೋಧಿ ಪೆನಲ್‌ನಲ್ಲಿ ರೈತ ಹೋರಾಟಗಾರರು ಅಭ್ಯರ್ಥಿಗಳಾಗಲು ಅವಕಾಶ ನೀಡುವಂತೆ ಆಗ್ರಹಿಸಲು ಜಾತ್ಯಾತೀತ ರೈತರ ಸಭೆಯನ್ನು ಅಗಸ್ಟ್-30 ರಂದು 11 ಘಂಟೆಗೆ ತಾಲೂಕಿನ ತುರನೂರ ಶ್ರೀ ಸಿದ್ಧಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಕರೆಯಲಾಗಿದೆ ಎಂದು ರೈತ ಮುಖಂಡ ಶಂಕರಗೌಡ ಪಾಟೀಲ ಹೇಳಿದರು.


ಪಟ್ಟಣದ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಡಳಿತ ಮಂಡಳಿಯ ಸ್ವ-ಹಿತಾಶಕ್ತಿಯಿಂದ ಸುಮಾರು 21 ಸಾವಿರ ಶೇರುದಾರ ಮತದಾರರ ಪೈಕಿ ಕೇವಲ 4500 ಮತದಾರರು ಮತದಾನ ಮಾಡುವಂತೆ ಷಢ್ಯಂತ್ರ ರೂಪಿಸಲಾಗಿ-ತ್ತು. ರೈತ ಹೋರಾಟಗಾರರ ಹೋರಾಟದ ಪ್ರತಿಫಲವಾಗಿ. ಇಂದು ಸುಮಾರು 19 ಸಾವಿರಕ್ಕೂ ಅಧಿಕ ಶೇರುದಾರರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಆಗುವಂತಾಗಿದೆ.

ಕಾರ್ಖಾನೆಯ ಹಾಗೂ ರೈತರ ಹಿತದೃಷ್ಠಿಯಿಂದ ರೈತ ಹೋರಾಟಗಾರರು ಕಾರ್ಖಾನೆಯ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಸ್ಪರ್ಧಿಸಲು ವಿವಿಧ ರೈತ ಸಂಘಟನಗಳ ಮುಖಂಡರು ಚರ್ಚಿಸಿದ್ದೇವೆ. ಪ್ರಕಸ್ತ ಆಡಳಿತ ಮಂಡಳಿಯ ವಿರೋಧಿ ಬಣದವರು ತಮ್ಮ ಪೆನಲ್‌ನಲ್ಲಿ ರೈತ ಹೋರಾಟಗಾರರಿಗೆ ಅವಕಾಶ ನೀಡದೇ ಹೋದಲ್ಲಿ ಹೋರಾಟಗಾರರ ಸುಮಾರು 18 ಅಭ್ಯರ್ಥಿಗಳನ್ನು ತಯಾರಿ ಮಾಡಿದ್ದೇವೆ. ಅಗಸ್ಟ್-30 ರಂದು ನಡೆಯುವ ಸಭೆಯಯಲ್ಲಿ ಅಧಿಕ ಸಂಖ್ಯೆಯ ರೈತ ಮುಖಂಡರು ಪಾಲ್ಗೊಂಡು ಸಭೆ ಯಶಸ್ವಿಗೊಳಿಸಬೇಕು. ಸಭೆಯ ನಂತರ ಚುನಾವಣೆಲ್ಲಿ ರೈತ ಹೋರಾಟಗಾರರ ಸ್ಪರ್ಧೆಯ ಅಂತಿಮ ತಿರ್ಮಾಣ ತೆಗೆದುಕೊಳ್ಳಲಾಗುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಉತ್ತರ ಕರ್ನಾಟಕ ರೈತ ಸಂಘದ ಅಧ್ಯಕ್ಷ ಬಸವರಾಜ ಕ-ರಿಗಾರ, ಸದಾಶಿವ ಮಾತನವರ, ಸದಾಶಿವ ಉತ್ತೂರ, ವಿಠ್ಠಲ ಕುಂಬಾರ, ನಿಂಗಪ್ಪ ಗುದಗಿ, ಮೆಹಬೂರ ಪಾಟೀಲ ಸೇರಿದಂತೆ ಇತರರಿದ್ದರು.

### ರಾಷ್ಟ್ರೀಯ ಕ್ರೀಡಾ ದಿನಾಚರಣೆ

## ಧ್ಯಾನ್ ಚಂದ್ ಇಂದಿನ ಪೀಳಿಗೆಗೆ ಪ್ರೇರಣೆಯಾಗಿದ್ದಾರೆ - ಪ್ರೊ. ಶಂಕರ



**ಮೂಡಲಗಿ** : ಭಾರತದ ದಂತಕಥೆ ಹಾಗೂ ಸಾರ್ವಕಾಲಿಕ ಶ್ರೇಷ್ಠ ಹಾಕಿ ಆಟಗಾರ ಮೇಜರ್ ಧ್ಯಾನ್ ಚಂದ್ ಅವರ ಕೊಡುಗೆಯನ್ನು ಗುರುತಿಸಲು ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲಾಗುತ್ತದೆ. ಧ್ಯಾನ್ ಚಂದ್ ಅವರು ಇಂದಿನ ಪೀಳಿಗೆಯವರಿಗೆ ಪ್ರೇರಣೆಯಾಗಿದ್ದಾರೆ. ಕ್ರೀಡಾಲೋಕದಲ್ಲಿ ಭಾರತದ ಹಾಕಿ ತಂಡ ಆಧಿಪತ್ಯ ಮೆರೆಯುವಂತೆ ಮಾಡಿದ್ದರು ಎಂದು ಎನ್ನೆಸ್ಸೆಸ್ ಕಾರ್ಯಕ್ರಮಾಧಿಕಾರಿ ಪ್ರೊ. ಶಂಕರ ನಿಂಗನೂರ ಹೇಳಿದರು.

ಅವರು ಶುಕ್ರವಾರ ತಾಲೂಕಿನ ಕಲ್ಲೋಳಿ ಪಟ್ಟಣದ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಕ್ರೀಡಾ ವಿಭಾಗ ಇವುಗಳ ಸಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು. 1928, 1932 ಮತ್ತು 1936ರ ಒಲಿಂಪಿಕ್ಸ್ ಕ್ರೀಡಾಕೂಟಗಳಲ್ಲಿ ಧ್ಯಾನ್ ಚಂದ್ ಸಾರಥ್ಯದ ಭಾರತ ತಂಡ ಚಿನ್ನದ ಪದಕಗಳನ್ನು ಗೆದ್ದು ಕೀರ್ತಿ ತಂದಿತ್ತು. ಅಮೋಘ ತಂತ್ರಗಾರಿಕೆಯನ್ನು ಮೈಗೂಡಿಸಿಕೊಂಡಿದ್ದ ಧ್ಯಾನ್ ಚಂದ್ ಹಾಕಿ ಲೋಕದಲ್ಲಿ 'ಮಾಂತ್ರಿಕ' ಎಂಬ ಬಿರುದನ್ನು ಪಡೆದಿದ್ದಾರೆ ಎಂದರು.

ಪ್ರೊ.ಡಿ.ಎಸ್. ಹುಗ್ಗಿ ಪ್ರತಿಜ್ಞೆ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ದೈಹಿಕ ನಿರ್ದೇಶಕ ಬಿ.ಕೆ. ಸೊಂಟನವರ, ಕ್ರೀಡಾ ಕಾರ್ಯದರ್ಶಿ ಬಿ.ಬಿ. ವಾಲಿ, ಡಾ. ಎಂ.ಬಿ. ಕುಲಮೂರ, ಡಾ. ಕೆ.ಎಸ್.ಪರವ್ವಗೋಳ, ಆರ್.ಎಸ್. ಪಂಡಿತ, ವಿ.ವಾಯ್. ಕಾಳೆ, ವಿ.ಪಿ. ಕೆಳಗಡೆ, ಸಂತೋಷ ಬಂಡಿ, ಮಲ್ಲಪ್ಪ ಕರಗಣ್ಣಿ, ಬಿ.ಸಿ. ಮಾಳಿ ಮುಂತಾದವರು ಉಪಸ್ಥಿತರಿದ್ದರು.

## ಹೀಗೊಬ್ಬ ರಾಜು ಕಾಗೆ ಅಭಿಮಾನಿ : ಎದೆಯ ಮೇಲೆ ಚಿತ್ರ. ಬಿಡಿಸಿಕೊಂಡಿದ್ದಾನೆ

**ಸಿದ್ದಯ್ಯ ಹಿರೇಮಠ**


ಮೋಳೆ ;- ರಾಜಕೀಯ ವ್ಯಕ್ತಿಗಳ ಪರ ಅಭಿಮಾನ ಹೊಂದಿರುವುದು ಹೊಸತೇನಲ್ಲ. ವಿವಿಧ ರಾಜ್ಯ,ದೇಶ ಅಷ್ಟೇ ಏಕೆ ಹೊರ ದೇಶಗಳಲ್ಲಿಯೂ ಇಂತಹ ಉದಾಹರಣೆಗಳನ್ನು ಕಾಣಬಹುದು. ಇಂತಹ ಅಭಿನಾನಿಗಳ ಸಾಲಿಗೆ ಜಕಾರಟ್ಟಿ ಗ್ರಾಮದ ಗಣೇಶ ಖಟ್ಟೆ ಎಂಬ ಯುವಕ ಸೇರಿದ್ದಾನೆ. ಅಷ್ಟೇ ...ಸುದ್ದಿಯೂ ಆಗಿದ್ದಾನೆ.

ಸಾಮಾನ್ಯವಾಗಿ ತಮ್ಮ ಆತ್ಮೀಯ ಮುಖಂಡರು ಚುನಾವಣೆಗೆ ಸ್ಪರ್ದಿಸಿದಾಗ ಗೆಲುವು ಸಾದಿಸಲಿ, ಅಥವಾ ಗೆದ್ದು ಬಂದ ಮೇಲೆ ಅವರಿಗೆ ಸಚಿವ ಸ್ಥಾನ ಸಿಗಲಿ ಎಂದು ಹಲವಾರು ಜನ ಅಭಿಮಾನಿಗಳು ತಮ್ಮ ದೇವರಿಗೆ ಹೋಗಿ ದೀರ್ಘದಂಡ ನಮಸ್ಕಾರ ಹಾಕುವುದು, ನೂರಾ ಒಂದು ಟೆಂಗಿನಕಾಯಿ ಒಡೆಸಿ ಹರಕೆ ತೀರಿಸುವುದನ್ನು ನಾವು ಕೇಳಿದ್ದೇವೆ, ಕಂಡಿದ್ದೇವೆ.ಅಷ್ಟೇ ಏಕೆ ತಮ್ಮ ನಾಯಕರುಗಳ ಪ್ಲ್ಯಾಕ್ಸ್ ಹಾಕುವುದು ಸಾಮಾನ್ಯ. ಆದರೆ ಇಲ್ಲೊಬ್ಬ ಅಭಿಮಾನಿ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆಯಿಂದ ಕಾಲುವೆಗೆ ನೀರು ಹರಿಸಿದ್ದಕ್ಕಾಗಿ ಶಾಸಕ ರಾಜು ಕಾಗೆಯವರ ಭಾವಚಿತ್ರದ ಹಚ್ಚೆಯನ್ನು ತನ್ನ ಎದೆಯ ಮೇಲೆ ಹಾಕಿಕೊಂಡು ಅಭಿಮಾನ ಮೆರೆದಿದ್ದಾನೆ.

ಈ ಚಿತ್ರವನ್ನು ಬಿಡಿಸಿ ಸಾಮಾಜಿ-ಕ ಜಾಲತಾನದಲ್ಲಿ ಹರಿ ಬಿಟ್ಟಿರುವುದು ಎಲ್ಲೆಡೆ ವೈರಲ್ ಆಗಿದೆ.ಇದರಿಂದ ಶಾಸಕದ್ವಯರಾದ ರಾಜು ಕಾಗೆ, ಲಕ್ಷ್ಮಣ ಸವದಿ ಅಭಿಮಾನಿಗಳು ಕರೆಯಿಸಿ ಇತನನ್ನು ಸನ್ಮಾನಿಸುತ್ತಿದ್ದಾರೆ. ಅದೇ ರೀತಿ ಖಿಳೇಗಾಂವ ಗ್ರಾಮದಲ್ಲಿ ಗಣೇಶ ಖಟ್ಟೆ ಇತನ್ನು ಕರೆಯಿಸಿ ಸನ್ಮಾನಿಸಿದ್ದಾರೆ.ಇತ ಶಾಶಕ ರಾಜು ಕಾಗೆ, ಹಾಗೂ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ವಿನಾಯಕ ಬಾಗಡಿಯವರ ಪಕ್ಕಾ ಅಭಿಮಾನಿ. ಹೀಗಾಗಿ ಈಗ ತನ್ನ ಎದೆಯ ಮೇಲೆ ಶಾಸಕರ ಭಾವಚಿತ್ರ ಬಿಡಿಸುವ ಮೂಲಕ ಗಮನ ಸೆಳೆದಿದ್ದಾನೆ. ಅಲ್ಲದೇ ಈತನ ಈ ಚಿತ್ರ ಈಗ ಸಾಮಾಜಿಕ ಜಾಲತಾನಗಳಲ್ಲಿ ತುಂಬಾ ವೈರಲ್ ಆಗಿದೆ...., ಈ ಯುವಕ ಬಿಡಿಸಿಕೊಂಡಿರುವ ಭಾವಚಿತ್ರ ಸಾವಿರಾರು ಲೈಕ್ಸ್‌ಗಳು ಬಂದಿವೆ. ಇದು ಹೊಸ ಟ್ರೆಂಡ್ ಸೃಷ್ಟಿಯಾಗಿದೆ ಎಂದೇ ಹೇಳಬಹುದು.

ಪುರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ ದತ್ತಾ ವಾಸ್ಟರ್ ಅವಿರೋಧವಾಗಿ ಆಯ್ಕೆಯಾದುದಕ್ಕೆ ಹಾಗೂ ಈ ಭಾಗಕ್ಕೆ ನೀರಾವರಿ ಮಾಡಿರುವುದಕ್ಕೆ ಗಣೇಶ ಕಟ್ಟೆ ಎಂಬವರು ಶಾಸಕ ರಾಜು ಕಾಗೆಯವರ ಭಾವಚಿತ್ರವನ್ನು ತನ್ನ ಎದೆಯ ಮೇಲೆ ತೆಗೆದಿರುವುದಕ್ಕೆ ಶಾಸಕದ್ವಯರಾದ ರಾಜು ಕಾಗೆ, ಲಕ್ಷ್ಮಣ ಸವದಿ ಅಭಿಮಾನಿಗಳಾದ ವಿಶಾಲ ನಿಂಬಾಳ, ವಿನಾಯಕ ಬಾಗಡಿಯವರು ಸನ್ಮಾನಿಸಲಾಯಿತು.

ಈ ವೇಳೆ ಮುಖಮಡರಾದ ಹೊನ್ನಪ್ಪ ಬಗಲಿ, ಮಲ್ಲಿಕಾರ್ಜುನ ಉಮರೆ, ಅಶೋಕ ಪೂಜಾರಿ, ದೀಪಕ ಪೂಜಾರಿ, ಈಶ್ವರ ಅರಳಿಕಟ್ಟಿ, ತಮ್ಮಣ್ಣ ಚಂಡಕೆ, ಬಸಪ್ಪ ಅರಳಿಕಟ್ಟಿ, ಸಂತೋಷ ದೇವಾನಗೋಲ, ಪ್ರವೀಣ ಹೊನ್ನಾಗೋಳ, ರಾಮಗೌಂಡ ಅರಳಿಕಟ್ಟಿ, ಅಣ್ಣಪ್ಪ ನಾಗಾಗೋಳ, ರಾಜು ಉಮರೆ, ಸಂತೋಷ ಬಗಲಿ, ರವಿ ಜಗಳಗಂಟಿ,ಸೇ-ರಿದಂತೆ ಅನೇಕರು ಇದ್ದರು.




# ತಾಲೂಕಿನಲ್ಲಿ ಸಂಭ್ರಮದಿಂದ ಗೌರಿಗಣೇಶನ ಪ್ರತಿಷ್ಠಾಪನೆ



**ಜಮಖಂಡಿ:** ಗೌರಿಗಣೇಶನ ಹಬ್ಬವನ್ನು ಸಂಭ್ರಮ ಆಚರಿಸುವ ಮೂಲಕ ತಾಲೂಕಿನ ನಗರಪ್ರದೇಶ ಮತ್ತು ಗ್ರಾಮೀಣಪ್ರದೇಶದಲ್ಲಿ ಸಾವಿರಕ್ಕೂ ಹೆಚ್ಚು ಸಾರ್ವಜನಿಕ ಗಣೇಶ ವಿಗ್ರಹಗಳು ಪ್ರತಿಷ್ಠಾಪನೆಗೊಂಡಿವೆ.

ನಗರದಲ್ಲಿ ಗಜಾನನ ಮಹಾಮಂಡಳ ಸಮೀತಿ ಸಹಯೋಗದಲ್ಲಿ 104ಕ್ಕೂ ಹೆಚ್ಚು ಸಾರ್ವಜನಿಕ ಗಣೇಶ ಉತ್ಸವ ಸಮೀತಿ ಗಣೇಶ ವಿಗ್ರಹಗಳನ್ನು ಪ್ರತಿಷ್ಠಾಪಿಸಿದ್ದಾರೆ. ಗ್ರಾಮೀಣದಲ್ಲಿ 45 ಗ್ರಾಮಗಳಲ್ಲಿ ಅಂದಾಜು 900ಕ್ಕೂ ಹೆಚ್ಚು ಸಾರ್ವಜನಿಕ ಗಣೇಶ ವಿಗ್ರಹಗಳು ಪ್ರತಿಷ್ಠಾಪನೆಗೊಂಡಿವೆ. ನಗರಸಭೆ, ಪೊಲೀಸ ಠಾಣೆ ಸಹಿತ ಶಾಲಾ–ಕಾಲೇಜುಗಳು ಸಹಿತ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ವಿಗ್ರಹಗಳು ಪ್ರತಿಷ್ಠಾಪನೆಗೊಂಡಿವೆ.

ನಗರದ ಪ್ರದೇಶದಲ್ಲಿ ಪ್ರತಿಷ್ಠಾಪನೆಗೊಂಡಿರುವ ಸಾರ್ವಜನಿಕ ಗಣೇಶ ಉತ್ಸವ ಸಮೀತಿಗಳಿಗೆ ತಲಾ 5 ಸಾವಿರ ನಗದು ಮತ್ತು ಗ್ರಾಮೀಣಭಾಗದಲ್ಲಿ



ಸಾರ್ವಜನಿಕ ಗಣೇಶ ಉತ್ಸವ ಸಮೀತಿಗಳಿಗೆ ತಲಾ 25 ಕೆಜಿ ಸಕ್ಕರೆಯನ್ನು ಶಾಸಕ ಜಗದೀಶ ಗುಡಗುಂಟಿ ಅವರು ಸ್ವತಃ ಕೊಡುಗೆಯಾಗಿ ಕಳೆದ ನಾಲ್ಕು ವರ್ಷದಿಂದ ನೀಡುತ್ತಿದ್ದಾರೆ.

# ವ್ಯಕ್ತಿಯ ಪೂರ್ಣ ಪ್ರಮಾಣದ ವಿಕಸನಕ್ಕೆ ಕ್ರೀಡೆಗಳ ಪಾತ್ರ ಮಹತ್ವದ್ದು - ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

**ಗದಗ** : ವ್ಯಕ್ತಿಯ ಪೂರ್ಣ ಪ್ರಮಾಣದ ವಿಕಸವಾಗಬೇಕಾದರೆ ಕ್ರೀಡೆಗಳ ಪಾತ್ರ ಮಹತ್ವದ್ದಾಗಿದೆ. ವ್ಯಕ್ತಿಯ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಕ್ರೀಡೆ0ುಲ್ಲಿ ತೊಡಗುವುದು ಅವಶ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎಸ್.ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾ0ುತ್, 0ುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರ ಸಹ0ುೋಗದಲ್ಲಿ ಮೇಜರ್ ಧ್ಯಾನಚಂದರವರ ಜನ್ಮದಿನದ ಅಂಗವಾಗಿ ಶುಕ್ರವಾರ ಗದಗ ಬೆಟಗೇ–ರಿಯ ಮಹಾತ್ಮಾ ಗಾಂಧಿ ಕ್ರೀಡಾಂಗಣದಲ್ಲಿ ರಾಷ್ಟ್ರೀ0ು ಕ್ರೀಡಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕದಲ್ಲಿ ಹಾಕಿ ಎಂದರೆ ಮೊದಲ ನೆನಪಾಗುವುದು ಕೊಡಗು ನಂತರ ಗದಗ ಜಿಲ್ಲೆಯಾಗಿದೆ. ಹಾಕಿ ಕ್ರೀಡೆಗೆ ಗದಗ ಜಿಲ್ಲೆಯ ಕೊಡಗೆ ಅಪಾರವಾಗಿದೆ. ಕ್ರೀಡಾಪಟುಗಳು ಹಾಕಿ ಗ್ರೌಂಡ್‌ದ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ನುಡಿದರು.

0ುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸರ್ವ–



ರಿಗೂ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ಹಾಕಿ ಕ್ರೀಡೆ ಉತ್ತೇಜಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಗದಗ ಜಿಲ್ಲೆಯ ಹಾಕಿ ಕ್ರೀಡಾಪಟುಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಮಿಂಚಿ ಪ್ರಶಸ್ತಿ ಪಡೆದಿದ್ದಾರೆ. ಹಾಕಿ, ಕುಸ್ತಿ ಮತ್ತು ಸೈಕ್ಲಿಂಗ್ ಪಂದ್ಯಾವಳಿಗಳು ಮೂರು ದಿನಗಳ ಕಾಲ ನಡೆ0ುಲಿವೆ. ಹಾಕಿ ಪಂದ್ಯಾವಳಿ ಅಗಸ್ಟ 29 ರಂದು ಶುಕ್ರವಾರ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣ ಗದಗ ಬೆಟಗೇರಿಯಲ್ಲಿ 4 ತಂಡಗಳಿಂದ ಮೂರು ಪಂದ್ಯಗಳು ನಡೆ0ುಲಿವೆ. ಕುಸ್ತಿ ಪಂದ್ಯಾವಳಿಗಳು ಅಗಸ್ಟ 30 ರಂದು ಶನಿವಾರ ಬೆಳಗ್ಗೆ 10.30 ಗಂಟೆಗೆ ಸ್ಥಳ ಕೆ ಎಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದ ಕುಸ್ತಿ ಮನೆ ಗದಗದಲ್ಲಿ ನಡೆ0ುಲಿದೆ.

ಸೈಕ್ಲಿಂಗ್ ಜಾಥಾವು ದಿನಾಂಕ 31–8–2025ರ ಬೆಳಿಗ್ಗೆ 10:30 ಗಂಟೆಗೆ ನಗರದ ಕೆ ಎಚ್ ಪಾಟೀಲ್ ಜಿಲ್ಲಾ ಕ್ರೀಡಾಂಗಣದಿಂದ ಶ್ರೀ ಬಸವೇಶ್ವರ ಮೂರ್ತಿಯವರೆಗೆ ಜರುಗಲಿದೆ ಎಂದು ತಿಳಿಸಿದರು.

ಗದಗ ಬೆಟಗೇರಿಯ ಶ್ರೀ ಹನುಮಾನ್ ಬ್ಲೆಸ್ಸಿಂಗ್ ಕ್ಲಬ್ ಅಧ್ಯಕ್ಷರು ಹಾಗೂ ಸರ್ವ ಪದಾಧಿಕಾರಿಗಳು, ಸೈಕ್ಲಿಂಗ್ ಮತ್ತು ಕುಸ್ತಿ ಅಸೋಸಿಯೇಷನ್ , ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಅಧ್ಯಕ್ಷರು , ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕ್ರೀಡಾ ವಸತಿನಿಲ0ುದ ಕ್ರೀಡಾಪಟುಗಳು ಪ್ರಾರ್ಥಿಸಿದರು. ಪ್ರಾಧ್ಯಾಪಕರಾದ ಬಾಹುಬಲಿ ಜೈನರ್‌ರವರು ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರ್‌ಸಾಬ್ ಬಬರ್ಜಿ, ನಗರಸಭೆ ಸದಸ್ಯರಾದ ಸುರೇಶ ಕಟ್ಟಿಮನಿ, ವೈ ಜಿ ಗಡಾದ, ಕೃಷ್ಣಪ್ಪ ಬಾಗಲಕೋಟೆ, ಹನುಮಂತಪ್ಪ ವೀರಾಪುರ್, ಚಂದ್ರು ಚೌಹಾನ್, ದೀಪಕ್ ಗಾಗಡೇ, ಪ್ರವೀಣ್ ಚಪ್ಪರಮನಿ, ಮಂಜುನಾಥ್ ಬಾಗಲಕೋಟಿ, ವಾಸು ಕಲ್ಕಂಬಿ, 0ುವಜನ ಸಬಲೀಕರಣ ಕ್ರೀಡಾ ಇಲಾಖೆಯ ಅಧೀಕ್ಷಕ ಜಗದೀಶ್ ಹೊಳ್ಳಟ್ಟಿ ಇತರರು ಹಾಜ–ರಿದ್ದರು.

# ಇಂದು ಮಿನಿ ಉದ್ಯೋಗ ಮೇಳ

**ಹುಬ್ಬಳ್ಳಿ** : ನವನಗರದ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ ಮಿನಿ ಉದ್ಯೋಗ ಮೇಳವನ್ನು ಆಗಸ್ಟ 30 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ನವನಗರದ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಮೇಳದಲ್ಲಿ 6 ಖಾಸಗಿ ವಲಯದ ಉದ್ಯೋಗದಾತರು ಭಾಗವಹಿಸಲಿದ್ದು, ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅಭ್ಯರ್ಥಿಗಳ ಸಂದರ್ಶನ ನಡೆಸಲಿದ್ದಾರೆ. ಪಿಯುಸಿ, ಐಟಿಐ, ಡಿಪ್ಲೋಮಾ, ಬಿ.ಇ ಯಾವುದೇ ಪದವಿ ಪಾಸಾದ 18 ರಿಂದ 35 ವಯೋಮಿತಿ ಹೊಂದಿದ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಬಹುದು. ಆದ–ಾರಕಾರ್ಡ, ಬಯೋಡಾಟಾ (ರೆಸ್ಯೂಮ) ಗಳ ಪ್ರತಿಗಳೊಂದಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಮೇಳದಲ್ಲಿ ಭಾಗವಹಿಸಬೇಕು. ಅಭ್ಯರ್ಥಿಗಳು **https://rb.by/2xzk2r** ವೆಬ್ ಸೈಟ್ ಮುಖಾಂತರ ನೋಂದಣಿ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಕುವೆಂಪು ರಸ್ತೆ, ನವನಗರ ಹುಬ್ಬಳ್ಳಿ ಅಥವಾ ದೂರವಾಣಿ ಸಂಖ್ಯೆ 0836–2225288, 9535360259, 8453208555 ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯಪುರ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟ

**ವಿಜಯಪುರ,** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವಿಜಯಪುರ ಹಾಗೂ ಬೆಂಗಳೂರಿನ ಕರ್ನಾಟಕ ಕ್ರೀಡಾ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಡಾ.ಬಿ.ಆರ್.ಅಂಬೆಡ್ಕರ್ ಕ್ರೀಡಾಂಗಣದಲ್ಲಿ ವಿಜಯಪುರ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ್ ದೈವಾಡಿ ಮಾತನಾಡಿ, ಹಾಕಿ ಮಾಂತ್ರಿಕ ಮೇಜರ್ ಧ್ಯಾನ್‌ಚಂದ ಅವರ ಜನ್ಮ ದಿನಾಚರಣೆಯಾದ ಇಂದು ರಾಷ್ಟ್ರೀಯ ಕ್ರೀಡಾ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಇಂತಹ ಮಹಾನ್ ಕ್ರೀಡಾ ಸಾಧಕರ ಸಾಧನೆಯಿಂದ ಸ್ಫೂರ್ತಿ ಪಡೆದುಕೊಳ್ಳಬೇಕು. ನಿರ್ದಿಷ್ಟ ಗುರಿಯೊಂದಿಗೆ ಸತತ ಅಭ್ಯಾಸ, ತನ್ಮಯತೆ, ಕೌಶಲ್ಯ ಹಾಗೂ ಆ ದಿಸೆಯಲ್ಲಿನ ಪ್ರಯತ್ನ ಅಗತ್ಯವಾಗಿದೆ. ಕ್ರೀಡಾಪಟುಗಳು ತಮ್ಮ ಆಸಕ್ತಿಯ ಕ್ರೀಡೆಯಲ್ಲಿ ಬೆಳವಣಿಗೆ ಹೊಂದಲು ಇಂತಹ ಕ್ರೀಡಾಕೂಟಗಳ ಆಯೋಜನೆ ಅವರ ಆಸಕ್ತಿಗೆ ಮತ್ತಷ್ಟು ಪ್ರೋತ್ಸಾಹ ನೀಡುತ್ತದೆ. ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ತಾಲೂಕಾ ಮಟ್ಟದ ಕ್ರೀಡಾಕೂಟವನ್ನು ಆಯೋಜಿಸಿದೆ ಎಂದು ಹೇಳಿದರು.



ಜಾವಿದ ಎಂ ಜಮಾದಾರ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಮಾತನಾಡಿ, ಕ್ರೀಡೆಗಳಲ್ಲಿ ಸೋಲು–ಗೆಲವು ಸಾಮಾನ್ಯ. ಸೋಲಿಗೆ ಕುಗ್ಗದೆ, ಗೆಲುವಿಗೆ ಹಿಗ್ಗದೆ ಎರಡನ್ನು ಸಮಾನವಾಗಿ ಸ್ವೀಕರಿಸಿ ನಿರಂತರವಾಗಿ ಪರಿಶ್ರಮದಿಂದ ಕ್ರೀಡೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ರಾಜ್ಯ, ರಾಷ್ಟ್ರ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವಂತೆ ಅವರು ಹೇಳಿದರು. ಕ್ರೀಡೆಗಳು ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಸಹಕಾರಿಯಾಗಿದೆ, ಪ್ರತಿಯೊಬ್ಬರು ಕ್ರೀಡಾ ಹವ್ಯಾಸ ಹೊಂದಿ, ದಿನನಿತ್ಯ ವ್ಯಾಯಾಮ, ಆಟೋಟಗಳಂತಹ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು ಎಂದು ಹೇಳಿದರು.

ಅಡಿವೆಪ್ಪ ಸಾಲಗಲ್ ಮಾತನಾಡಿ, ಹಾಕಿ ಮಾಂತ್ರಿಕ ಮೇಜರ್ ಧ್ಯಾನ್‌ಚಂದ್ ಅವರು ಹಾಕಿಯಲ್ಲಿ ತಮ್ಮದೇಯಾದ ಛಾಪು ಮೂಡಿಸಿ ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದ್ದಾರೆ. ಅವರ ಸತತ ಪರಿಶ್ರಮ ಕಠಿಣ ಅಭ್ಯಾಸಗಳಿಂದ ಅವರು ಮಾಡಿರುವ ಸಾಧನೆಯನ್ನು ವಿದ್ಯಾರ್ಥಿಗಳು ಪ್ರೇರಣೆ ಹೊಂದಿ ಸಾಧನೆಯ ಹಾದಿಯಲ್ಲಿ ಸಾಗಿ, ಅಂತಾರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿ, ಸಾಧನೆ ಮಾಡಿ ಜಿಲ್ಲೆಯ ಕೀರ್ತಿ ಹೆಚ್ಚಿಸಬೇಕು ಎಂದು ಹೇಳಿದರು.

ಹಾಕಿ ಮಾಂತ್ರಿಕ ಮೇಜರ್ ಧ್ಯಾನ್‌ಚಂದ ಅವರ ಜನ್ಮ ದಿನಾಚರಣೆಯ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.ಶ್ರೀಮತಿ ಸಂಗೀತಾ ಮಠಪತಿ ನಿರೂಪಿಸಿದರು.

ಈ ಕಾರ್ಯಕ್ರಮದಲ್ಲಿ ವಾರ್ತಾ ಅಧಿಕಾರಿ ಅಮರೇಶ ದೊಡಮನಿ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ, ನಾಗರಾಜ ಲಂಬು, ಎಸ್.ಕೆ.ಇನಾಮದಾರ್, ಜಿ.ಎಂ.ಕೊಕರೆ,ಸಂ–ಜಯ ಹಿರೆಮಠ, ಎಸ್.ಎಸ್.ಹಿರೇಮಠ, ಕೃಷ್ಣ ರಾಠೋಡ,ಚಂದ್ರಕಾಂತ್ ತಾರನಾಳ ಸೇರಿದಂತೆ ವಿವಿಧ ಕ್ರೀಡಾ ತರಬೇತಿ–ದಾರರು, ಕ್ರೀಡಾಪಟುಗಳು, ಕ್ರೀಡಾ ಶಾಲೆಯ ವಿದ್ಯಾರ್ಥಿಗಳು ಹಾಗೂ ಕ್ರೀಡಾಸಕ್ತರು ಉಪಸ್ಥಿತರಿದ್ದರು.

# ಕ್ರೀಡಾ ಸಾಧನೆಯ ವಿದ್ಯಾರ್ಥಿಯ ಜೀವನದ ದಾರಿ ದೀಪ -ಉಪ ನಿರ್ದೇಶಕ ಬಂಡಾರಿ ಸಲಹೆ



**ಮೂಡಲಗಿ** : ಇತ್ತೀಚಿನ ದಿನಗಳಲ್ಲಿ ವಿಶ್ವದಲ್ಲಿ ಕ್ರೀಡೆ ಅತ್ಯಂತ ಮಹತ್ವದ ಪಾತ್ರ ವಹಿಸಿದೆ ಕಾರಣ ಕ್ರೀಡಾ ಸಾಧನೆಯ ವಿದ್ಯಾರ್ಥಿಗಳಿಗೆ ಜೀವನದ ದಾರಿದೀಪ ಆಗುವುದು ಎಂದು ಚಿಕ್ಕೋಡಿಯ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಪಿ ಐ ಬಂಡಾರಿ ಹೇಳಿದರು

ಸಮೀಪದ ಕಲ್ಲೋಳಿಯ ಬಸವೇಶ್ವರ ಶಿಕ್ಷಣ ಸಂಸ್ಥೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಚಿಕ್ಕೋಡಿ ಇವುಗಳ ಸಂಯುಕ್ತಾಶ್ರಯದಲ್ಲಿ ಮೂರು ದಿನಗಳ ಮೂಡಲಗಿ ತಾಲೂಕ ಮಟ್ಟದ ಪದವಿ ಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು, ಈ ಸಂಸ್ಥೆಯ ಬಗ್ಗೆ ವಿಶೇಷತೆ ಎಂದರೆ ಒಂದರಿಂದ 10ನೆಯ ವರ್ಗದವರಿಗೆ ಉಚಿತ ಶಿಕ್ಷಣ ಸುಸಜ್ಜಿತ ಕಟ್ಟಡ ಆಟದ ಮೈದಾನ ವಿದ್ಯಾರ್ಥಿಗಳ ಆದ–ುನಿಕ ವೈಜ್ಞಾನಿಕ ಗುಣಮಟ್ಟದ ತಂತ್ರಜ್ಞಾನ ಅಳವಡಿಸಿ ಬೋಧಿಸುವ ಪ್ರಕ್ರಿಯೆ ವಿಶೇಷ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಚೇರ್ಮನ್ನ ರಮೇಶ್ ಬೆಳಕೂಡ ಮಾತನಾಡಿ, ನಮ್ಮ ಸಂಸ್ಥೆಯ ವಿದ್ಯಾರ್ಥಿಗಳ ಮುಂದಿನ ಒಳ್ಳೆಯ ಭವಿಷ್ಯಕ್ಕಾಗಿ ಹಲವು ಸೌಕರ್ಯಗಳನ್ನು ನೀಡುವುದಾಗಿ ತಿಳಿಸಿದರು. ಕಲ್ಲೋಳಿಯ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಸಿಎಂ ಮುಗಳಕೋಡ ಮಾತನಾಡಿದರು,

ಶಿವ ಕೋ ಆಪ್ ಬ್ಯಾಂಕ್ ಅಧ್ಯಕ್ಷ ಗಿರಿಮಲ್ಲಪ್ಪ ಸವಸುದ್ದಿ ಕ್ರೀಡಾ ಜ್ಯೋತಿಯನ್ನು ಸ್ವಾಗತಿಸಿದರು ಪ್ರಸಿದ್ಧ ಜವಳಿ ವ್ಯಾಪಾರಸ್ಥ ದಿಲ್ಲಿ ಪ್ಲಾಜಾ ಗೋಕಾಕ್ ಮಾಲೀಕ ವಿನೋದ್ ಅಂಕದವರ್ ವಿದ್ಯಾರ್ಥಿಗಳಿಗೆ ಉಚಿತ ಕ್ಯಾಪ ಮತ್ತು ಟಿ ಶರ್ಟ್ ನೀಡಿದರು ವಿವಿಧ ಟ್ರೋಫಿಗಳನ್ನು ಬಿಡಿಸಿಸಿ ಬ್ಯಾಂಕ್, ಬೆಳಗಾವಿ ನಿರ್ದೇಶಕ ನೀಲಕಂಠ ಕಪ್ಪಲಗುದ್ದಿ ದೇಣಿಗೆ ನೀಡಿದರು ಈ ಸಂದರ್ಭದಲ್ಲಿ ಆರ್ ಕೆ ಅಪ್ಸೆಟ್ ಬೆಳಗಾವಿಯ ಮಹೇಶ್ ಬೆಳಗಾವ್ಕರ್ ಪ್ಯಾರಾ ಟೇಕ್ವಾಂಡೊ ಸ್ಪರ್ಧೆಯಲ್ಲಿ ಕಂಚಿನ ಪದಕ ಪಡೆದ ಮೂಡಲಗಿಯ ಲಕ್ಷ್ಮಿ ರಡೆರಟ್ಟಿ ಸಂಸ್ಥೆಯ ಪರವಾಗಿ ಶಾಲು ಹೋದಿಸಿ ಕಾಣಿಕೆ ನೀಡಿ ಸತ್ಕಾರ ಮಾಡಲಾಯಿತು ವೇದಿಕೆಯಲ್ಲಿ ಆಡಳಿತ ಅಧಿಕಾರಿ ಪ್ರಕಾಶ ಗರಗಟ್ಟಿ. ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಸಂಗಮೇಶ್ ಹೂಗಾರ್ ಹಾಗೂ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಜೆ.ಪಿ ಮುತ್ನಾಳ್ ತಾಲೂಕು ಕ್ರೀಡಾ ಸಂಯೋಜಕ ಎಲ್ ಆರ್ ಧರ್ಮಟ್ಟಿ ಕಾಲೇಜಿನ ಕ್ರೀಡಾ ಸಂಯೋಜಕ ಗುರುರಾಜ್ ಕಡಕಬಾವಿ ದೈಹಿಕ ಶಿಕ್ಷಕ ಶಾನೂರ್ ದಾಸನಾಳ ಇತರರು ಉಪಸ್ಥಿತಿ ಇದ್ದರು. ವಿಠ್ಠಲ ಕೋಂಗನಳ್ಳಿ ಸ್ವಾಗತಿಸಿದರು ರಮೇಶ್ ಹೆಬ್ಬಾಳ್ ಕಾರ್ಯನಿರ್ವಹಿಸಿ,ಕೆ.ಜಿ. ಪಾತ್ರೋಟ್ ವಂದಿಸಿದರು.

# ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

ಬೆಳಗಾವಿ, 2025–26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿ ಯಾತ್ರೆಗೆ ಪ್ರಯಾಣಿಸಲು ಹಾಗೂ ಹಿಂದಿರುಗಿ ಬರುವ ಸಂಬಂಧ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬಸ್ಸು ಮತ್ತು ರೈಲಿನ ಮೂಲಕ ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.

ಡಾ.ಬಿ.ಆರ್.ಅಂಬೇಡ್ಕರ್ ದೀಕ್ಷಾಭೂಮಿ ಸಂದರ್ಶಿಸಲು ಬಯಸುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ **https://swd.karnataka.gov.in** ಮೂಲಕ 9 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಬೆಳಗಾವಿ ಕಛೇರಿ ಹಾಗೂ ತಾಲೂಕು ಮಟ್ಟದ ಕಛೇ–ರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಖಾನಾಪೂರ ಸಹಾಯಕ ನಿರ್ದೇಶಕರು (ಗೇಡ–2) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಬೆಳಗಾವಿ,** ; ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಳಗಾವಿ ಜಿಲ್ಲೆ ವತಿಯಿಂದ 2025–26ನೇ ಸಾಲಿಗೆ ಸಹಾಯಧನ ಮತ್ತು ಸಾಲ ಸೌಲಭ್ಯ ಒದಗಿಸಲು ಪರಿಶಿಷ್ಟ ಪಂಗಡ ಸಾಮಾನ್ಯ ನಿರುದ್ಯೋಗಿ ಯುವಕ/ಯವತಿಯರಿಗಾಗಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಸೇವಾ ಸಿಂಧು ಪೋರ್ಟಲ ವಿಳಾಸ **https://sevasindhu.karnataka.gov.in** ನಲ್ಲಿ ಗ್ರಾಮ ಓನ್, ಬೆಳಗಾವಿ ಒನ್, ಅಥವಾ ಕರ್ನಾಟಕಾ ಒನ್ ಕೇಂದ್ರಗಳಲ್ಲಿ ಮಾತ್ರ ಆನ್‌ಲೈನ್ ಮೂಲಕ 17 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಹೈನುಗಾ–ರಿಕೆ ಯೋಜನೆ, ಉದ್ಯಮ ಶೀಲತಾ ಅಭಿವೃದ್ದಿ ಯೋಜನೆ ಇತರ ಉದ್ದೇಶಕ್ಕಾಗಿ, ಉದ್ಯಮ ಶೀಲತಾ ಅಭಿವೃದ್ಧಿ ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ, ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆ (ಭೂ ರಹಿತ ಕೃಷಿ ಕಾರ್ಮಿಕ ಮಹಿಳೆಯರಿಗೆ) ಗಳಿಗೆ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಲ್ಯಾಣ ಮಿತ್ರ ಸಹಾಯವಾಣಿ ಸಂಖ್ಯೆ: 9482300400 ಹಾಗೂ ನಿಗಮದ ವೆಬ್‌ಸೈಟ್/ ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ಭೇಟಿ ನೀಡಬಹುದಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಸಾಂಸ್ಕೃತಿಕ ಸೌರಭ- 2025-26

**ಬೆಳಗಾವಿ,** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶನಿವಾರ (ಆ.30) ಮಧ್ಯಾಹ್ನ 12 ಗಂಟೆಗೆ ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಸಾಂಸ್ಕೃತಿಕ ಸೌರಭ– 2025–26 ಕಾರ್ಯಕ್ರಮ ಜರುಗಲಿದೆ. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆ ವಹಿಸಲಿದ್ದಾರೆ.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮಗಳಾದ ಸುಗಮ ಸಂಗೀತ, ಜನಪದ ಸಂಗೀತ, ಡೊಳ್ಳು ಕುಣಿತ, ಕರಡಿ ಮಜಲು, ನೃತ್ಯ ರೂಪಕ, ಬಯಲಾಟ ಹಾಗೂ ಜನಪದ ಜರುಗಲಿವೆ.

## ಘನ ತ್ಯಾಜ್ಯ, ಪಾರಂಪರಿಕ ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ಕುರಿತು ಅಧಿಕಾರಿಗಳ ಸಭೆ

# ಮುಂದಿನ ಎರಡು ತಿಂಗಳಲ್ಲಿ ಹುಬ್ಬಳ್ಳಿ ಧಾರವಾಡ ಸ್ವಚ್ಛ ನಗರವಾಗಿಸಲು ಅಧಿಕಾರಿಗಳು ಕ್ರಮವಹಿಸಿ ::ನಿವೃತ್ತ ನ್ಯಾಯಾಧೀಶ ಸುಭಾಷ್ ಆಡಿ

**ಹುಬ್ಬಳ್ಳಿ** : ಹುಬ್ಬಳ್ಳಿ ಧಾರವಾಡ ಅವಳಿ ನಗರಗಳು ಎಂದು ಪ್ರಸಿದ್ಧವಾಗಿವೆ. ಸಮರ್ಪಕವಾಗಿ ತ್ಯಾಜ್ಯ ನಿರ್ವಹಣೆ ಆಗದ ಕುರಿತು ಸಾಕಷ್ಟು ದೂರುಗಳು ಕೇಳಿ ಬಂದಿವೆ. ಅಲ್ಲದೇ ವಿವಿಧ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಸಾಧ್ಯವಾಗಿರುವುದಿಲ್ಲ. ಮುಂದಿನ ಎರಡು ತಿಂಗಳಲ್ಲಿ ಹುಬ್ಬಳ್ಳಿ ಧಾರವಾಡ ಸ್ವಚ್ಛ ನಗರವಾಗಿಸಲು ಅಧಿಕಾ–ರಿಗಳು ಕ್ರಮವಹಿಸಬೇಕು ಎಂದು ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ ರಾಜ್ಯ ಮಟ್ಟದ ಸಮಿತಿಯ ಅಧ್ಯಕ್ಷರಾದ ನಿವೃತ್ತ ನ್ಯಾಯಾಧೀಶ ಸುಭಾಷ್ ಆಡಿ ಅವರು ಹೇಳಿದರು.

ಇಂದು ಸರ್ಕ್ಯೂಟ್ ಹೌಸ್ ನಲ್ಲಿ ಘನ ತ್ಯಾಜ್ಯ, ಪಾರಂಪರಿಕ ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ, ಕಟ್ಟಡ ತ್ಯಾಜ್ಯ, ಜೀವ ವೈದ್ಯಕೀಯ ತ್ಯಾಜ್ಯ ( ನಿರ್ವಹಣೆ ನಿಯಮಗಳು) 2016 ಮತ್ತು ಕೊಳಚೆ ನೀರು ಸಂಸ್ಕರಣಾ ಘಟಕ ನಿರ್ವಹಣೆ ವಿಷಯಗಳ ರಾಷ್ಟ್ರೀಯ ಹಸಿರು ನ್ಯಾಯಪೀಠದ ಆದೇಶವನ್ನು ಅನುಷ್ಠಾನಗೊಳಿಸುವ ಕುರಿತ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ತ್ಯಾಜ್ಯ ನಿರ್ವಹಣೆ ಕುರಿತು ಸಾಕಷ್ಟು ಸಭೆಗಳನ್ನು ವಿವಿಧ ಜಿಲ್ಲೆಗಳಲ್ಲಿ ಮಾಡಲಾಗಿದೆ. ಧಾರವಾಡ ಜಿಲ್ಲೆ ಹೊರತುಪಡಿಸಿ ಉಳಿದ ಜಿಲ್ಲೆಗಳಲ್ಲಿ ಸಾಕಷ್ಟು ಬದಲಾವಣೆಗಳು ಆಗಿವೆ. ಆದರೆ ಧಾರವಾಡ ಜಿಲ್ಲೆಯಲ್ಲಿ ತ್ಯಾಜ್ಯ ನಿರ್ವಹಣೆ ಬಗ್ಗೆ ಅಷ್ಟಾಗಿ ಗಮನ ಸೆಳೆದಿರುವುದಿಲ್ಲ. ಸ್ಮಾರ್ಟ್ ಸಿಟಿ ಪಟ್ಟಿಗೆ ಹುಬ್ಬಳ್ಳಿ ಧಾರವಾಡ ಸೇರಿದರೂ ಸಹ ಸ್ವಚ್ಛತೆಗೆ ಆದ್ಯತೆ ನೀಡಿರುವುದಿಲ್ಲ. ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಅಧಿಕಾರಿಗಳು ಸ್ವಚ್ಛತೆಗೆ ಹೆಚ್ಚಿನ ಗಮನ ಹ–ರಿಸಬೇಕು. ಸ್ಲಂ ನಿವಾಸಿಗಳಿಗೆ ಸ್ವಚ್ಛತೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕು. ಆಸ್ಪತ್ರೆ ತ್ಯಾಜ್ಯ ನಿರ್ವಹಣೆಗೆ ಹೆಚ್ಚು ಒತ್ತು ನೀಡಬೇಕಾಗುತ್ತದೆ. ಕೆಲಗೇರಿ ಕೆರೆಗೆ ಕಲುಷಿತ ನೀರು ಸೇರದಂತೆ ಕ್ರಮವಹಿಸಬೇಕು. ತ್ಯಾಜ್ಯ ನಿರ್ವಹಣೆ ಮಾಡದ ಅಂಗಡಿಗಳಿಗೆ ಮೊದಲೆರಡು ಬಾರಿ ದಂಡ ವಿಧಿಸಿ, ಮೂರನೇ ಬಾರಿಗೆ ಅಂಗಡಿಗಳ ವ್ಯಾಪಾರದ ಪರವಾನಗಿಯನ್ನು ರದ್ದುಪಡಿಸಬೇಕು. ತ್ಯಾಜ್ಯ ನಿರ್ವಹಣೆ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕಾಗುತ್ತದೆ. ಇಲಾಖೆಗಳ ನಡುವೆ ಪರಸ್ಪರ ಸಮನ್ವಯವಿರಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ತೆಂಗಿನಕಾಯಿ ವ್ಯಾಪಾರಸ್ಥರು ತ್ಯಾಜ್ಯವನ್ನು ಅಂಗಡಿ ಮುಂಭಾಗದಲ್ಲಿ ಹಾಕಿರುತ್ತಾರೆ. ಅದನ್ನು ಕೂಡ ಸಂಗ್ರಹ ಮಾಡಬೇಕು. ಅಂಗಡಿಗಳ ಮುಂದೆ ಹಸಿ ಕಸ ಮತ್ತು ಒಣ ಕಸ ಸಂಗ್ರಹಣೆಗೆ ಪ್ರತ್ಯೇಕ ಕಸದ ಡಬ್‌ಗಳನ್ನು ಅಳವಡಿಸಬೇಕು. ಮನೆ, ಶಾಲಾ ಕಾಲೇಜು, ಅಂಗಡಿಗಳು ಸೇರಿದಂತೆ ವಿವಿಧೆಡೆ ಅಪಾರ ಪ್ರಮಾಣದಲ್ಲಿ ಕಸ ಸಂಗ್ರಹಕ್ಕೆ ಮುಂದಾಗಬೇಕಿದೆ. ಬ್ಲಾಕ್ ಸ್ಪಾಟ್ ಮುಕ್ತಗೊಳಿಸಲು ಕ್ರಮಗಳನ್ನು ಕೈಗೊಳ್ಳಬೇಕು. ಬೀದಿ ಬದಿ ವ್ಯಾಪಾರಸ್ಥರು, ಆಹಾರ ಮಳಿಗೆಗಳಲ್ಲಿ ಸಾಕಷ್ಟು ಕಸವನ್ನು ಎಸೆಯುತ್ತಾರೆ. ಆ ಕುರಿತು ಹೆಚ್ಚಿನ ಗಮನ ಹರಿಸಬೇಕಾಗುತ್ತದೆ. ಸ್ವಚ್ಛ ನಗರ ನಿರ್ಮಾಣ ಮಾಡಲು ಮುಂದಾಗಬೇಕು ಎಂದರು.

ಗ್ರಾಮ ಪಂಚಾಯತಿಗಳಲ್ಲಿ ಇರುವ ಕಸ ಸಂಗ್ರಹ ವಾಹನಗಳ ಮೂಲಕ ಹಸಿ ಕಸ ಮತ್ತು ಒಣ ಕಸವನ್ನು ಸಂಗ್ರಹಣೆ ಮಾಡಬೇಕು. ಮಕ್ಕಳ ಗ್ರಾಮ ಸಭೆ ನಡೆಸುವ ಮೂಲಕ ಮಕ್ಕಳಿಗೆ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಬೇಕು. ಅತ್ಯುತ್ತಮ ಗ್ರಾಮ ಪಂಚಾಯತ್, ಅತ್ಯುತ್ತಮ ನಗರ ಸಭೆ ಎಂಬ ರಯಾಂಕಿಂಗ್‌ನೀಡಬೇಕಾಗುತ್ತದೆ. ಶೇ.100 ರಷ್ಟು ತ್ಯಾಜ್ಯ ನಿರ್ವಹಣೆ ಸಾಧಿಸಬೇಕು ಎಂದು ತಿಳಿಸಿದರು.



**ಪ್ಲಾಸ್ಟಿಕ್ ಮುಕ್ತ ವಲಯಗಳು ನಿರ್ಮಾಣವಾಗಲಿ** ; ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವಲಯಗಳು ಪ್ಲಾಸ್ಟಿಕ್ ಮುಕ್ತವಾಗಬೇಕು. ಪ್ಲಾಸ್ಟಿಕ್ ಬಳಕೆಯನ್ನು ನಿಷೇಧ ಮಾಡಲು ಮುಂದಾಗಬೇಕು. ಮೊದಲು ಮನೆಗಳನ್ನು ಸ್ವಚ್ಛ ಇಟ್ಟುಕೊಳ್ಳುವಂತೆ ಪ್ರೇರೆಪಿಸಬೇಕಾಗುತ್ತದೆ. ಅಲ್ಲದೇ ವಾರ್ಡ್‌ವಾರು ನಿವಾಸಗಳ ಸಭೆ ನಡೆಸಿ, ಸ್ವಚ್ಛತೆ ಕುರಿತು ಅರಿವು ಮೂಡಿಸಬೇಕು. ಐಇಸಿ ( ಮಾಹಿತಿ, ಶಿಕ್ಷಣ ಮತ್ತು ಸಂವಹನ) ಕಾರ್ಯಕ್ರಮ ಸಮರ್ಪಕವಾಗಿ ಅನುಷ್ಠಾನಕ್ಕೆ ತರಬೇಕಾಗುತ್ತದೆ. ಆ ಹಿನ್ನೆಲೆಯಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಪ್ರಮುಖ ಪಾತ್ರ ನಿರ್ವಹಿಸುವುದು. ಜನರನ್ನು ಸಹ ಸ್ವಚ್ಛತಾ ಕಾರ್ಯಕ್ರಮಗಳಲ್ಲಿ ಹೆಚ್ಚು ಹೆಚ್ಚು ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದು ಅವರು ಸೂಚಿಸಿದರು.

**ಪಾದಚಾರಿ ಮಾರ್ಗ ಅತಿಕ್ರಮಣ ತೆರವುಗೊಳಿಸಿ** : ಸಾರ್ವಜನಿಕರು ಓಡಾಡಲು ನಿರ್ಮಾಣ ಮಾಡಿದ ಪಾದಚಾರಿ ಮಾರ್ಗವನ್ನು ಅತಿ–ಕ್ರಮಣ ಮಾಡಿಕೊಂಡಿರುವುದು ಗಮನಕ್ಕೆ ಬಂದಿದೆ. ಪಾದಚಾರಿ ಮಾರ್ಗದ ಮೇಲೆ ಅಂಗಡಿಗಳನ್ನು ನಿರ್ಮಾಣ ಮಾಡಲಾಗಿದೆ. ಅವುಗಳನ್ನು ಕೂಡಲೇ ತೆರವುಗೊಳಿಸಬೇಕು. ಜನರು ಮುಕ್ತವಾಗಿ ಓಡಾಡಲು ಪಾದಚಾರಿ ಮಾರ್ಗ ಅವಶ್ಯಕವಾಗಿದೆ. ಈ ಬಗ್ಗೆ ಅಧಿಕಾ–ರಿಗಳು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾ–ರಿಗಳಿಗೆ ಸೂಚಿಸಿದರು.

**ಹಸಿರು ಕ್ಯಾಂಪಸ್ ನಿರ್ಮಾಣಕ್ಕೆ ಒತ್ತು ನೀಡಿ** ಹುಬ್ಬಳ್ಳಿ ಧಾರವಾಡ ನಗರಗಳಲ್ಲಿ ಸಾಕಷ್ಟು ಶಾಲೆ ಕಾಲೇಜುಗಳಿವೆ. ಶಾಲಾ ಕಾಲೇಜುಗಳಲ್ಲಿ ಹಸಿರು ಕ್ಯಾಂಪಸ್ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ವಿದ್ಯಾರ್ಥಿಗಳಿಗೆ ಸ್ವಚ್ಛತೆ ಕುರಿತು ಅರಿವು ಮೂಡಿಸಬೇಕಾಗುತ್ತದೆ. ವಾರದಲ್ಲಿ ಒಂದು ದಿನವಾದರೂ ಕಸ ಸಂಗ್ರಹಣೆ ಬಗ್ಗೆ ಜಾಗೃತಿ ಮೂಡಿಸುವ ಕೆಲಸಗಳಾಗಬೇಕು. ಸ್ವಚ್ಛ ಮತ್ತು ಸುಂದರ ಶಾಲಾ ವಾತಾವರಣ ನಿರ್ಮಾಣಕ್ಕೆ ಒತ್ತು ನೀಡಬೇಕು. ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಿಸಬೇಕಾಗುತ್ತದೆ. ಗಿಡ ಮರಗಳನ್ನು ಬೆಳೆಸಲು ಮುಂದಾಗಬೇಕು. ಶಾಲಾ ಕಾಲೇಜುಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯಕ್ಕೆ ಹೆಚ್ಚು ಗಮನ ಹ–ರಿಸಬೇಕು. ಶಿಕ್ಷಕರಿಗೆ ಸ್ವಚ್ಛತೆ ಕುರಿತು ಮೊದಲು ತಿಳಿಸಬೇಕು. ಸ್ವಚ್ಛ ಶಾಲೆಗಳಿಗೆ ರಯಾಂಕಿಂಗ್ ನೀಡಬೇಕಾಗುತ್ತದೆ ಎಂದು ಅವರು ಡಿಡಿಪಿಐ ಎಸ್. ಎಸ್.ಕೆಳದಿಮಠ ಅವರಿಗೆ ಸೂಚನೆ ನೀಡಿದರು.

**ಸಾರ್ವಜನಿಕರನ್ನು ಸೆಳೆಯುವ ರೀತಿಯಲ್ಲಿ ಶೌಚಾಲಯ ನಿರ್ಮಿಸಿ** ; ನಗರದಲ್ಲಿ ಹೆಚ್ಚಾಗಿ ಜನರು ಓಡಾಡುವ ಸ್ಥಳಗಳಲ್ಲಿ ಸಾರ್ವಜನಿಕರನ್ನು ಸೆಳೆಯುವ ರೀತಿಯಲ್ಲಿ ಶೌಚಾಲಯ ನಿರ್ಮಿಸಬೇಕು. ಅವುಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಬೇಕಾಗುತ್ತದೆ. ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದರು.

**ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡಿ** : ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರು ಕಸವನ್ನು ಎಸೆಯುತ್ತಾರೆ. ಕಸ ಎಸೆದವ–ರಿಗೆ ದಂಡ ವಿಧಿಸಬೇಕು. ನಿಲ್ದಾಣಗಳಲ್ಲಿ ಅವಶ್ಯತೆಗೆ ಅನುಗುಣವಾಗಿ ಶೌಚಾಲಯಗಳನ್ನು ನಿರ್ಮಿಸಬೇಕು. ಹಸಿ ಕಸ ಮತ್ತು ಒಣ ಕಸ ಸಂಗ್ರಹಣೆಗೆ ಪ್ರತ್ಯೇಕ ಕಸದ ಡಬ್‌ಗಳನ್ನು ಅಳವಡಿಸಬೇಕಿದೆ. ಪ್ರಯಾಣಿಕರಿಗೆ ಸ್ವಚ್ಛತೆ ಕು–ರಿತು ಜಾಗೃತಿ ಮೂಡಿಸಬೇಕು. ಸ್ವಚ್ಛತೆ ಕು–ರಿತು ಸೂಚನಾ ಫಲಕ, ಸ್ಟೀಕರ್ ಗಳನ್ನು ಅಳವಡಿಸಬೇಕು. ಉತ್ತಮ ಬಸ್ ನಿಲ್ದಾಣಗಳನ್ನು ಗುರುತಿಸಿ, ರಯಾಂಕಿಂಗ್ ನೀಡಬೇಕಾಗುತ್ತದೆ ಎಂದು ಅವರು ಹುಬ್ಬಳ್ಳಿ ಗ್ರಾಮಾಂತರ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಹೆಚ್. ರಾಮನಗೌಡರ ಅವರಿಗೆ ಸೂಚನೆ ನೀಡಿದರು.

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ರುದ್ರೇಶ ಘಾಳಿ ಮಾತನಾಡಿ, ಈಗಾಗಲೇ ಮನೆ ಮನೆಗಳಿಂದ ಕಸವನ್ನು ಸಂಗ್ರಹಣೆ ಮಾಡಲಾಗುತ್ತಿದೆ. ಕಸ ಸಂಗ್ರಹ ವಾಹನಗಳನ್ನು ಯಾವ ರೀತಿಯಲ್ಲಿ ಕಾರ್ಯನಿರ್ವಹಣೆ ಮಾಡುತ್ತಿವೆ ಎಂಬುದನ್ನು ಮಾಹಿತಿ ಕಲೆ ಹಾಕಲಾಗುತ್ತಿದೆ. ಅಲ್ಲದೇ ರವಿವಾರದಂದು ಸ್ವಚ್ಛತೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುವುದು. ಬೃಹತ್ ಸ್ವಚ್ಛತಾ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ. ಧಾರ್ಮಿಕ ಸ್ಥಳಗಳು, ಕಲ್ಯಾಣ ಮಂಟಪ, ಹೊಟೇಲ್ ಗಳಲ್ಲಿನ ಘನ ತ್ಯಾಜ್ಯವನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡಲು ಕ್ರಮ ವಹಿಸಲಾಗುವುದು. ಕಸ ಎಸೆಯುವವರಿಗೆ ದಂಡ ವಿಧಿಸಲಾಗುತ್ತಿದೆ. ಸಾರ್ವಜನಿಕರಿಗೆ ಸ್ವಚ್ಛತೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುವುದು. ಒಟ್ಟಿನಲ್ಲಿ ಮುಂದಿನ ಎರಡು ತಿಂಗಳಲ್ಲಿ ಹುಬ್ಬಳ್ಳಿ ಧಾರವಾಡ ಸ್ವಚ್ಛ ನಗರವಾಗಿಸಲು ಶ್ರಮ ವಹಿಸಲಾಗುವುದು ಎಂದು ಅವರು ಸಭೆಗೆ ತಿಳಿಸಿದರು.

ನೈರುತ್ಯ ರೈಲ್ವೆಯ ಎಡಿಆರ್‌ಎಂ ಪ್ರೇಮಚಂದ್ ಮಾತನಾಡಿ, ರೈಲ್ವೆ ಪ್ರಯಾಣಿಕರ ಹಿತದೃಷ್ಟಿಯಿಂದ ಶುದ್ಧ ಕುಡಿಯುವ ನೀರು, ಶೌಚಾಲಯ, ಕಸ ಸಂಗ್ರಹಣೆ ಡಬ್‌ಗಳನ್ನು ಅಳವಡಿಸಲಾಗಿದೆ. ತ್ಯಾಜ್ಯ ನಿರ್ವಹಣೆ ಕುರಿತು ಹಲವಾರು ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿರುತ್ತದೆ. ಕಸ ಎಸೆಯುವವರಿಗೆ ದಂಡ ವಿಧಿಸಲಾಗುತ್ತಿದೆ. ಸೌರ ಶಕ್ತಿ ಬಳಕೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಮಳೆ ನೀರು ಸಂಗ್ರಹಕ್ಕೆ ಒತ್ತು ನೀಡಲಾಗಿರುತ್ತದೆ ಎಂದು ಅವರು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಅಜೀಜ್ ದೇಸಾಯಿ, ಪರಿಸರ ಅಧಿಕಾರಿ ಜಗದೀಶ ಸೇ–ರಿದಂತೆ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವಲಯ ಆಯುಕ್ತರು, ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ತಾಲೂಕು ಮಟ್ಟದ ವಾಲಿಬಾಲ್ ಪಂದ್ಯಾವಳಿ

# ಮೂರನೇ ಬಾರಿಗೆ ಜಿಲ್ಲಾ ಮಟ್ಟಕ್ಕೆ ಆಯ್ಕೆ



**ತೇರದಾಳ**–ರಬಕವಿ ಎಂ.ವಿ. ಪಟ್ಟಣ ಕಾಲೇಜಿನ ಮೈದಾನದಲ್ಲಿ ಬನಹಟ್ಟಿಯ ಗುರುಸಂಗವ್ವ ಬಸಪ್ಪ ಕೊಳಕಿ ಸರಕಾರಿ ಪದವಿ ಪೂರ್ವ ಕಾಲೇಜಿನ ಆಶ್ರಯದಲ್ಲಿ ನಡೆದ ರಬಕವಿ–ಬನಹಟ್ಟಿ ತಾಲೂಕಿನ ಪದವಿಪೂರ್ವ ಕಾಲೇಜುಗಳ ತಾಲೂಕು ಮಟ್ಟದ ಕ್ರೀಡಾಕೂಟದ ವಾಲಿಬಾಲ್ ಪಂದ್ಯಾವಳಿ ಬಾಲಕಿಂ–ಯರ ವಿಭಾಗದಲ್ಲಿ ತೇರದಾಳ ಪಟ್ಟಣದ ಜೆವಿ ಮಂಡಳ ಸ್ವತಂತ್ರ ಪಿಯು ಕಾಲೇಜಿನ ಬಾಲಕಿಂ–ಯರ ತಂಡ ಫೈನಲ್ ಪಂದ್ಯಾವಳಿಯಲ್ಲಿ ಯಲ್ಲಟ್ಟಿಯ ಕೊಣ್ಣೂರ ವಿಜ್ಞಾನ ಕಾಲೇಜಿನ ತಂಡವನ್ನು 25–12 ಅಂಕಗಳಿಂದ ಸೋಲಿಸುವ ಮೂಲಕ ಸತತ ಮೂರನೇ ಬಾರಿಗೆ ಜಿಲ್ಲಾ ಮಟ್ಟಕ್ಕೆ ಆಯ್ಕೆಗೊಂಡ ಕೀರ್ತಿ ಹೊಂದಿದೆ. ಸಾಕಷ್ಟು ಜಿದ್ದಾಜಿದ್ದಿಯಿಂದ ನಡೆದ ಪಂದ್ಯದಲ್ಲಿ ಉಭಯ ತಂಡದ ಆಟಗಾರರು ಪ್ರೇಕ್ಷಕರ ಮನಗೆದ್ದರು.

ಸರ್ವಿಸ್, ಶಾಟ್ ಹೊಡೆಯುತ್ತಿದ್ದಂತೆ ಚಪ್ಪಾಳೆ ತಟ್ಟಿ ಆಟಗಾರರನ್ನು ಹುರುದುಂಬಿಸಿದರು. ಸಾಧನೆಗೈದ ಬಾಲಕಿಯರನ್ನು ಹಾಗೂ ತಂಡಕ್ಕೆ ತರಬೇತಿ ನೀಡಿದ ನೇಮಿನಾಥ ಜಮಖಂಡಿ ಹಾಗೂ ಶೇಖರ ದೊಡವಾಡ ಅವರನ್ನು ಸಂಸ್ಥೆ ಅಧ್ಯಕ್ಷ ಟಿ.ಸಿ. ಪಡಸಲಗಿ ಹಾಗೂ ಕಾರ್ಯದರ್ಶಿ ಡಾ. ಜೆ.ಬಿ. ಆಲಗೂರ ಅಭಿನಂದಿಸಿದ್ದಾರೆ.

# ಎಸ್ಸಿ,ಎಸ್ಟಿ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



**ಮೋಳೆ** ;– ಸಾವಿರಾರು ವರ್ಷಗಳಿಂದ ಶೋಷಣೆಗೆ ಒಳಪಟ್ಟ ಎಸ್.ಸಿ, ಎಸ್ ಟಿ ಸಮುದಾಯಗಳಿಗೆ ಬಾಬಾಸಾಹೇಬ ಡಾ// ಅಂಬೇಡ್ಕರ್ ಅವರು ತಮ್ಮ ಹೋರಾಟದ ಮೂಲಕ ಸ್ವಾಭಿಮಾನದ ಬದುಕನ್ನು ಕಟ್ಟಿಕೊಟ್ಟರು. ಅದರ ಪ್ರತಿಫಲವಾಗಿ ನಮ್ಮ ಸಮುದಾಯವದರು ಶಿಕ್ಷಣವನ್ನು ಮತ್ತು ಸರಕಾರಿ ನೌಕರಿಗಳನ್ನು ಪಡೆಯುವಂತಾಯಿತು ಆದರೆ ಈಗ ಪ್ರಸ್ತುತ ದಿನಮಾನಗಳಲ್ಲಿ ಜಾಗತಿಕರಣ, ಖಾಸಗಿಕರಣದ, ಪರಿಣಾಮವಾಗಿ ಹಾಗೂ ಬಂಡವಾಳ ಶಾಹಿಗಳು ಶಿಕ್ಷಣ ಕ್ಷೇತ್ರವನ್ನು ವ್ಯಾಪಾರಿಕಣಗೊಳಿಸಿದ್ದರಿಂದ ನಮ್ಮ ಸಮೂದಾಯದ ಮಕ್ಕಳ ಶಿಕ್ಷಣ ಮಟ್ಟ ಕುಸಿಯುತ್ತಿದೆ. ಹಾಗೂ ಅವರು ದುಶ್ಚಟಗಳಿಗೆ ಬಲಿಯಾಗುತ್ತಿರುವದ–ರಿಂದ ಅವರನ್ನು ಜಾಗೃತಗೊಳಿಸುವದು ಹಾಗೂ ಸುಶಿಕ್ಷಿತರಾಗುವಂತೆ ಪ್ರೇರೆಪಿಸಲು ಡಾ॥ ಬಿ ಆರ್ ಅಂಬೇಡಕರ ಸಮುದಾಯ ಸಮಿತಿ ಅಥಣಿ ಇವ–ರಿಂದಾ ಅಥಣಿ ಹಾಗೂ ಕಾಗವಾಡ ತಾಲೂಕುಗಳ 2024–25 ನೇ ಸಾಲಿನ ಶೇ 85 ಪ್ರತಿಶತ ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅವರನ್ನು ಉತ್ತೇಜಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಅದಕ್ಕೆ ಅಥಣಿ ಮತ್ತು ಕಾಗವಾಡ ತಾಲ್ಲೂಕಿನ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕು ಎಂದು ಸಮುದಾಯ ಸಮಿತಿಯವರು ಹೇಳಿದರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಸಭೆ ಸೇರಿದ ಡಾ// ಬಿ ಆರ್ ಅಂಬೇಡ್ಕರ್ ಸಮುದಾಯ ಸಮಿತಿ ಸದಸ್ಯರು 2024–25ನೇ ಸಾಲಿನಲ್ಲಿ ಎಸ್ಎಸ್ಎಲ್ಸಿ, ಪಿಯುಸಿ ದ್ವಿತೀಯ ವರ್ಷದಲ್ಲಿ ಉತ್ತೀರ್ಣರಾಗಿ ಶೇ 85 ಪ್ರತಿಶತಗಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಸಮುದಾಯದ ವಿದ್ಯಾರ್ಥಿಗಳಿಗೆ "ಪ್ರತಿಭಾ ಪುರಸ್ಕಾರ–2025" ಕಾರ್ಯಕ್ರಮವನ್ನು ಅಗಷ್ಟ 31ರಂದು ಪಟ್ಟಣದ ಶಿವಣಗಿ ಕಲ್ಯಾಣ ಮಂಟಪದಲ್ಲಿ ಆಯೋಜನೆ ಮಾಡಲಾಗಿದೆ.

ಕಾರ್ಯಕ್ರಮದಲ್ಲಿ ಬಂತೆಜೀ ಅಮರಜೋತಿ ಜ್ಞಾನಭೂಮಿ ಬುದ್ದವಿಹಾರ ಗುಲಬರ್ಗಾದ ಸ್ವಾಮಿಜಿ, ಬಂತೆಜೀ ಜ್ಞಾನಜ್ಯೋತಿ ದಮ್ಮ ಭೂಮಿ ಗೂಗವಾಡ, ಉದ್ಘಾಟಕರಾಗಿ ನಿವೃತ್ತ ಐಎಎಸ್ ಅಧಿಕಾರಿ ಶಂಭು ಕಲ್ಲೋಳಿಕರ, ಐಎಎಸ್ ಅಧಿಕಾರಿ ರಾಹುಲ್ ಸಿಂಧೆ, ಅದ್ಯಕ್ಷತೆ ಐಪಿಎಸ್ ಅಧಿಕಾರಿ ರವಿಂದ್ರ ಗಡಾದೆ ಸೇ–ರಿದಂತೆ ಹಲವು ಜನ ಪ್ರಮುಖ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರುವರು ಎಂದು ಪ್ರಕಟನೆಯಲ್ಲಿ ತಿಳಿಸಿದರು.

## ರಾಷ್ಟ್ರೀಯ ಕ್ರೀಡಾ ದಿನಾಚರಣೆ : ಮೇಜರ್ ಧ್ಯಾನಚಂದ ಭಾವಚಿತ್ರಕ್ಕೆ ಪುಷ್ಪಾರ್ಚನೆ

# ವಿವಿಧ ಕ್ರೀಡಾಕೂಟಗಳಿಗೆ ಸಂಸದ ಗದ್ದಿಗೌಡರ ಚಾಲನೆ

**ಬಾಗಲಕೋಟೆ:** : ಅಂತರರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡ ವಿವಿಧ ಕ್ರೀಡಾಕೂಟಗಳಿಗೆ ಸಂಸದ ಪಿ.ಸಿ.ಗದ್ದಿಗೌಡರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಯೋಗದಲ್ಲಿ ಶುಕ್ರವಾರ ಹಮ್ಮಿಕೊಂಡ ಕ್ರೀಡಾಕೂಟದಲ್ಲಿ ಕ್ರಿಕೇಟ್ ಆಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಭಾರತ ಶ್ರೇಷ್ಠ ಹಾಕಿ ಆಟಗಾರರಲ್ಲಿ ಒಬ್ಬರಾದ ಮೇಜರ್ ಧ್ಯಾನಚಂದ ಅವರ ಜನ್ಮದಿದ ನೆನಪಿಗಾಗಿ ಪ್ರತಿ ವರ್ಷ ಆಗಸ್ಟ 29 ರಂದು ರಾಷ್ಟ್ರೀಯ ಕ್ರೀಡಾ ದಿನಾಚರಣೆನ್ನು ಆಚರಿಸಲಾಗುತ್ತದೆ. ಈ ದಿನ ರಾಷ್ಟ್ರದ ಕ್ರೀಡಾವೀರರನ್ನು ಗೌರವಿಸು ದಿನವಾಗಿದೆ. ಮೇಜರ್ ಧ್ಯಾನಚಂದ ಅವರು ಓಲಂಪಿಕ್ ಚಾಂಪಿಯನ್ ಹಾಕಿಯಲ್ಲಿ ಸತತವಾಗಿ ಮೂರು ಬಾರಿ ಗೆಲುವು ಸಾಧಿಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ ಎಂದರು.




ನಮ್ಮ ದಿನನಿತ್ಯಯದ ಜೀವನ ಶೈಲಿ, ಸರ್ವಾಂಗೀನ ಅಭಿವೃದ್ದಿಗೆ ಕ್ರೀಡೆ ಅವಶ್ಯವಾಗಿದೆ. ಕ್ರೀಡೆ ಮನೋರಂಜನೆಯೊಂದಿಗೆ ಮನೋವಿಕಾಸವನ್ನು ಹೆಚ್ಚಿಸುವ ಕ್ಷೇತ್ರವಾಗಿದ್ದು, ದೈಹಿಕವಾಗಿ ಮತ್ತು ಮಾನಸಿಕವಾಗಿ ಆರೋಗ್ಯವಂತರನ್ನಾಗಿ ಮಾಡುವಲ್ಲಿ ಕ್ರೀಡಾ ಚಟುವಟಿಕೆಗಳ ಪಾತ್ರ ಮಹತ್ವವಾಗಿದೆ. ಆರೋಗ್ಯಕರ ಜೀವನಶೈಲಿ ಮತ್ತು ಶಾಂತಿಯುತ ಜಗತ್ತಿಗೆ ಕ್ರೀಡೆ ಮತ್ತು ದೈಹಿಕ ಚಟುವಟಿಕೆಗಳ ಕೊಡುಗೆ ಅಪಾರವಾಗಿದೆ. ಕ್ರೀಡಾ ಮನೋಭಾವನೆಯನ್ನು ಅಳವಡಿಸಿಕೊಂಡು ಸೋಲು ಗೆಲುವನ್ನು ಸಮಾನವಾಗಿ ತೆಗೆದುಕೊಂಡು ಹೋದಾಗ ಮಾತ್ರ ನಮ್ಮ ಬದುಕು ಚೆನ್ನಾಗಿರಲು ಸಾದ್ಯವೆಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಮೇಜರ್ ಧ್ಯಾನಚಂದ್ ಅವರು ಹಾಕಿ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿ ಚಾಂಪಿಯನ್ ಪಟ್ಟ ಪಡೆದುಕೊಂಡಿದ್ದಾರೆ. ಅದೇ ರೀತಿಯಲ್ಲಿ ಅನೇಕ ಕ್ರೀಡಾಪಟುಗಳು ದೇಶಕ್ಕೆ ಕೀರ್ತಿ ತಂದಿದ್ದಾರೆ. ಕ್ರೀಡೆಗಳು ಕೇವಲ ಮನೋರಂಜನೆ ಮಾತ್ರ ಅಲ್ಲ, ದೈಹಿಕ ಮತ್ತು ಮಾನಸಿಕವಾಗಿ ಸದೃಡರನ್ನಾಗಿ ಮಾಡುತ್ತದೆ. ಜೀವನದಲ್ಲಿ ಶಿಸ್ತು, ಸಹಕಾರ, ಸಹನೆ, ದೈರ್ಯ, ಗುರಿ, ವಿನಯ ಮುಖ್ಯವಾಗಿದ್ದು, ಇವುಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕಿದೆ ಎಂದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಆಚರಿಸುವ ಮುಖ್ಯ ಉದ್ದೇಶದ ದೇಶದ ಉತ್ತಮ ಕ್ರೀಡಾಪಟುಗಳನ್ನು ನೆನಪಿಸಿಕೊಳ್ಳುವ ದಿನವಾಗಿದೆ. ದೈಹಿಕವಾಗಿ, ಮಾನಸಿಕವಾಗಿ ಸದೃಡವಾಗಲು ಕ್ರೀಡೆಗಳಲ್ಲಿ ಭಾಗವಹಿಸಬೇಕು. ಜೀವನದಲ್ಲಿ ಸೋಲು–ಗೆಲುವು ಇದ್ದೇ ಇರುತ್ತದೆ. ಅದನ್ನು ಸಮನಾಗಿ ತೆಗೆದುಕೊಂಡು ಮುಂದೆ ಸಾಗಬೇಕಿದೆ ಎಂದರು.

ಪ್ರಾರಂಭದಲ್ಲಿ ಮೇಜರ್ ಧ್ಯಾನಚಂದ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು. ಅಲ್ಲದೇ ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಆರ್.ಆರ್.ಪಾಟೀಲ ಕ್ರೀಡಾ ದಿನಾಚರಣೆ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಗುರುಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತ–ರಿದ್ದರು.

## ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗೆ ರಾಜ್ಯಸಭಾ ಸದಸ್ಯ ಕಡಾಡಿ ಪೂಜೆ

# ಮಾಜಿ ಸಂಸದ ಅಮರಸಿಂಹ ಪಾಟೀಲ್ ಭಾಗಿ

**ಮೂಡಲಗಿ** : ಶಿಕ್ಷಣ ಎನ್ನುವುದು ಬಹಳ ಮಹತ್ವದ ಸಂಗತಿ ನಾವು ಎಷ್ಟು ಆಸ್ತಿ ಗಳಿಸಿದರು ಕೂಡ ಯಾವುದಾದರೂ ರೂಪದಲ್ಲಿ ಅದನ್ನು ಕಳೆದುಕೊಳ್ಳುತ್ತೇವೆ. ಆದರೆ ಕಲಿತ ವಿದ್ಯೆಯನ್ನು ಸಾಯುವವರೆಗೆ ಕಳೆದುಕೊಳ್ಳಲು ಸಾಧ್ಯವಿಲ್ಲ ಅದನ್ನು ನಾವು ಜೀವನ ಪರ್ಯಂತ ಉಪಯೋಗ ಮಾಡಿಕೊಳ್ಳಬಹುದು ಹೀಗಾಗಿ ಶಿಕ್ಷಣಕ್ಕೆ ಬಹಳ ಮಹತ್ವ ಕೊಡಬೇಕಾಗಿದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು.

ಧರ್ಮಟ್ಟಿ ಗ್ರಾಮದ ಧರ್ಮಟ್ಟಿ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ರೂ 10 ಲಕ್ಷ.ಗಳ ವೆಚ್ಚದಲ್ಲಿ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿ ಅವರು ಮಾತನಾಡಿದರು.

ಈಗಿನ ಉದ್ಯೋಗದಲ್ಲಿ ವಿದ್ಯಾರ್ಥಿಗಳು ಯಾವ ರೀತಿ ಮುಂದುವರಿಯಬೇಕು ಎಂಬ ಜ್ಞಾನವನ್ನು ನೀಡಬೇಕಾಗಿದೆ. ಹೊಸ ರಾಷ್ಟೀಯ ಶಿಕ್ಷಣ ನೀತಿಯಿಂದ ಮಕ್ಕಳು ಅವರ ಆಸಕ್ತಿಗೆ ಅನುಗುಣವಾಗಿ ಶಿಕ್ಷಣ ಪಡೆಯಬಹುದು. ಇದರಿಂದ ಮಾತ್ರ ಬದುಕು ಕಟ್ಟಿಕೊಳ್ಳಲು ಸಾಧ್ಯ. ಹೊಸ ಹೊಸ ಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಓದುವ ಹವ್ಯಾಸವನ್ನು ಬೆಳೆಸಿದರೆ ಹೊರಗಿನ ಜಗತ್ತು ಅರಿಯಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ನೌಕರಿಗೋಸ್ಕರ ವಿದ್ಯಾಭ್ಯಾಸ ಮಾಡದೆ ಒಕ್ಕಲುತನದ ಕಡೆಗೂ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಶಿಕ್ಷಣ ಪ್ರಸಾರಕ ಮಂಡಳಿಯು ಬಹಳ ವರ್ಷಗಳಿಂದ ಧರ್ಮಟ್ಟಿ ಅಂತಹ ಒಂದು ಸಣ್ಣ ಗ್ರಾಮದಲ್ಲಿ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಿ ನಮ್ಮ ಧರ್ಮಟ್ಟಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತಾಪಿ ಮಕ್ಕಳಿಗೆ ಶಿಕ್ಷಣವನ್ನು ನೀಡುತ್ತಿದ್ದು ಆ ಸಂಸ್ಥೆಗೆ ಸುದೈವದಿಂದ ಸಂಸದರ ಅನುದಾನ ನೀಡಿದ್ದೇನೆ ಎಂದರಲ್ಲದೇ ಗ್ರಾಮೀಣ ಪ್ರದೇಶದಲ್ಲಿನ ಶಾಲಾ ಮಕ್ಕಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಹೆಚ್ಚಿನ ಅನುದಾನವನ್ನು ಶಿಕ್ಷಣ ಕ್ಷೇತ್ರಕ್ಕೆ ಒದಗಿಸಲಾಗುತ್ತಿದೆ.

ಕಳೆದ 5 ವರ್ಷಗಳಲ್ಲಿ ನಾನು ಅರಭಾವಿ




ವಿಧಾನಸಭಾ ಕ್ಷೇತ್ರದಲ್ಲಿ 10 ಕೋಟಿಗೂ ಅಧಿಕ ಸಂಸದರ ಅನುದಾನವನ್ನು ವಿನಿಯೋಗ ಮಾಡಿದ್ದೇನೆ. ಮುಂಬರುವ ದಿನಗಳಲ್ಲಿ ಗ್ರಾಮದ ಅಭಿವೃದ್ಧಿ ಕಾರ್ಯಗಳಿಗೆ ನನ್ನ ಸಹಕಾರ ಇದ್ದೇ ಇರುತ್ತದೆ ಗ್ರಾಮಸ್ಥರು ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಪ್ರಸಾರಕ ಮಂಡಳಿಯ ಅಧ್ಯಕ್ಷ ಹಾಗೂ ಮಾಜಿ ಸಂಸದ ಅಮರಸಿಂಹ ಪಾಟೀಲ್ (ಬ್ಯಾ–ರಿಸ್ಟರ್), ಪಿ.ಕೆ.ಪಿ.ಎಸ್ ಅಧ್ಯಕ್ಷ ಸಿಂಧೂರ ಕೊರಕಪೂಜೇರಿ, ಮನೋಹರ ಜೋಶಿ, ಶಿವರುದ್ರಪ್ಪ ಕುಂಬಾರ, ಲಕ್ಷ್ಮಣ ಪೂಜೇರಿ, ಲಕ್ಕಪ್ಪ ಪೂಜೇರಿ, ಕೆಂಚಪ್ಪ ತಿಗಡಿ, ನಿಂಗಪ್ಪ ಸನದಿ, ವಿಠ್ಠಲ ಗೌಡರ, ಲಗಮಪ್ಪ ಗೌಡರ, ಷಣ್ಮುಖ ಕುಂಬಾರ, ಶಿವಾನಂದ ಪಾಟೀಲ, ವಿಠ್ಠಲ ಪೂಜೇರಿ, ಲಕ್ಕಪ್ಪಾ ಬಿ.ಪಾಟೀಲ, ಸಿದ್ದಪ್ಪ ಹಳ್ಳೂರ, ಈರಪ್ಪ ಢವಳೇಶ್ವರ, ಗುರು ಗಂಗಣ್ಣವರ, ಈಶ್ವರ ಗಾಡವಿ, ಪ್ರಾಚಾರ್ಯ ಎಸ್. ಎಸ್ ಚಿಪ್ಪಲಕಟ್ಟಿ ಸೇರಿದಂತೆ ಸ್ಥಳೀಯ ಮುಖಂಡರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಝಡ್.ಇ.ಡಿ.,ಲೀನ್ ಯೋಜನೆ ಹಾಗೂ ರಫ್ತು ಕುರಿತು ಒಂದು ದಿನ ಅರಿವು ಕಾರ್ಯಕ್ರಮ

**ಹಾವೇರಿ.** : ಭಾರತವು ಕೃಷಿ ಪ್ರದಾನ ರಾಷ್ಟವಾಗಿದೆ, ಕೃಷಿಯು ರೈತರ ಬೆನ್ನೆಲುಬಾಗಿದ್ದು ಅತೀ ಹೆಚ್ಚು ಕೃಷಿಯನ್ನೇ ಅವಲಂಬಿಸಿದ್ದೇವೆ ಕೃಷಿಯ ಜೊತೆಗೆ ಕೈಗಾರಿಕೆಗೂ ಮಹತ್ವ ನೀಡುವುದು ಇಂದಿನ ದಿನಮಾನದಲ್ಲಿ ಅತೀ ಮುಖ್ಯವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ್ ದಾನಮ್ಮನವರ ಹೇಳಿದರು.

ನಗರದ ಹೋಟೆಲ್ ಶಿವಾ ರೆಸಿಡೆನ್ಸಿಯಲ್ಲಿ ಶುಕ್ರವಾರ ಕೈಗಾ–ರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾವೇರಿ ಹಾಗೂ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವರ ಸಹಯೋಗದಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" (ಖಂಒಕ) ಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಝಡ್.ಇ.ಡಿ./ಲೀನ್ ಯೋಜನೆ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದು ಚೀನಾ ರಾಷ್ಟವು ಎಂಎಸ್ಎಂಇ ಸೆಕ್ಟರನಲ್ಲಿ ಅತೀ ಹೆಚ್ಚು ಸಾಧನೆ ಮಾಡಿದೆ 6.5 ಕೋಟಿ ಎಂಎಸ್ಎಂಇ ಹೊಂದಿದ್ದಾರೆ ಹಾಗೆಯೇ ನಮ್ಮ ದೇಶದಲ್ಲೂ ಎಂಎಸ್–ಎಂಇ ಗಳಿಗೆ ಹೆಚ್ಚು ಮಹತ್ವ ನೀಡಬೇಕು. ಭಾರತದಲ್ಲಿ ಇಂದು13 ಲಕ್ಷ ಎಂಎಸ್–ಎಂಇ ಗಳು ನೋಂದಣಿಯಾಗಿವೆ, ಹಾವೇರಿ ಜಿಲ್ಲೆಯಿಂದ 8 ಸಾವಿರ ಎಂ–




ಎಸ್ಎಂಇಗಳು ನೋಂದಣಿಯಾಗಿವೆ. ದೇಶದಲ್ಲಿ 600 ಕ್ಕಿಂತಲೂ ಹೆಚ್ಚು ಉತ್ಪನ್ನಗಳನ್ನು ತಯಾರಿಸುತ್ತಾರೆ ಎಕ್ಟಾನಿಕ್ ವಸ್ತುಗಳಿಂದ ಹಿಡಿದು ಔಷದಿ ಉಪಕರಣಗಳವರೆಗೆ ವಸ್ತುಗಳು ಇಂದು ದೇಶಿಯವಾಗಿ ಉತ್ಪಾದನೆಯಾಗುತ್ತಿವೆ ಇಂತಹ ಉತ್ಪನ್ನಗಳನ್ನು ಹೇಗೆ ಮಾರಾಟ ಮಾಡಬೇಕು. ಯಾವ ದೇಶಗಳಲ್ಲಿ ಮಾರಾಟಕ್ಕೆ ಅವಕಾಶಗಳಿವೆ, ರಿಯಾಯಿತಿಗಳು ಏನು, ಉತ್ಪನ್ನಗಳ ಕೋಡ್, ಗುಣಮಟ್ಟದ ಪ್ಯಾಕಿಂ–ಗ್ ವಿಧಾನ, ಪರವಾನಗಿ ಇವೆಲ್ಲವುಗಳ ಅರಿವನ್ನು ಎಂಎಸ್ಎಂಇ ಗಳು ಉದ್ಯಮಿಗಳಿಗೆ ಮೂಡಿಸಲು ನೇರವಾಗಿವೆ ಎಂದರು.

ಎಂಎಸ್ಎಂಇ ಗಳಿಂದ ಇಂದು ದೇಶದಲ್ಲಿ ಸಾಕಷ್ಟು ಅವಕಾಶಗಳಿದ್ದು ಇಲ್ಲಿ ಜನರು ಉದ್ಯೋಗವಕಾಶಗಳನ್ನು ಹೆಚ್ಚಿಗೆ ಪಡೆದುಕೊಳ್ಳಬಹುದು ಬೃಹತ್ ಉದ್ಯಮಗಳಲ್ಲಿ ನಾವುಗಳು ಅಷ್ಟಾಗಿ ಉದ್ಯೋಗಗಳನ್ನು ಪಡೆದುಕೊಳ್ಳಲು ಸಾಧ್ಯವಾಗುವುದಿಲ್ಲ ಇಂತಹ ಉದ್ಯಮಗಳಲ್ಲಿ ಆಟೋ ಮಷೀನ್ ಬಳಕೆ ಹೆಚ್ಚಿಗೆ ಇರುವುದರಿಂದ ಮಾನವ ಸಂಪನ್ಮೂಲಗಳ ಬಳಕೆ ತುಂಬಾನೇ ಕಡಿಮೆ ಇರುತ್ತದೆ ಹೀಗಾಗಿ ಹೆಚ್ಚು ಹೆಚ್ಚು ಎಂಎಸ್ಎಂಇ ಗಳನ್ನು ಸ್ಥಾಪಿಸಿಕೊಳ್ಳುವುದರ ಮೂಲಕ ಕೈಗಾ–ರಿಕಾ ವಲಯಗಳನ್ನು ಅಭಿವೃದ್ಧಿ ಪಡಿಸಿಕೊಳ್ಳಬೇಕು ಎಂದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷರಾದ ರವಿ ಮೇನಸಿನಕಾಯಿ ಮಾತನಾಡಿ, ಲೀನ್ ಯೋಜನೆಗಳು ಕೈಗಾ–ರಿಕೋದ್ಯಮ ಹಾಗೂ ಇತರೆ ವ್ಯಾಪಾ–ರಿಗಳಿಗೆ ಸಹಕಾರಿಯಾಗಿದೆ. ಜಿಲ್ಲೆಯ ಉದ್ಯಮಿಗಳು ಇದರ ಸಂಪೂರ್ಣ ಲಾಭ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಅಶೋಕ ಪ್ಯಾಟಿ ಮಾತನಾಡಿ, ಲೀನ್ ಯೋಜನೆಗಳು ಕೈಗಾರಿಕೆ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಸೂಕ್ಷ್ಮ ಸಣ್ಣ ಹಾಗೂ ಮಧ್ಯಮ ಉದ್ಯಮಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವಲ್ಲಿ ಲೀನ್ ಹೆಚ್ಚು ಅನುಕೂಲವಾಗಿದೆ ಎಂದರು. ಬಳಿಕ ಧಾರವಾಡ ವಿ ಟಿ ಪಿ ಸಿ ಉಪ ನಿರ್ದೇಶಕರಾದ ಟಿ ಎಸ್ ಮಲ್ಲಿಕಾರ್ಜುನ ಮಾತನಾಡಿ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರವು ಕರ್ನಾಟಕ ಸರ್ಕಾರದ ಅಂಗ ಸಂಸ್ಥೆಯಾಗಿದೆ ಇದು ಕರ್ನಾಟಕದಲ್ಲಿ ರಫ್ತು ಉತ್ತೇಜನಕ್ಕೆ ಪ್ರಾಮುಖ್ಯತೆಯನ್ನು ನೀಡುತ್ತದೆ ಇಡೀ ಭರದಲ್ಲಿಯೇ ಕರ್ನಾಟಕವು ಐ ಟಿ ಮತ್ತು ಸರ್ವಿಸ್ ರಫ್ತುವಿನಲ್ಲಿ ಪ್ರಥಮ ಸ್ಥಾನದಲ್ಲಿದೆ. ದೇಶದ ಒಟ್ಟು ರಫ್ತುವಿನಲ್ಲಿ ಕರ್ನಾಟಕವು ಪ್ರತಿಶತ 40% ರಫ್ತು ಐ ಟಿ ಮತ್ತು ಸರ್ವಿಸ್ ಗಳನ್ನು ರಫ್ತು ಮಾಡುತ್ತದೆ. ಇನ್ನೂ ವಸ್ತುಗಳ ರಫ್ತುವಿನಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ 4 ನೇ ಸ್ಥಾನದಲ್ಲಿದೆ. ರಾಜ್ಯದ 31 ಜಿಲ್ಲೆಗಳಿಂದಲೂ ವಿವಿಧ ಉತ್ಪನ್ನಗಳನ್ನು ರಫ್ತು ಮಾಡಲಾಗುತ್ತಿದೆ. 2024–25 ನೇ ಸಾಲಿನಲ್ಲಿ ಹಾವೇರಿ ಜಿಲ್ಲೆಯಿಂದ ರೂ. 570 ಕೋಟಿ ಮೊತ್ತದ ಉತ್ಪನ್ನಗಳನ್ನು ರಫ್ತು ಮಾಡಲಾಗಿದೆ ಜಿಲ್ಲೆಯಿಂದ ಮುಖ್ಯವಾಗಿ ಚಿಲ್ಲಿ ಪೌಡರ್, ತರಕಾರಿ ಮುಂತಾದ ಪದಾರ್ಥಗಳನ್ನು ರಫ್ತು ಮಾಡಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಗ್ರಣೀಯ ವ್ಯವಸ್ಥಾಪಕರು ಪ್ರಭುದೇವ ಎಸ್. ಜಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಸಹಾಯಕ ಪ್ರಧಾನ ವ್ಯವಸ್ಥಾಕ ಏನ್ ಭಾಸ್ಕರ್, ಜಂಟಿ ಕಾರ್ಯದರ್ಶಿ ಕೇಶವ ಮೂರ್ತಿ, ಕಾಸಿಯಾ ಉಪಾಧ್ಯಕ್ಷ ನಿಂಗಣ್ಣ ಎಸ್ ಬಿರಾದಾರ, ಕಾಸಿಯ ಪ್ಯಾನೆಲ್ ಅಧ್ಯಕ್ಷರಾದ ಗಿರೀಶ್ ಎಫ್ ನಲವಡಿ, ಸಿ ಹೆಚ್ ಅಂಗಡಿ ಹಾಗೂ ಇತರರು ಉಪಸ್ಥಿತರಿದ್ದರು.

# ಭೈರಪ್ಪನವರದ್ದು ಸ್ವಯಂಭು ವ್ಯಕ್ತಿತ್ವ : ಶಾಸ್ತ್ರಿ

**ಬೆಳಗಾವಿ** – ರಂಗಸಂಪದ ಬೆಳಗಾವಿಯ ತಂಡದ ಹೊಸ ಆವಿಷ್ಕಾರ ಸಮಾಸದ ಎರಡನೆಯ ಕಂತು ಖ್ಯಾತ ಕಾದಂಬ–ರಿಕಾರ ಡಾ. ಎಸ್ ಎಲ್. ಭೈರಪ್ಪ ಅವರ ಭಿತ್ತಿ ಕುರಿತು ಚರ್ಚೆಯು ಲೇಖಕಿ ಶ್ರೀಮತಿ ದೀಪಿಕಾ ಚಾಟೆ ವಡಗಾವಿಯಲ್ಲಿರುವ ಅವರ ಮನೆಯಲ್ಲಿ ಜರುಗಿತು.

ಹಿರಿಯ ಪತ್ರಕರ್ತ ಲೇಖಕ ಎಲ.ಎಸ.ಶಾಸ್ತ್ರೀ ಅವರು ಸುಮಾರು ಭಿತ್ತಿ ಪುಸ್ತಕದ ಬಗ್ಗೆ ಮಾತನಾಡುತ್ತ ಭೈರಪ್ಪನವರದ್ದು ಸ್ವಯಂಭು ವ್ಯಕ್ತಿತ್ವ ಅಂದರೆ ತಮ್ಮನ್ನು ತಾವೇ ಕಟೆದುಕೊಂಡ ಶಿಲ್ಪಿ ಅವರು. ತಮ್ಮ ಬದುಕನ್ನು ತಾವೆ ಗುರುತಿಸಿಕೊಂಡವರು. ಭಿತ್ತಿಯಲ್ಲಿ ಯಾವುದೇ ವೈಭವಿಕರಣವಿಲ್ಲ. ಸತ್ಯವನ್ನು ಬಿಚ್ಚಿಡುತ್ತ ಹೋಗಿದ್ದಾರೆ ಎಂದು ಹೇಳಿದರು.

ಮುಂದೆ ಮಾತನಾಡುತ್ತ ಶಾಸ್ತ್ರಿಯವರು ಭೈರಪ್ಪನವರ ಬರವಣಿಗೆ ಹಿಂದೆ ಪೂರ್ವ ತಯಾರಿ ಬಹಳವಿರುತ್ತಿತ್ತು. ಯಾರೂ ಪ್ರಶ್ನಿಸದಂತೆ ಆಧಾರವನ್ನಿಟ್ಟುಕೊಂಡು ಅವರು ಬರೆಯುತ್ತ ಹೋಗುತ್ತಾರೆ. ಜನಪ್ರಿಯತೆಯ ತುತ್ತತುದಿಯನ್ನೇರಿದ ಸಾಹಿತಿಯೆಂದರೆ ಭೈರಪ್ಪನವರು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಲೇಖಕಿ ಚಾಟೆಯವರ ಸ್ವಾತಂತ್ರ್ಯ ಹೋರಾಟದಲ್ಲಿ ಮಹಿಳೆಯರ ಯೋಗದಾನ ಕೃತಿಯನ್ನು ಎಲ್. ಎಸ್. ಶಾಸ್ತ್ರೀಯವರು ಬಿಡುಗಡೆಗೊಳಿಸಿದರು.

ಡಾ. ಅರವಿಂದ ಕುಲಕರ್ಣಿಯವರು ತಮ್ಮ




ಪ್ರಾಸ್ತಾವಿಕ ನುಡಿಯಲ್ಲಿ ಇದು ಸಮಾಸದ ಎರಡನೇ ತಿಂಗಳ ಕಾರ್ಯಕ್ರಮ. ಈ ತಿಂಗಳು ಡಾ. ಭೈರಪ್ಪನವರ ಆತ್ಮ ಚರಿತ್ರೆ ಭಿತ್ತಿ ಕುರಿತು ಚರ್ಚೆಯನ್ನು ಇಟ್ಟುಕೊಂಡಿದ್ದೇವೆ. ಸಾಹಿತಿಗಳನ್ನು ಸಾಹಿತ್ಯಾಸಕ್ತರನ್ನ ಒಂದೆಡೆ ಸೇರಿಸುವುದೇ ಈ ಸಂಸ್ಥೆಯ ಮುಖ್ಯ ಉದ್ದೇಶವಾಗಿದ್ದು ಈ ಕುರಿತಂತೆ ಪ್ರತಿಕ್ರಿಯೆ ಚೆನ್ನಾಗಿದೆ ಎಂದು ಹೇಳಿದರು.

ಡಾ. ಭೈರಪ್ಪನವರ ಭಿತ್ತಿ ಕುರಿತಂತೆ ಶ್ರೀಮತಿ ಜ್ಯೋತಿ ಬದಾಮಿ, ವಂದನಾ ಮಳಗಿ, ದೀಪಿಕಾ ಚಾಟೆ, ಶರಣಯ್ಯ ಮಠಪತಿ, ಮಂಜುನಾಥ ಕಲಾಲ, ಸತೀಶ ಕುಲಕರ್ಣಿಯವರು ತಮ್ಮ ಅನಿಸಿಕೆಗಳನ್ನು ಸಂಕ್ಷಿಪ್ತವಾಗಿ ಹಂಚಿಕೊಂಡರು. ಚಂದ್ರಶೇಖರ ನವಲಗುಂದ ಅವರು ಬರೆದ ಡಾ. ಭೈರಪ್ಪನವರ ಕುರಿತಾದ ಬರೆಹವನ್ನು ಶ್ರೀಮತಿ ಪದ್ಮಾ ಕುಲಕರ್ಣಿಯವರು ವಾಚಿಸಿದರು. ಶ್ರೀಮತಿ ದೀಪಿಕಾ ಚಾಟೆ ಸ್ವಾಗತಿಸಿದರು ಶ್ರೀ ಗುರುನಾಥ ಕುಲಕರ್ಣಿ ವಂದಿಸಿದರು.

# ನೆರೆ ಬಂದು ಹೋದ ಮೇಲೆ ಹುಟ್ಟಿದ ಸವಾಲು



–ಮಲ್ಲಿಕಾರ್ಜುನ ತುಂಗಳ

**ರಬಕವಿ–ಬನಹಟ್ಟಿ,** : ಕೃಷ್ಣೆಯ ಪ್ರವಾಹ ಈಗ ಶಾಂತವಾದರೂ ಅದು ಮಾಡಿ ಹೋದ ಹಾನಿಯ ಕರಾಳ ಛಾಯೆ ಕಣ್ಣಿಗೆ ರಾಚುತ್ತಿದೆ. ನದಿ ನೀತು ಹಿಂದೆ ಸರಿದರೂ ಪ್ರವಾಹ ಸಂತ್ರಸ್ಥರ ಬದುಕು ಹಾಗು ಕೃಷಿ ಭೂಮಿ ಹಾನಿ ಹೇಳತೀರದು.

ಆಮೀನುಗಳಿವೆ ನುಗ್ಗಿದ ನೀರು ಎಲ್ಲೆಂದರಲ್ಲಿ ತನ್ನ ಕರಾಳತೆ ಬಿಟ್ಟು ಹೋಗಿದೆ. ಸತತ ಮಳೆಯಿಂದ ಸಂಕಷ್ಟದ ಬದುಕಿಗೆ ತಳ್ಳಲ್ಪಟ್ಟಿದ್ದ ರೈತರಿಗೆ, ಪ್ರವಾಹವು ಗಾಯದ ಮೇಲೆ ಬರೆ ಎಳೆದಿದೆ. ರಬಕವಿ–ಬನಹಟ್ಟಿ ತಾಲೂಕಿನ ಕೃಷ್ಣಾ ನದಿ ತಟದಲ್ಲಿನ ಗ್ರಾಮಗಳಲ್ಲಿನ ಸಾವಿರಾರು ಎಕರೆಯಷ್ಟು ಪ್ರದೇಶದ ಭೂಮಿಯಲ್ಲಿ ಬೆಳೆ ಅರ್ಧಮರ್ಧ ನಾಸವಾಗಿದೆ. ಪ್ರವಾಹ ಹೊತ್ತು ತಂದ ಕಸಕಡ್ಡಿ ಹಾಗೂ ಹೂಳಿನಿಂದ ಜಮೀನುಗಳು ತುಂಬಿ ಹೋಗಿದ್ದು, ಸ್ವಚ್ಛಗೊಳಿಸಲು ರೈತರು ಹರಸಾಹ ಪಡುತ್ತಿದ್ದಾರೆ.

ನೂರಾರು ಎಕರೆ ಪ್ರದೇಶದಲ್ಲಿ ಬಿತತಲಾಗಿದ್ದ ಬೆಳೆ ನೀರು ಪಲಾಗಿವೆ. ಇನ್ನು ಕೆಲವರು ನೀರಲ್ಲಿ ನಿಂತು ಕೊಳೆತು ಹೋಗಿವೆ.

ಮಳೆ ನಿಂತು ವಾರ ಕಳೆದರೂ ಕಪ್ಪು ನೆಲದ ಹಸಿ ತೇವಾಂಶ ಇನ್ನೂ ಆರಿಲ್ಲ. ಜಮೀನುಗಳಲ್ಲಿ ಕಾಲಿಡಲು ಸಾಧ್ಯವಾಗದ ಪರಿಸ್ಥಿತಿ ಇದ್ದು, ಬಿತ್ತನೆಗೆ ತೀವ್ರ ಸಮಸ್ಯೆಯುಂಟಾಗಿದೆ.

## ಸಾರ್ವಜನಿಕರು ಕಾನೂನಿನ ವಿಷಯಗಳನ್ನು ತಿಳಿದುಕೊಳ್ಳಬೇಕು

**ಇಂಡಿ** : ಸಮಾಜದಲ್ಲಿ ಪ್ರತಿಯೊಂದು ವಿಷಯವೂ ಕಾನೂನಿನ ಅಡಿಯಲ್ಲಿ ನಡೆಯುತ್ತಿದೆ. ಸಾರ್ವಜನಿಕರು ಕಾನೂನಿನ ವಿಷಯಗಳನ್ನು ತಿಳಿದುಕೊಳ್ಳಬೇಕು. ಲೋಕ ಅದಾಲತ ಜನತಾ ನ್ಯಾಯಾಲಯದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹಿರಿಯ ದಿವಾನಿ ನ್ಯಾಯಾಧೀಶ ಸದಸ್ಯ ಕಾರ್ಯದರ್ಶಿ ಎ.ಎಸ್.ಹಾಗರಗಿ ಹೇಳಿದರು.

ಪಟ್ಟಣದ ಆಡಳಿತ ಸೌಧದಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ,ವಕೀಲರ ಸಂಘ, ಖಾಯಂ ಜನತಾ ನ್ಯಾಯಾಲಯ ಕಲಬುರಗಿ, ಹಾಗೂ ತಾಲೂಕಾ ಆಡಳಿತ ಇಂಡಿ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಶಾಶ್ವತ ಲೋಕ ಅದಾಲತ ಕಾರ್ಯಕ್ರಮದಲ್ಲಿ ಮಾತನಾಡಿದರು. ಕಂದಾಯ ಉಪ ವಿಭಾಗಾಧಿಕಾರಿ ಅನುರಾಧಾ ವಸ್ತ್ರದ ಮಾತನಾಡಿ ಸಾರ್ವಜನಿಕರು ನ್ಯಾಯಾಗಳಿಗೆ ಅಲೆಯುವದನ್ನು ಬಿಟ್ಟು ರಾಜಿ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಜನತಾ ನ್ಯಾಯಾಲಯದಲ್ಲಿ ಇತ್ಯರ್ಥ ಪಡಿಸಿಕೊಳ್ಳುವ ಮೂಲಕ ಪ್ರೀತಿ ವಿಶ್ವಾಸದಿಂದ ಜೀವನ ನಡೆಸಬೇಕು . ಸಾರ್ವಜನಿಕರು ಅಗತ್ಯ



ನಾಗರಿಕ ಕಾನೂನುಗಳನ್ನು ತಿಳಿದುಕೊಳ್ಳಬೇಕು ಎಂದರು. ಸದಸ್ಯರು ಖಾಯಂ ಜನತಾ ನ್ಯಾಯಾಲಯ ಕಲಬುರಗಿಯ ವಿಜಯ ವಿಠ್ಠಲ, ಹಿರಿಯ ದಿವಾನಿ ನ್ಯಾಯಾಧೀಶರು ಇಂಡಿಯ ಕೊಟ್ರೆಪ್ಪ ಕಾಂಬಳೆ,ತಹಸೀಲ್ದಾರ ಬಿ.ಎಸ್.ಕಡಕಬಾವಿ ಬಸವರಾಜ ಗೊರನಾಳ ಮಾತನಾಡಿದರು.

ನ್ಯಾಯವಾದಿ ಜಿ.ಎಸ್.ಜೋಶಿ ಉಪನ್ಯಾಸ ನೀಡಿದರು. ವೇದಿಕೆಯ ಮೇಲೆ ಕಿರಿಯ ದಿವಾಣಿ ನ್ಯಾಯಾಧೀಶ ಸುನೀಲಕುಮಾರ ಹೆಚ್ಚುವರಿ ದಿವಾಣಿ ನ್ಯಾಯಾಧೀಶ ವಿಕಾಸ ದಳವಾಯಿ, ವಕೀಲರ ಸಂಘದ ಅಧ್ಯಕ್ಷ ಎಸ್.ಬಿ.ಬೂದಿಹಾಳ, ಇಒ ಬಿ.ಎಚ್.ಕನ್ನೂರ, ನ್ಯಾಯವಾದಿಗಳಾದ ಅಶೋಕ ಗಜಾಕೋಶ, ಎನ್.ಕೆ.ನಾಡಪುರೋಹಿತ, ಎಸ್. ಆರ್.ಬಿರಾದಾರ, ಸರಕಾರಿ ಅಭಿಯೋಜಕ ರಾಖಿ ಕಟ್ಟಿಮನಿ, ಐ.ಕೆ. ಗಚ್ಚಿನಮಹಲ, ಮಲ್ಲೆಶಿ ಎಂಬತನಾಳ, ಮತ್ತಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :174, Postal Reg No. PMG/KA/NK/BM/135/25-27 / POST AT Vantamury Colony Post Office